ಸಂಪುಟ: 22, ಸಂಚಿಕೆ: 35, ಪುಟಗಳು: 8, ಗುರುವಾರ, 14 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




### ಸುಭಾಷಿತ

ಕಲಿಯಲು ತಿರಸ್ಕರಿಸುವುದು, ಜೀವಿಸಲು ತಿರಸ್ಕರಿಸುವುದಕ್ಕೆ ಸಮನಾದದು.

। ರಾಮಕೃಷ್ಣ ಪರಮ ಹಂಸ

### ಪಂಚಾಂಗ

(ಗುರುವಾರ 14, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ತ್ರಯೋದಶಿ / ಉಪರಿ ಚತುರ್ದಶಿ,
- ಗುರುವಾರ, ಅಶ್ವಿನಿ ನಕ್ಷತ್ರ
- ರಾಹುಕಾಲ: 01:35 ರಿಂದ 03:02
- ಗುಳಿಕಕಾಲ: 09:14 ರಿಂದ 10:41
- ಯಮಗಂಡಕಾಲ: 06:21 ರಿಂದ 07:47

## ಸಂಕ್ಷಿಪ್ತ ಸುದ್ದಿ

### ಮೈಸೂರು ಹುಲಿ ಟಿಪ್ಪು ಸುಲ್ತಾನ್ ಖಡ್ಗ 3.4 ಕೋಟಿಗೆ ಹರಾಜು



**ಲಂಡನ್:** ಮೈಸೂರು ಹುಲಿ ಟಿಪ್ಪು ಸುಲ್ತಾನ್‌ಗೆ ಸೇರಿದ ಖಡ್ಗವೊಂದು ಲಂಡನ್‌ನಲ್ಲಿ 3.4 ಕೋಟಿ ರೂ.ಗೆ ಹರಾಜಾಗಿದೆ. ಈ ಖಡ್ಗ ಟಿಪ್ಪು ಸುಲ್ತಾನ್‌ನ ವೈಯಕ್ತಿಕ ಶಸ್ತ್ರಾಗಾರದ ಭಾಗವಾಗಿತ್ತು.

ಬೋನ್‌ಹ್ಯಾಮ್ ಹರಾಜು ಸಂಸ್ಥೆ ಈ ಮಾಹಿತಿಯನ್ನು ಹಂಚಿಕೊಂಡಿದೆ. ಟಿಪ್ಪು 1799 ರಲ್ಲಿ ಬ್ರಿಟಿಷರ ವಿರುದ್ಧದ ಯುದ್ಧದಲ್ಲಿ ಸೋತ ನಂತರ ಆತನ ಖಡ್ಗವನ್ನು ಆಗಿನ ಬ್ರಿಟಿಷ್ ಸೇನೆಯ ಕ್ಯಾಪ್ಟನ್ ಜೇಮ್ಸ್ ಆಂಡ್ರ್ಯೂ ಡಿಕ್ ಎಂಬಾತನಿಗೆ ಉಡುಗೊರೆಯಾಗಿ ನೀಡಿದ್ದರು. ಈ ಖಡ್ಗದ ಮೂಲವನ್ನು ಸೆರಿಂಗಪಟ್ಟಂ ಕದನದಲ್ಲಿ ಗುರುತಿಸಬಹುದು. 'ಸ್ಟೀಲ್ ತಲ್ವಾರ್' ಮೈಸೂರಿನ ವಿಶಿಷ್ಟ ಲಕ್ಷಣವಾದ 'ಬುಬ್ರಿ (ಟೈಗರ್ ಸ್ಟ್ರೈಪ್)' ಅಲಂಕಾರವನ್ನು ಖಡ್ಗ ಹೊಂದಿದೆ. ಪುಟ 2

### ಪತ್ನಿ ಜೊತೆ ರಿಯಲ್ ಎಸ್ಟೇಟ್ ಉದ್ಯಮಿ ನೇಣಿಗೆ ಶರಣು



**ಮಡಿಕೇರಿ:** ಪತ್ನಿ ಜೊತೆ ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬರು ನೇಣಿಗೆ ಶರಣಾದ ಘಟನೆ ಪಿರಿಯಾಪಟ್ಟಣ ತಾಲೂಕಿನಲ್ಲಿ ನಡೆದಿದೆ. ಕೊಪ್ಪ ನಿವಾಸಿ ಜಯಣ್ಣ ಅವರ ಪುತ್ರ ಸುರೇಶ್ (40) ಹಾಗೂ ಅವರ ಪತ್ನಿ ಪಲ್ಲವಿ (28) ಮೃತ ದಂಪತಿ. ಬೈಲುಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯ ದೊಡ್ಡಹೊನ್ನೂರು ಕಾವಲ್‌ನಲ್ಲಿರುವ ಜಮೀನಿನ ಹಳೆಯ ಖಾಲಿ ಮನೆಯೊಂದರಲ್ಲಿ ದಂಪತಿ ನೇಣಿಗೆ ಶರಣಾಗಿದ್ದಾರೆ. ರಿಯಲ್ ಎಸ್ಟೇಟ್ ಮಾಫಿಯಾದ ಒತ್ತಡ, ಉದ್ಯಮದಲ್ಲಿ ನಷ್ಟ, ಸಾಲಗಾರರ ಕಿರುಕುಳದಿಂದ ಆತ್ಮಹತ್ಯೆಗೆ ಶರಣಾಗಿರುವ ಶಂಕೆ ವ್ಯಕ್ತವಾಗಿದೆ. ಸುರೇಶ್ ಅವರು ಡೆತ್ ನೋಟ್ ಬರೆದಿದ್ದು ಸಾವಿಗೆ ಕೆಲವರ ಹೆಸರನ್ನು ಉಲ್ಲೇಖ ಮಾಡಿದ್ದಾರೆ. ಪುಟ 2

### ಜಮೀರ್ ವಿರುದ್ಧ ಅವಹೇಳನಕಾರಿ ಪೋಸ್ಟ್

# ಪುನೀತ್ ಕೆರೆಹಳ್ಳಿ ಬಂಧನ

**ಬೆಂಗಳೂರು:** ಸಚಿವ ಜಮೀರ್ ಅಹ್ಮದ್ ಅವರಿಗೆ ಜೀವ ಬೆದರಿಕೆ ಹಾಕಿದ ಆರೋಪದಲ್ಲಿ ಹಿಂದೂಪರ ಸಂಘಟನೆ ಕಾರ್ಯಕರ್ತ ಪುನೀತ್ ಕೆರೆಹಳ್ಳಿಗೆ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಲಾಗಿದೆ.

ಪುನೀತ್ ಕೆರೆಹಳ್ಳಿ ವಿರುದ್ಧ ಚಾಮರಾಜಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅದರ ಬೆನ್ನಲ್ಲೇ ಆರೋಪಿಯನ್ನು ಬಂಧಿಸಲಾಯಿತು. ಬಳಿಕ ಕಿಮ್ಸ್ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆ ಬಳಿಕ ನ್ಯಾಯಾದೀಶರ ಮುಂದೆ ಹಾಜರು ಪಡಿಸಲಾಗಿತ್ತು. ಆರೋಪಿಗೆ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಿ ನ್ಯಾಯಾಧೀಶರು ಆದೇಶ ಹೊರಡಿಸಿದ್ದಾರೆ.

ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಕರಿಯ ಎಂದು ಜಮೀರ್ ಅಹ್ಮದ್ ನಿಂದಿಸಿದ್ದರು. ಇದೇ ಹೇಳಿಕೆಯನ್ನು ಮುಂದಿಟ್ಟು ಫೇಸ್‌ಬುಕ್ ಲೈವ್‌ನಲ್ಲಿ ಜಮೀರ್ ವಿರುದ್ಧ ಪುನೀತ್ ಕೆರೆಹಳ್ಳಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ. ಜೊತೆಗೆ ಸಚಿವರಿಗೆ ಬೆದರಿಕೆ ಹಾಕಿದ್ದ.

'ಕುಮಾರಸ್ವಾಮಿ ಅವರಿಗೆ ಮತ್ತೊಮ್ಮೆ ಕರಿಯ ಎಂದು ಕರೆದರೆ ನೀನು ಹಾಸನ ಹಾಗೂ ಮಂಡ್ಯ ಜಿಲ್ಲೆಗಳ ಗಡಿ ದಾಟುವುದಿಲ್ಲ. ನಾನೇ ನಿನಗೆ ಕೊನೆಯಾಡುತ್ತೇನೆ' ಎಂದು ಸಚಿವ ಜಮೀರ್ ಅವರಿಗೆ ಜೀವ ಬೆದರಿಕೆ ಒಡ್ಡಿದ್ದ. ಈ ಸಂಬಂಧ ಸಚಿವರ ಆಪ್ತ ಸಹಾಯ ಬಿ.ಎಸ್. ಅಶೋಕ್ ಅವರು ದೂರು ನೀಡಿದ್ದರು. ದೂರಿನ ಮೇರೆಗೆ ಕೆರೆಹಳ್ಳಿಯನ್ನು ಪೊಲೀಸರು ಬಂಧಿಸಿದ್ದರು.





ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಜಮೀರ್ ಅಹ್ಮದ್ ಖಾನ್ 'ಕಾಲಿಯಾ' ಪದ ಬಳಕೆ ಮಾಡಿದ್ದು ರಾಜ್ಯಾದ್ಯಂತ ಕಿಡಿ ಹೊತ್ತಿಸಿದೆ. ಇದೇ ವಿಚಾರವಾಗಿ ಪುನೀತ್ ಕೆರೆಹಳ್ಳಿ ಜಮೀರ್ ಅಹ್ಮದ್ ಖಾನ್ ವಿರುದ್ಧ ಧರ್ಮ, ಜಾತಿ ಹೆಸರಿನಲ್ಲಿ ನಿಂದನೆ ಆರೋಪ ಮಾಡಲಾಗಿದೆ. ಹೀಗಾಗಿ ಅವರ ವಿರುದ್ಧ ಇದೀಗ ಎಫ್‌ಐಆರ್ ದಾಖಲಿಸಲಾಗಿದೆ.

ಧರ್ಮ ಧರ್ಮಗಳ ನಡುವೆ ಸಂಘರ್ಷ ಸೃಷ್ಟಿಸುವ ಹೇಳಿಕೆ ನೀಡಿದ್ದಾರೆ. ಅವಾಚ್ಯ ಶಬ್ದಗಳಿಂದ ನಿಂದಿದ್ದು, ಜೊತೆಗೆ ಪ್ರಾಣ ಬೆದರಿಕೆ ಕೂಡ ಹಾಕಿದ್ದಾರೆ. ಹಾಗಾಗಿ ಕೂಡಲೇ ಎಫ್ ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಎಂದು ಜಮೀರ್ ಅಹ್ಮದ್ ಆಪ್ತ ಕಾರ್ಯದರ್ಶಿ ದೂರಿನಲ್ಲಿ ಉಲ್ಲೇಖಿಸಿದ್ದರು. ಪುಟ 2

## ಮುಡಾದಲ್ಲಿ ಭಾರೀ ಅಕ್ರಮ

### 2 ಸಾವಿರ ಸೈಟ್‌ಗಳಿಗೆ ಮೂಲ ದಾಖಲೆ ಇಲ್ಲ

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಂಚಿಕೆ ಮಾಡಿದ ಸುಮಾರು 2 ಸಾವಿರ ಸೈಟ್‌ಗಳಿಗೆ ಮೂಲ ದಾಖಲೆ ಇಲ್ಲದೇ ಇರುವ ವಿಚಾರ ಬೆಳಕಿಗೆ ಬಂದಿದೆ. ಹೌದು. ಮುಡಾ ಹಂಚಿಕೆ ಮಾಡಿದ 5 ಸಾವಿರ ಸೈಟ್‌ಗಳಲ್ಲಿ ಸುಮಾರು 2 ಸಾವಿರ ಸೈಟ್‌ಗಳಿಗೆ ಯಾವುದೇ ಬಾಂಡ್ ಪೇಪರ್‌ಗಳೇ ಇಲ್ಲದಿರುವ ವಿಚಾರ ಜಾರಿ ನಿರ್ದೇಶನಾಲಯದ ತನಿಖೆಯ ವೇಳೆ ಬೆಳಕಿಗೆ ಬಂದಿದೆ. ಈ ಮೂಲಕ ಮುಡಾದಲ್ಲಿ ಬಹುದೊಡ್ಡ ಭ್ರಷ್ಟಾಚಾರ ನಡೆದಿರುವುದು ಸಾಬೀತಾಗಿದೆ.

50:50 ಅನುಪಾತವನ್ನೇ ವರದಾನ ಮಾಡಿಕೊಂಡ ಖದೀಮರು 1950 ಸೈಟ್‌ಗಳನ್ನು ಪಡೆದಿದ್ದಾರೆ. 1950 ಸೈಟ್‌ಗಳ ಪೈಕಿ ಒಬ್ಬೊಬ್ಬರು 30, 40, 50 ಸೈಟ್ ಪಡೆದುಕೊಂಡಿದ್ದಾರೆ.

60:40, 50:50ರ ಅನುಪಾತದಲ್ಲಿ ಒಟ್ಟು ಮುಡಾ 5 ಸಾವಿರ ಸೈಟ್‌ಗಳನ್ನು ಹಂಚಿಕೆ ಮಾಡಿದೆ. ಈ ಪ್ರಕರಣದ ತನಿಖೆಗೆ ಇಳಿದ ಇಡಿ ಮೂಲ ದಾಖಲೆಯನ್ನು ಹುಡುಕಿದೆ. ಈ ವೇಳೆ ಮುಡಾದಲ್ಲಿ ಈ ಆಸ್ತಿಗೆ ಸಂಬಂಧಿಸಿದಂತೆ ಬಾಂಡ್ ಪೇಪರ್‌ಗಳು ನಾಪತ್ತೆಯಾಗಿರುವ ವಿಚಾರ ಬೆಳಕಿಗೆ ಬಂದಿದೆ.



ದೊಡ್ಡ ಪ್ರಮಾಣದಲ್ಲಿ ಭ್ರಷ್ಟಾಚಾರ ನಡೆದಿರುವ ಹಿನ್ನೆಲೆಯಲ್ಲಿ ಮುಡಾ ಯಾವ ಮಾನದಂಡದ ಅಡಿಯಲ್ಲಿ ಈ ಸೈಟ್ ಹಂಚಿಕೆ ಮಾಡಲಾಗಿದೆ? ಈ ಸೈಟ್‌ಗಳನ್ನು ಪಡೆದವರ ಹಿನ್ನೆಲೆ ಏನು? ಈ ಸೈಟ್ ಪಡೆಯಲು ಇವರು ನೀಡಿದ ದಾಖಲೆ ಏನು ಇತ್ಯಾದಿಗಳ ವಿವರವನ್ನು ಈಗ ಇಡಿ ಕಲೆ ಹಾಕಲು ಮುಂದಾಗಿದೆ.

### ಪತ್ನಿ, ಮಗುವನ್ನು ಕೊಂದು ಆತ್ಮಹತ್ಯೆ ಕೇಸ್‌ಗೆ ಟ್ವಿಸ್ಟ್

## ಕಾರ್ತಿಕ್ ಸಾಲದ ಸುಳಿಗೆ ಇಡೀ ಸಂಸಾರ ಬಲಿ?

**ಮಂಗಳೂರು:** ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದ್ದ ಪಕ್ಷಿಕೆರೆ ಜೋಡಿ ಕೊಲೆ ಮತ್ತು ಆತ್ಮಹತ್ಯೆ ಪ್ರಕರಣ ಹೊಸ ತಿರುವು ಪಡೆದಿದೆ. ಪತ್ನಿ ಹಾಗೂ ಮಗುವನ್ನ ಕೊಂದು ತಾನು ಆತ್ಮಹತ್ಯೆ ಮಾಡಿಕೊಂಡಿದ್ದ ಕಾರ್ತಿಕ್ ಭಟ್ ವಿರುದ್ಧ ವಂಚನೆಯ ಆರೋಪ ಕೇಳಿ ಬಂದಿದೆ. ವಿಪರೀತ ಸಾಲದ ಸುಳಿಯಿಂದ ಬಳಲಿದ್ದ ಕಾರ್ತಿಕ್ ಭಟ್, ತನ್ನ ಸಂಸಾರದೊಂದಿಗೆ ಅನೇಕರನ್ನೂ ಸಮಸ್ಯೆಗೆ ಸಿಲುಕಿಸಿದ್ದ ಎಂಬ ವಿಚಾರ ತಿಳಿದುಬಂದಿದೆ.



ನ.9 ರ ಶನಿವಾರದಂದು ಕೊಲೆ ಮತ್ತು ಆತ್ಮಹತ್ಯೆ ಪ್ರಕರಣ ಬೆಳಕಿಗೆ ಬಂದಿತ್ತು. ಮಂಗಳೂರಿನ ಮುಲ್ಕಿ ಸಮೀಪದ ಪಕ್ಷಿಕೆರೆಯಲ್ಲಿ ಸುಂದರ ಸಂಸಾರವೊಂದು ಭೀಕರ ಅಂತ್ಯ ಕಂಡಿತ್ತು. ಕಾರ್ತಿಕ್ ಭಟ್ ಎಂಬಾತ ತನ್ನ ಪತ್ನಿ ಹಾಗೂ ನಾಲ್ಕು ವರ್ಷದ ಮಗುವನ್ನ ಕಿಟಕಿ ಗಾಜಿನಿಂದ ತಿವಿದು ಕೊಂದು ಬಳಿಕ ತಾನು ರೈಲಿಗೆ ತಲೆ ಕೊಟ್ಟು ಭೀಕರವಾಗಿ ಸಾವನ್ನಪ್ಪಿದ್ದ. ಈ ಪ್ರಕರಣದ ಸುತ್ತ ಅನುಮಾನಗಳ ಹುತ್ತವೇ ಇದೆ. ಅನೇಕ ಪ್ರಶ್ನೆಗಳಿಗೆ ಇನ್ನೂ ಉತ್ತರ ಸಿಕ್ಕಿಲ್ಲ. ಈ ಮಧ್ಯೆ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದಡಿಯಲ್ಲಿ ಕಾರ್ತಿಕ್ ಭಟ್ ತಾಯಿ ಶ್ಯಾಮಲಾ ಭಟ್ ಹಾಗೂ ಅಕ್ಕ ಕಣ್ಮಣಿ ಕಂಬಿ ಎಣಿಸುತ್ತಿದ್ದಾರೆ. ಈ ನಡುವೆ ಕಾರ್ತಿಕ್ ವಿರುದ್ಧ



ಸಾಲು ಸಾಲು ಅವ್ಯವಹಾರಗಳ ಆರೋಪ ಕೇಳಿ ಬಂದಿದೆ. ಕಾರ್ತಿಕ್ ಭಟ್ ವಿರುದ್ಧ ವಂಚನೆಯ ಆರೋಪ ಕೇಳಿ ಬಂದಿದೆ. ಪಕ್ಷಿಕೆರೆ ನಿವಾಸಿ ಮಹಮ್ಮದ್ ಎಂಬುವವರ 80 ಗ್ರಾಂ ಚಿನ್ನವನ್ನ ಕಾರ್ತಿಕ್ ಎಗರಿಸಿದ್ದ ಎಂಬ ಆರೋಪ ಕೇಳಿಬಂದಿದೆ. ಚಿನ್ನ ಅಡವಿಟ್ಟು ಸಾಲ ಕೊಡಿಸುತ್ತೇನೆ ಎಂದು ನಂಬಿಸಿ ಕಾರ್ತಿಕ್ ನನಗೆ ಮೋಸ ಮಾಡಿದ್ದಾನೆ ಎಂದು ಮಹಮ್ಮದ್ ಆರೋಪಿಸಿದ್ದಾರೆ.

ಎರಡು ವರ್ಷದ ಹಿಂದೆ ಪಕ್ಷಿಕೆರೆ ಬ್ಯಾಂಕ್‌ವೊಂದರಲ್ಲಿ ತನ್ನ 80 ಗ್ರಾಂ ಚಿನ್ನವನ್ನು ಅಡವಿಟ್ಟು ಮಹಮ್ಮದ್ 1,60,000 ಸಾಲ ಪಡೆದಿದ್ದ. ಅವರಿಗೆ ಇನ್ನೂ ಹೆಚ್ಚಿನ ಸಾಲ ಬೇಕೆಂಬುದನ್ನು ಮನಗಂಡು ಕಾರ್ತಿಕ್ ತಾನು ಮ್ಯಾನೇಜರ್ ಆಗಿರುವ ಸುಬ್ರಹ್ಮಣ್ಯ ಸಹಕಾರಿ ಸಂಘದಲ್ಲಿ ಅಡವಿಟ್ಟರೆ ಹೆಚ್ಚಿನ ಸಾಲ ನೀಡುವುದಾಗಿ ಭರವಸೆ ನೀಡಿದ್ದ. ಪುಟ 2

## ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಡಿಜಿಟಲ್ ಲಾಕರ್ ಸೌಲಭ್ಯ

**ಬೆಂಗಳೂರು:** ನಮ್ಮ ಮೆಟ್ರೋ ವೇಗದ ಮತ್ತು ಸುರಕ್ಷಿತ ಪ್ರಯಾಣಕ್ಕೆ ಅನುಕೂಲಕಾರಿಯಾಗಿದೆ. ಬೆಂಗಳೂರಿನಲ್ಲಿ ಟ್ರಾಫಿಕ್ ಮುಕ್ತ ಸಂಚಾರ ಸೇವೆಯನ್ನು ನೀಡುತ್ತಿರುವ ಬೆಂಗಳೂರು ಮೆಟ್ರೋ ರೈಲು ನಿಗಮ ಮಂಡಳಿ ಸ್ಮಾರ್ಟ್ ಡಿಜಿಟಲ್ ಲಗೇಜ್ ಲಾಕರ್ ಅನ್ನು ಆರಂಭಿಸಿದೆ. ಮೆಟ್ರೋ ಪ್ರಯಾಣಿಕರು ಸೇಫ್ ಕ್ಲಾಕ್ ಸಂಸ್ಥೆಯ ಸ್ಮಾರ್ಟ್ ಡಿಜಿಟಲ್ ಲಾಕರ್‌ನಲ್ಲಿ ತಮ್ಮ ಲಗೇಜ್ ಇಟ್ಟು ಬೇರಡೆ ಹೋಗಬೇಕಿದ್ದ ಸ್ಥಳಕ್ಕೆ ತೆರಳಿ ವಾಪಸ್ ಬರಬಹುದು.

ನಾಡಪ್ರಭು ಕೆಂಪೇಗೌಡ ನಿಲ್ದಾಣ (ಮೆಜೆಸ್ಟಿಕ್) ನಲ್ಲಿ ಬುಧವಾರ ಸ್ಮಾರ್ಟ್ ಡಿಜಿಟಲ್ ಲಾಕರ್ ಆರಂಭಗೊಂಡಿದೆ. ಮೆಜೆಸ್ಟಿಕ್ ನಿಲ್ದಾಣದ 'ಡಿ' ನಿರ್ಗಮನದಲ್ಲಿ ಸ್ಥಾಪಿಸಲಾಗಿರುವ ಸ್ಮಾರ್ಟ್ ಡಿಜಿಟಲ್ ಲಾಕರ್‌ಗೆ ಬಿಎಂಆರ್




ಸಿಎಲ್ ಕಾರ್ಯನಿರ್ವಾಹಕ ನಿರ್ದೇಶಕಿ ಕಲ್ಪನಾ ಕೊಟಾರಿಯಾ ಚಾಲನೆ ನೀಡಿದರು. ಪ್ರಯಾಣಿಕರು 2 ರಿಂದ 5 ಬ್ಯಾಗ್‌ಗಳನ್ನು ಸ್ಮಾರ್ಟ್ ಡಿಜಿಟಲ್ ಲಾಕರ್‌ನಲ್ಲಿ ಇಡಬಹುದಾಗಿದೆ. ಪುಟ 2



## ಶಾಲಾ ಮಕ್ಕಳನ್ನು ಕರೆದೊಯ್ಯುತ್ತಿದ್ದ ಕಾರು ಪಲ್ಟಿ: ಇಬ್ಬರು ಮಕ್ಕಳು, ಚಾಲಕನಿಗೆ ಗಂಭೀರ ಗಾಯ



**ಮಂಗಳೂರು:** ಶಾಲಾ ಮಕ್ಕಳನ್ನು ಕರೆದೊಯ್ಯುತ್ತಿದ್ದ ಕಾರು ಪಲ್ಟಿಯಾಗಿದ್ದು, ಇಬ್ಬರು ಮಕ್ಕಳು ಮತ್ತು ಚಾಲಕನಿಗೆ ಗಂಭೀರ ಗಾಯವಾಗಿರುವ ಘಟನೆ ಬಂಟ್ವಾಳದಲ್ಲಿ ನಡೆದಿದೆ.

ಬಂಟ್ವಾಳ ತಾಲೂಕಿನ ಪೆರುವಾಯಿ ಮುಚ್ಚಿಲಪದವು ಎಂಬಲ್ಲಿ ಘಟನೆ ನಡೆದಿದ್ದು, ಎಂಟು ಮಕ್ಕಳಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಗೊಂಡ ಮಕ್ಕಳಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ.

ವಿಟ್ಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಶಾಲಾ ಮಕ್ಕಳ ವಾಹನ ಅಪಘಾತದ ಭೀಕರ ಸಿಸಿಟಿವಿಯಲ್ಲಿ ಸೆರೆಯಾಗಿದೆ.

## ರೀಲ್ಸ್‌ಗಾಗಿ ಪೆಟ್ರೋಲ್ ಬಾಂಬ್ ಸ್ಫೋಟಿಸಿ ಹುಚ್ಚಾಟ: ವಿದ್ಯಾರ್ಥಿಗಳ ವಿರುದ್ಧ ಕೇಸ್



**ಹಾಸನ:** ರೀಲ್ಸ್‌ಗಾಗಿ ವಿದ್ಯಾರ್ಥಿಗಳು ಪೆಟ್ರೋಲ್ ಬಾಂಬ್ ಸ್ಫೋಟಿಸಿ ಎಲ್ಲೆ ಮೀರಿ ವರ್ತಿಸಿರುವ ಘಟನೆ ಹಾಸನ ಹೊರವಲಯದ ಬೊಮ್ಮನಾಯಕನಹಳ್ಳಿಯಲ್ಲಿ ನಡೆದಿದೆ.

ಆಯುರ್ವೇದ ಕಾಲೇಜಿನಲ್ಲಿ ಓದುತ್ತಿರುವ ಹಾಸನ ನಗರದ ಇಬ್ಬರು, ಕುಣಿಗಲ್ ತಾಲ್ಲೂಕಿನ ಓರ್ವ ವಿದ್ಯಾರ್ಥಿ ರಾತ್ರಿ ವೇಳೆ ಕಾಲೇಜಿನ ಎದುರಿನ ರಸ್ತೆಯಲ್ಲಿ ಪ್ಲಾಸ್ಟಿಕ್ ಕವರ್‌ಗೆ ಪೆಟ್ರೋಲ್ ತುಂಬಿ, ಅದರ ಮೇಲೆ ಪಟಾಕಿ ಬಾಂಬ್ ಇಟ್ಟು ಬೆಂಕಿ ಹಚ್ಚಿದ್ದಾರೆ. ಪರಿಣಾಮ ದೊಡ್ಡ ಶಬ್ದದೊಂದಿಗೆ ಸ್ಫೋಟಗೊಂಡು ಬೆಂಕಿ ಹೊತ್ತಿಕೊಂಡಿದೆ.

ಪೆಟ್ರೋಲ್ ಬಾಂಬ್ ಸ್ಫೋಟಗೊಂಡ ಅನತಿ ದೂರದಲ್ಲಿ ಪೆಟ್ರೋಲ್ ಟ್ಯಾಂಕರ್ ನಿಂತಿದ್ದು ಬಾರಿ ಅನಾಹುತವೊಂದು ತಪ್ಪಿದಂತಾಗಿದೆ. ಹಿಂದುಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಸಂಸ್ಥೆ ಸಮೀಪವೇ ಪೆಟ್ರೋಲ್ ಬಾಂಬ್ ಸ್ಫೋಟಿಸಿ ವಿಡಿಯೋ ಮಾಡಿ ಇನ್‌ಸ್ಟಾಗ್ರಾಂನಲ್ಲಿ ವಿಡಿಯೋ ಅಪ್‌ಲೋಡ್ ಮಾಡಿದ್ದಾರೆ.

ವಿದ್ಯಾರ್ಥಿಗಳ ವರ್ತನೆಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ವಿಡಿಯೋ ವೈರಲ್ ಆಗುತ್ತಿದ್ದಂತೆ ಎಚ್ಚೆತ್ತ ಪೊಲೀಸರು ಕರ್ನಾಟಕ ಪೊಲೀಸ್ ಕಾಯ್ದೆಯಡಿ ಮೂವರು ವಿದ್ಯಾರ್ಥಿಗಳ ವಿರುದ್ಧ ಪ್ರಕರಣ ದಾಖಲಿಸಿ ಕೋರ್ಟ್‌ಗೆ ಹಾಜರುಪಡಿಸಿ ದಂಡ ವಿಧಿಸಿದ್ದಾರೆ.

## ನ.25, 26 ರಂದು ನಡೆಯಲಿದೆ ಪ್ರಸಿದ್ಧ ಬಸವನಗುಡಿ ಕಡಲೇಕಾಯಿ ಪರಿಷೆ

**ಬೆಂಗಳೂರು:** ಪ್ರಸಿದ್ಧ ಬಸವನಗುಡಿ ಕಡಲೇಕಾಯಿ ಪರಿಷೆ ನ.25 ಮತ್ತು 26 ರಂದು ನಡೆಯಲಿದೆ. ಮುಜರಾಯಿ ಇಲಾಖೆ ದಿನಾಂಕ ನಿಗದಿ ಮಾಡಿದೆ. ಎರಡು ದಿನಗಳ ಕಾಲ ನಡೆಯಲಿರುವ ಕಡಲೇಕಾಯಿ ಪರಿಷೆಗೆ ವ್ಯಾಪಾರಿಗಳಿಂದ ಸುಂಕ ವಸೂಲಾತಿಗೆ ಬ್ರೇಕ್ ಹಾಕಲು ಇಲಾಖೆ ನಿರ್ಧರಿಸಿದೆ. ಸಚಿವ ರಾಮಲಿಂಗಾ ರೆಡ್ಡಿ ಅಧಿಕಾರಿಗಳ ಜೊತೆ ಸಭೆ ಮಾಡಿ ಕಡಲೆಕಾಯಿ ಪರಿಷೆ ಸಂಬಂಧ ಮಾರ್ಗಸೂಚಿ ಬಿಡುಗಡೆ ಮಾಡಲಿದ್ದಾರೆ. ನ.15 ರಿಂದ ಮಲ್ಲೇಶ್ವರಂ ಕಡಲೆಕಾಯಿ ಪರಿಷೆ ಆರಂಭವಾಗಲಿದ್ದು ಸಂಜೆ 4.30ಕ್ಕೆ ಕೇಂದ್ರದ ಮಾಜಿ ಸಚಿವ ವೀರಪ್ಪ ಮೊಯ್ಲಿ ಉದ್ಘಾಟಿಸಲಿದ್ದಾರೆ



ಮಲ್ಲೇಶ್ವರಂನ ಶ್ರೀ ಕಾಡು ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ, ಕಾಡು ಮಲ್ಲೇಶ್ವರ ಗೆಳೆಯರ ಬಳಗ ಪರಿಷೆಯನ್ನು ಆಯೋಜಿಸಿದೆ. ನವೆಂಬರ್ 15 ರಿಂದ 18ರವರೆಗೆ ರೈತಸ್ನೇಹಿ ಕಡಲೆಕಾಯಿ ಪರಿಷೆ ನಡೆಯಲಿದೆ.

### ಅನಧಿಕೃತ ಕಟ್ಟಡಗಳ ಸರ್ವೆಗೆ ಪಾಲಿಕೆ ಹಿಂದೇಟು

# ಸಿಎಂ, ಡಿಸಿಎಂಗೂ ಬಗ್ಗದ ಬಿಬಿಎಂಪಿ ಅಧಿಕಾರಿಗಳು

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ಅನಧಿಕೃತ ಕಟ್ಟಡಗಳು ತಲೆ ಎತ್ತಿವೆ. ಇದರಿಂದಾಗಿಯೇ ಕಳೆದ ತಿಂಗಳು ಒಂಬತ್ತು ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದಾರೆ. ಇಷ್ಟಾದರೂ ಈ ಅನಧಿಕೃತ ಕಟ್ಟಡಗಳ ಸರ್ವೆ ಮಾಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾತ್ರ ಮುಂದಾಗುತ್ತಿಲ್ಲ. ಈ ಬಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಸೂಚನೆ ನೀಡಿದ್ದರೂ ಪಾಲಿಕೆ ಅಧಿಕಾರಿಗಳು ಕ್ಯಾರೇ ಎನ್ನುತ್ತಿಲ್ಲ ಎನ್ನುವ ಆರೋಪ ಕೇಳಿಬಂದಿದೆ.

ಬಾಬುಸಾ ಪಾಳ್ಯದಲ್ಲಿ ಅನಧಿಕೃತ ಕಟ್ಟಡ ಕುಸಿತದಿಂದ 9 ಮಂದಿ ಕಾರ್ಮಿಕರು ಮೃತಪಟ್ಟ ಹಿನ್ನೆಲೆಯಲ್ಲಿ ಎಂಟು ವಲಯದಲ್ಲಿ ಅನಧಿಕೃತ ಕಟ್ಟಡಗಳ ಸರ್ವೆ ನಡೆಸಿ ಒಂದು ವಾರದಲ್ಲಿ ವರದಿ ನೀಡುವಂತೆ ಸೂಚಿಸಲಾಗಿತ್ತು.

ಎರಡು ವಾರಗಳಲ್ಲಿ ಕೇವಲ 2,562 ಅನಧಿಕೃತ ಕಟ್ಟಡಗಳು ಮಾತ್ರ ಪತ್ತೆ!

ಒಂದು ವಾರವಲ್ಲ, ಎರಡು ವಾರ ಪೂರ್ಣಗೊಂಡರೂ ಸರ್ವೆ ಕಾರ್ಯ ಪೂರ್ಣಗೊಂಡಿಲ್ಲ. ಎರಡು ವಾರಗಳಲ್ಲಿ ಈವರೆಗೂ ಕೇವಲ 2,562 ಅನಧಿಕೃತ ಕಟ್ಟಡಗಳನ್ನ ಮಾತ್ರ ಪತ್ತೆ ಮಾಡಲಾಗಿದೆ. ಕಳೆದ ಎರಡು ಮೂರು ದಿನಗಳಿಂದ ಅಧಿಕಾರಿಗಳು ಅಕ್ರಮ ಕಟ್ಟಡಗಳ ಸರ್ವೆ ಕೈ ಬಿಟ್ಟಿದ್ದಾರೆ. ಹದಿನೈದು ದಿನಗಳಿಂದ ಕೇವಲ 2,500 ಕಟ್ಟಡಗಳ ಮಾತ್ರ ಗುರುತು ಮಾಡಿದ್ದಾರೆ. ಅಧಿಕಾರಿಗಳು ಸರ್ವೇ ಕಾರ್ಯಕ್ಕೆ ಆಸಕ್ತಿ ತೋರುತ್ತಿಲ್ಲ ಎಂಬ ಆರೋಪ ಕೇಳಿ ಬಂದಿದೆ.



**ಮೂರು ಹಂತದಲ್ಲಿ ಅನಧಿಕೃತ ಕಟ್ಟಡಗಳ ಸರ್ವೆ:** ಬಾಬುಸಪಾಳ್ಯದ ಅನಧಿಕೃತ ಕಟ್ಟಡ ಕುಸಿದು 9 ಜನರ ಸಾವಿನ ಬಳಿಕ ಅನಧಿಕೃತ ಕಟ್ಟಡಗಳ ವಿರುದ್ಧ ಪಾಲಿಕೆ ಸಮರ ಸಾರಿತ್ತು. ಡಿಸಿಎಂ ಡಿಕೆ ಶಿವಕುಮಾರ್ ಸೂಚನೆಯಂತೆ ಪಾಲಿಕೆ, ಮೂರು ಹಂತದಲ್ಲಿ ರಾಜಧಾನಿಯ ಅನಧಿಕೃತ ಕಟ್ಟಡಗಳನ್ನ ಸರ್ವೆ ಮಾಡುವುದಕ್ಕೆ ಸಜ್ಜಾಗಿತ್ತು. ಫೋಟೋ, ವಿಡಿಯೋ ಸಂಗ್ರಹ, ಪರವಾನಗಿ ಪರಿಶೀಲನೆ, ಸ್ಯಾಟಲೈಟ್ ಸರ್ವೆ ಮೂಲಕ ಅನಧಿಕೃತ ಕಟ್ಟಡಗಳ ಪತ್ತೆಗೆ ಸಜ್ಜಾಗಿರುವ ಪಾಲಿಕೆ, ಆ ಮೂಲಕ ರಾಜಧಾನಿಯ ಅನಧಿಕೃತ ಕಟ್ಟಡಗಳ ಮಾಲೀಕರಿಗೆ ಬಿಸಿ ಮುಟ್ಟಿಸಿತ್ತು. ಆರಂಭದಲ್ಲಿಯೇ ಪಾಲಿಕೆ, ಆ್ಯಪ್ ಬಳಕೆಯ ಅಡೆತಡೆ ಎದುರಿಸಿತು.

ಇನ್ನು ಎಂಟು ವಲಯಗಳಲ್ಲಿ ಆಯಾ ವಲಯ ಆಯುಕ್ತರ ನೇತೃತ್ವದಲ್ಲಿ ಅನಧಿಕೃತ ಕಟ್ಟಡಗಳ ಸರ್ವೆ ನಡೆಯಬೇಕಿತ್ತು. ಒಂದು ವೇಳೆ ಅನಧಿಕೃತ ಕಟ್ಟಡಗಳು ಪತ್ತೆಯಾದರೆ ಮಾಲೀಕರ ಖರ್ಚಿನಲ್ಲಿ ತೆರವು ಮಾಡುವುದಕ್ಕೆ ಪಾಲಿಕೆ ನೋಟಿಸ್ ಕೊಡುತ್ತದೆ. ನೋಟಿಸ್ ನೀಡಿದ ಬಳಿಕವೂ ಕಟ್ಟಡ ತೆರವಾಗದಿದ್ದರೆ ಬಿಬಿಎಂಪಿಯೇ ಕಟ್ಟಡ ತೆರವು ಮಾಡಿ ಅದರ ಖರ್ಚು ವೆಚ್ಚವನ್ನ ಕಟ್ಟಡದ ಮಾಲೀಕರಿಂದ ಭರಿಸೋಕೆ ಚಿಂತನೆ ನಡೆಸಲಾಗುತ್ತಿದೆ ಎಂದು ಬಿಬಿಎಂಪಿ ಕಮಿಷನರ್ ತುಷಾರ್ ಗಿರಿನಾಥ್ ಹೇಳಿದ್ದರು.

ಅನಧಿಕೃತ ಕಟ್ಟಡಗಳ ಮೇಲೆ ಜೆಸಿಬಿ ಮೂಲಕ ಸಮರ ಸಾರಿದ ಪಾಲಿಕೆ, ನಗರದ ಹೃದಯ ಭಾಗ ಮೆಜೆಸ್ಟಿಕ್‌ನಲ್ಲಿ ತಲೆ ಎತ್ತಿದ್ದ ಅನಧಿಕೃತ ಕಟ್ಟಡವನ್ನ ತೆರವು ಮಾಡಿದೆ. ಮೆಜೆಸ್ಟಿಕ್‌ನ ಶಾಂತಲಾ ಸಿಲ್ಕ್ಸ್ ಪಕ್ಕದಲ್ಲಿ ಅನಧಿಕೃತವಾಗಿ ತಲೆಎತ್ತಿದ ದಿಲೀಪ್ ಕುಮಾರ್ ಎನ್ನುವವರ ಕಟ್ಟಡದ ಭಾಗಗಳನ್ನ ಬಿಬಿಎಂಪಿಯ ಪಶ್ಚಿಮ ವಲಯ ಆಯುಕ್ತೆ ಅರ್ಚನಾ ನೇತೃತ್ವದ ತಂಡ ತೆರವು ಮಾಡಿದೆ. ನಕ್ಷೆ ನಿಯಮ ಉಲ್ಲಂಘಿಸಿದ್ದ ಕಟ್ಟಡದ ಮುಂಭಾಗ ತೆರವು ಮಾಡಿರುವ ಪಾಲಿಕೆ, ಮತ್ತೊಂದು ನೋಟಿಸ್ ನೀಡಿ ಅದಕ್ಕೂ ಉತ್ತರ ಬಾರದಿದ್ದರೆ ಕಟ್ಟಡದ ಉಳಿದ ಭಾಗಗಳ ತೆರವು ಮಾಡಲಾಗುವುದು ಎಂದು ಬಿಬಿಎಂಪಿ ಪಶ್ಚಿಮ ವಲಯ ಆಯುಕ್ತೆ ಅರ್ಚನಾ ಅವರು ಹೇಳಿದ್ದಾರೆ.

ಒಟ್ಟಿನಲ್ಲಿ ಮಳೆ ಬಂದಾಗ ಮನೆ ಮೇಲೆ ಗಮನ ಎನ್ನುವ ಹಾಗೇ ಅನಧಿಕೃತ ಕಟ್ಟಡ ಕುಸಿದು 9 ಜನರು ಅಸುನೀಗಿದ ಬಳಿಕ, ಇದೀಗ ಅನಧಿಕೃತ ಕಟ್ಟಡಗಳ ವಿರುದ್ಧ ಸವಾರಿ ಮಾಡುವುದಕ್ಕೆ ಪಾಲಿಕೆ ಸಜ್ಜಾಗಿತ್ತು, ಆದರೆ ಹದಿನೈದೇ ದಿನಗಳಲ್ಲಿ ಪಾಲಿಕೆ ಸರ್ವೆ ನಡೆಸುವುದನ್ನೇ ನಿಲ್ಲಿಸಿಬಿಟ್ಟಿದೆ.

### ಹಿಂದೂಗಳ ಪರವಾಗಿರುವವರಿಗೆ ಮತ ಹಾಕಿ

# ಇಲ್ಲದಿದ್ದರೆ ಪಾಕಿಸ್ತಾನ, ಬಾಂಗ್ಲಾದೇಶದ ಸ್ಥಿತಿ ಬರುತ್ತೆ

**ಶಿವಮೊಗ್ಗ:** ಹಿಂದೂಗಳ ಪರವಾಗಿ ಇರುವವರಿಗೆ ಮತ ಹಾಕಿ ಇಲ್ಲದಿದ್ದರೆ ಪಾಕಿಸ್ತಾನ, ಬಾಂಗ್ಲಾದೇಶದ ಪರಿಸ್ಥಿತಿ ಬರುತ್ತದೆ ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಹೇಳಿದ್ದಾರೆ.



ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಸ್ಲಿಮರು ಮಾಡುತ್ತಿರುವ ಅಚಾತುರ್ಯ ಗಮನಿಸಿ ಕಾಂಗ್ರೆಸ್‌ನವರು ಮೌನವಾಗಿದ್ದಾರೆ. ಪ್ರತಿನಿತ್ಯ ಮುಸ್ಲಿಮರ ಒಂದಲ್ಲ ಒಂದು ಅನ್ಯಾಯ ಕಾಣುತ್ತಿದೆ. ರೈತರು, ದೇವಸ್ಥಾನ, ಸಾಧು ಸಂತರು, ಪುರಾತತ್ವ ಇಲಾಖೆ ಆಸ್ತಿಯನ್ನು ವಕ್ಫ್ ಆಸ್ತಿ ಎಂದು ಮಾಡಿಕೊಂಡಿದ್ದಾರೆ. ವಕ್ಫ್ ಆಸ್ತಿ ಆಗಲು ಬಿಡಲ್ಲ ಎಂದು ಒಬ್ಬ ಕಾಂಗ್ರೆಸ್‌ನವರ ಬಾಯಲ್ಲಿ ಬರಲಿಲ್ಲ. ಹಿಂದೂಗಳ ಪರವಾಗಿ ಇರುವವರಿಗೆ ಮತ ಹಾಕಿ ಇಲ್ಲದಿದ್ದರೆ ಪಾಕಿಸ್ತಾನ, ಬಾಂಗ್ಲಾದೇಶದ ಪರಿಸ್ಥಿತಿ ಬರುತ್ತದೆ ಎಂದರು.

ವಕ್ಫ್ ನೋಟಿಸ್ ವಾಪಸ್ ತೆಗೆದುಗೊಂಡಿದ್ದೇವೆ ಎಂದು ಹೇಳುತ್ತಾರೆ ಆದರೆ ಸಿಎಂ, ಡಿಸಿಎಂ ಈ ಬಗ್ಗೆ ನ್ಯಾಯ ಕೊಡಿಸುತ್ತೇವೆ ಎಂದು ಹೇಳುವುದಿಲ್ಲ. ವಿಪಕ್ಷಗಳು ರಾಜಕಾರಣ ಮಾಡುತ್ತೇವೆ ಎಂದು ಹೇಳಿ ರಾಜಕಾರಣ ಮಾಡುತ್ತಿದ್ದಾರೆ. ಅಂಬೇಡ್ಕರ್ ಇಸ್ಲಾಂ ಧರ್ಮ ಸ್ವೀಕಾರ ಮಾಡಲು ಸಿದ್ಧರಿದ್ದರು ಎಂದು ಕಾಂಗ್ರೆಸ್ ನಾಯಕ ಹೇಳಿದ್ದಾನೆ. ಆದರೆ ಈ ಬಗ್ಗೆ ಒಬ್ಬ ಕಾಂಗ್ರೆಸ್ ನಾಯಕನೂ ಖಂಡಿಸಲಿಲ್ಲ ಎಂದು ಕಿಡಿಕಾರಿದರು.

ಇದೇ ವೇಳೆ ಮುಸ್ಲಿಂರಿಗೆ ಗುತ್ತಿಗೆಯಲ್ಲಿ ಮೀಸಲಾತಿ ವಿಚಾರವಾಗಿ ಮಾತನಾಡಿ, ಮೀಸಲಾತಿ ಕೊಡುತ್ತೇವೆ ಎನ್ನುತ್ತಾರೆ. ಹಿಂದೂಸ್ಥಾನ ಏನು ಪಾಕಿಸ್ತಾನ ಮಾಡಲು ಹೊರಟ್ಟಿದ್ದೀರಾ? ಸಾಧು ಸಂತರ ನೇತೃತ್ವದಲ್ಲಿ ದಂಗೆ ಏಳುತ್ತಾರೆ. ಬಾಂಗ್ಲಾದೇಶದಲ್ಲಿ ಹಲ್ಲೆ, ಕೊಲೆ ಆಯ್ತು. ಬಾಂಗ್ಲಾದೇಶದ ಪ್ರಧಾನಿಗೆ ಭಾರತದಲ್ಲಿ ರಕ್ಷಣೆ ಕೊಟ್ಟು ಇಟ್ಟಿದ್ದೇವೆ. ಪಾಕಿಸ್ತಾನದಲ್ಲಿ ಹಿಂದೂಗಳ ಹತ್ಯೆಯಾಯ್ತು. ಭಾರತದಲ್ಲಿಯೂ ಮುಸ್ಲಿಂರು ಈ ರೀತಿ ಮಾಡಲು ಹೊರಟ್ಟಿದ್ದಾರೆ. ಕಾಂಗ್ರೆಸ್‌ನವರು ವೋಟಿಗಾಗಿ ಭಾರತವನ್ನೇ ಮತಾಂತರ ಮಾಡಲು ಹೊರಟ್ಟಿದ್ದಾರೆ. ನೇರಾ ನೇರ ಖಂಡನೆ ಮಾಡಬೇಕು. ಹಿಂದೂಗಳಿಗೆ ಅಪಮಾನ ಮಾಡುತ್ತಿದ್ದಾರೆ. ಅವರ ಮೀಸಲಾತಿ ಕಿತ್ತುಕೊಳ್ಳಲು ಹೊರಟ್ಟಿದ್ದಾರೆ. ಹಿಂದೂ ಸಮಾಜ ದಂಗೆ ಎದ್ದರೆ ಈ ಸರ್ಕಾರ, ನೀವೇ ಕಾರಣರಾಗುತ್ತೀರಿ ಎಂದು ಎಚ್ಚರಿಕೆ ನೀಡಿದರು.

### ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಬೋರ್ಡ್ ಪರೀಕ್ಷೆ

# ಗೊಂದಲಕ್ಕೆ ಸಿಲುಕಿದ ಶಿಕ್ಷಣ ಇಲಾಖೆ?!

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಬೋರ್ಡ್ ಪರೀಕ್ಷೆ ವಿಚಾರದಲ್ಲಿ ಶಿಕ್ಷಣ ಇಲಾಖೆ ಗೊಂದಲಕ್ಕೆ ಸಿಲುಕಿದಂತೆ ಕಾಣುತ್ತಿದೆ. ಕಳೆದ ವರ್ಷ ಮೂರು ಮೂರು ಬೋರ್ಡ್ ಪರೀಕ್ಷೆ ನಡೆಸಲಾಗಿತ್ತು, ಆದ್ರೆ ಶಾಲಾ ಮೌಲ್ಯ ನಿರ್ಣಯ ಮಂಡಳಿ ಇದುವರೆಗೂ ಬೋರ್ಡ್ ಪರೀಕ್ಷಾ ವೇಳಾಪಟ್ಟಿ ಖಿಟಜ ಖಿಚಿಛಟಜ ಪ್ರಕಟಿಸದ ಹಿನ್ನಲೆಯಲ್ಲಿ ಪೋಷಕರು ಮತ್ತು ವಿದ್ಯಾರ್ಥಿಗಳು ಗೊಂದಲಕ್ಕೆ ಸಿಲುಕಿದ್ದಾರೆ.

ಪ್ರತಿ ವರ್ಷ ಬೋರ್ಡ್ ಪರೀಕ್ಷಾ ವೇಳಾಪಟ್ಟಿ ಮೂರು ನಾಲ್ಕು ತಿಂಗಳಿಗೆ ಮುಂಚಿತವಾಗಿ ಪ್ರಕಟಿಸಲಾಗುತ್ತಿತ್ತು. ಆದರೆ ಈ ಬಾರಿ ನವೆಂಬರ್ ತಿಂಗಳು ಕಳೆಯುತ್ತಾ ಬಂದರೂ ತಾತ್ಕಾಲಿಕ ವೇಳಾಪಟ್ಟಿ ಕೂಡ ಪ್ರಕಟ ಮಾಡಿಲ್ಲ. ಹೀಗಾಗಿ ಪೋಷಕರು ಮತ್ತು ವಿದ್ಯಾರ್ಥಿಗಳು ಗೊಂದಲಕ್ಕೆ ಸಿಲುಕಿದ್ದಾರೆ.

**ಕೋರ್ಟ್ ಮೆಟ್ಟಿಲೇರಿರುವ ಖಾಸಗಿ ಶಾಲೆಗಳು:** ಮತ್ತೊಂದು ಕಡೆ ಖಾಸಗಿ ಶಾಲೆಗಳು ಮೂರು ಬೋರ್ಡ್ ಪರೀಕ್ಷೆ ಬೇಡ ಅಂತ ಕೋರ್ಟ್ ಮೆಟ್ಟಿಲು ಹತ್ತಿವೆ. ಎರಡೇ ಪರೀಕ್ಷೆ ಸಾಕು ಎಂದು ಖಾಸಗಿ ಶಾಲಾ ಸಂಘಟನೆ ಕೃಪಾ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ. ಈ ಎಲ್ಲಾ ಬೆಳವಣಿಗೆಗಳು ವಿದ್ಯಾರ್ಥಿಗಳಲ್ಲಿ ಹಲವು ಗೊಂದಲಗಳನ್ನು ಉಂಟುಮಾಡಿವೆ. ಶಿಕ್ಷಣ ಇಲಾಖೆ ಬೇಗ ನಿರ್ಧಾರ ಮಾಡಿ ವೇಳಾಪಟ್ಟಿ ಪ್ರಕಟಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.



**ವೇಳಾಪಟ್ಟಿ ಪ್ರಕಟಿಸುವಂತೆ ಒತ್ತಾಯ:** ಪರೀಕ್ಷೆಗೆ ವಿದ್ಯಾರ್ಥಿಗಳು, ಶಾಲಾ ಶಿಕ್ಷಕರು ಸಿದ್ಧತೆ ಮಾಡಿಕೊಳ್ಳಬೇಕಿದೆ. ಆದ್ರೆ, ಈ ಬಾರಿ ಇದುವರೆಗೂ ರಾಜ್ಯ ಪಠ್ಯಕ್ರಮದ ಬೋರ್ಡ್ ಪರೀಕ್ಷೆ ವೇಳಾಪಟ್ಟಿ ಇನ್ನೂ ಪ್ರಕಟಗೊಂಡಿಲ್ಲ. ಇದರಿಂದ ವಿದ್ಯಾರ್ಥಿಗಳು ಪೋಷಕರು ಗೊಂದಲಕ್ಕೆ ಸಿಲುಕಿದ್ದಾರೆ. ಅದಷ್ಟು ಬೇಗ ಖಖಐಅ ಹಾಗೂ ದ್ವಿತೀಯ ಪಿಯುಸಿ ಬೋರ್ಡ್ ಪರೀಕ್ಷೆಯ ವೇಳಾಪಟ್ಟಿ ಪ್ರಕಟಿಸಿ ಎಂದು ಕೃಪಾ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ಶಿಕ್ಷಣ ಇಲಾಖೆಗೆ ಒತ್ತಾಯಿಸಿದ್ದಾರೆ.

**5, 8 ಮತ್ತು 9ನೇ ತರಗತಿಗೆ ಬೋರ್ಡ್ ಪರೀಕ್ಷೆ ಇಲ್ಲ:** ಇತ್ತೀಚೆಗೆ ಶಿಕ್ಷಣದಲ್ಲಿ ಹಿಂದುಳಿದಿರುವ ಮತ್ತು ಕಡಿಮೆ ಫಲಿತಾಂಶ ಬಂದಿರುವ ರಾಜ್ಯದ ಏಳು ಜಿಲ್ಲೆಗಳಲ್ಲಿ 5, 8 ಮತ್ತು 9ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆಗಳನ್ನು ನಡೆಸುವ ಸಂಬಂಧ ಹೊರಡಿಸಿದ್ದ ಅಧಿಸೂಚನೆ ಹಿಂಪಡೆದಿರುವುದಾಗಿ ಸುಪ್ರೀಂ ಕೋರ್ಟ್‌ಗೆ ರಾಜ್ಯ ಸರ್ಕಾರ ತಿಳಿಸಿತ್ತು. ರಾಯಚೂರು, ಬಳ್ಳಾರಿ, ಕೊಪ್ಪಳ, ಬೀದರ್, ಕಲಬುರಗಿ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳಿಗೆ ಬೋರ್ಡ್ ಪರೀಕ್ಷೆ ನಡೆಸಲು ಸರ್ಕಾರ ಹೊರಡಿಸಿದ್ದ ಅಧಿಸೂಚನೆ ಪ್ರಶ್ನಿಸಿ ಅನುದಾನರಹಿತ ನೋಂದಾಯಿತ ಶಾಲೆಗಳ ಒಕ್ಕೂಟ ಸುಪ್ರೀಂಕೋರ್ಟ್‌ಗೆ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದ್ದವು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಬೇಲಾ ಎಂ.ತ್ರಿವೇದಿ ಮತ್ತು ಸತೀಶ್ ಚಂದ್ರ ಶರ್ಮಾ ಅವರಿದ್ದ ನ್ಯಾಯಪೀಠಕ್ಕೆ ರಾಜ್ಯ ಸರ್ಕಾರದ ಪರವಾಗಿ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಈ ಮಾಹಿತಿ ನೀಡಿದ್ದರು. ವಿಚಾರಣೆ ವೇಳೆ ಮೆಹ್ತಾ, ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸುವುದಕ್ಕೂ ಮುನ್ನ ರಾಜ್ಯ ಸರ್ಕಾರ ಅಧಿಸೂಚನೆಯನ್ನು ಹಿಂಪಡೆದುಕೊಂಡಿದೆ ಎಂಬುದಾಗಿ ಹೇಳಿದ್ದರು. ಅಲ್ಲದೆ, ಪರೀಕ್ಷೆಯ ಫಲಿತಾಂಶವನ್ನೂ ಪ್ರಕಟಿಸಿಲ್ಲ ಎಂದು ತಿಳಿಸಿದ್ದರು.

# ರಾಜ್ಯ ರಾಜಕೀಯದಲ್ಲಿ ಹೊಸ ತಿರುವು

### ಕಾಂಗ್ರೆಸ್‌ನ ಜತ್ತಿ, ಬಿಜೆಪಿಯ ಶೆಟ್ಟರ್ ಕುಟುಂಬದ ನಡುವೆ ಮದುವೆಯ ಹೊಸ 'ಬಂಧ'!

**ಹುಬ್ಬಳ್ಳಿ:** ದಕ್ಷಿಣ ಭಾರತದ ಆಂಧ್ರ ಪ್ರದೇಶ, ತಮಿಳುನಾಡು ಹಾಗೂ ಕೇರಳ ರಾಜ್ಯಗಳ ರಾಜಕಾರಣಕ್ಕೂ ಕರ್ನಾಟಕದ ರಾಜಕಾರಣಕ್ಕೂ ತೀರ ಭಿನ್ನ ಎಂಬ ಮಾತುಗಳು ಆಗಾಗ ಕೇಳಿ ಬರುತ್ತವೆ. ಏಕೆಂದರೆ ರಾಜಕೀಯವಾಗಿ ಎದುರಾಳಿಗಳಾಗಿರುವ ರಾಜಕೀಯ ನಾಯಕರು ತಮ್ಮ ಕುಟುಂಬಗಳೊಂದಿಗೆ ಯಾವುದೇ ವೈವಾಹಿಕ ಬಾಂಧವ್ಯವನ್ನು ಬೆಳೆಸುವುದು ತೀರ ಅಪರೂಪ ಎಂದೇ ಹೇಳಬಹುದು. ಆದರೆ ಕರ್ನಾಟಕ ರಾಜಕಾರಣದಲ್ಲಿ ಇದನ್ನು ನಾವು ಕಾಣುವುದಿಲ್ಲ. ಪರಸ್ಪರ ಎದುರಾಳಿ ಪಕ್ಷಗಳಲ್ಲಿ ಗುರುತಿಸಕೊಂಡಿದ್ದರೂ ಕೂಡ ಮುಂದಿನ ತಲೆಮಾರುಗಳ ಜೀವನಕ್ಕಾಗಿ ನಾಯಕರು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳುತ್ತಾರೆ. ಇಂತಹದ್ದೇ ಒಂದು ಘಟನೆ ಸದ್ಯ ಭಾರೀ ಚರ್ಚೆಗೆ ಕಾರಣವಾಗಿದೆ.



**ಹುಬ್ಬಳ್ಳಿಯಲ್ಲೇ ಮದುವೆ:** ಹೌದು, ಜತ್ತಿ ಮತ್ತು ಶೆಟ್ಟರ್ ಕುಟುಂಬದ ನಡುವೆ ಮದುವೆ ಮೈತ್ರಿ ಏರ್ಪಡುತ್ತಿದ್ದು, ಕಾಂಗ್ರೆಸ್ ವಕ್ತಾರ ಧ್ರುವ ಜತ್ತಿ ಜೊತೆ ಮಾಜಿ ಸಿಎಂ, ಸಂಸದ ಜಗದೀಶ್ ಶೆಟ್ಟರ್ ಅವರ ಸಹೋದರ ಪ್ರದೀಪ್ ಶೆಟ್ಟರ್ ಪುತ್ರಿ ಅಮೋಘಾ ವಿವಾಹ ಫಿಕ್ಸ್ ಆಗಿದೆ. ಡಿಸೆಂಬರ್ 5ರಂದು ಧ್ರುವ ಹಾಗೂ ಅಮೋಘಾ ಅವರ ವಿವಾಹ ಕಾರ್ಯಕ್ರಮ ಹುಬ್ಬಳ್ಳಿಯ ನವೀನ್ ಹೋಟೆಲ್ ನಲ್ಲಿ ನಡೆಯಲಿದೆ. ಆ ಬಳಿಕ ಬೆಂಗಳೂರಿನಲ್ಲಿ ಡಿಸೆಂಬರ್ 07ರಂದು ಆರತಕ್ಷತೆ ಕಾರ್ಯಕ್ರಮ ನಡೆಯಲಿದೆ.

ರಾಜಕೀಯ ಪಕ್ಷವನ್ನು ಮೀರಿ ಕೆಲ ಮುಖಂಡರು ಬೀಗತನ ಬೆಳೆಸುತ್ತಾರೆ. ಕರ್ನಾಟಕದಲ್ಲಿ ಹಲವು ಮುಖಂಡರ ನಡುವೆ ಪಕ್ಷಾತೀತವಾಗಿ ಮದುವೆಯ ಮೈತ್ರಿಗಳು ಆಗಿದೆ. ಸದ್ಯ ರಾಷ್ಟಪತಿ ಹುದ್ದೆಯನ್ನು ಅಲಂಕರಿಸಿದ ಏಕೈಕ ಕನ್ನಡಿಗ ಬಿ.ಡಿ ಜತ್ತಿ ಅವರ ಮರಿ ಮೊಮ್ಮಗ, ಕಾಂಗ್ರೆಸ್ ಪಕ್ಷದ ವಕ್ತಾರ ಧ್ರುವ ಜತ್ತಿ ಅವರೊಂದಿಗೆ ಬಿಜೆಪಿ ಮುಖಂಡರ ಮಗಳ ಮದುವೆ ಸಿದ್ಧತೆಗಳು ಆರಂಭವಾಗಿದೆ.

**ಬೆಂಗಳೂರಿನಲ್ಲಿ ಆರತಕ್ಷತೆ ಆಯೋಜನೆ:** ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಸಂದರ್ಭದಲ್ಲಿ ಧ್ರುವ ಜತ್ತಿ ಅವರನ್ನು ಹುಬ್ಬಳ್ಳಿಯಲ್ಲಿ ಭೇಟಿಯಾಗಿದ್ದರಂತೆ. ನಂತರ ಕಾಂಗ್ರೆಸ್ ಪಕ್ಷದಿಂದ ವಿಧಾನ ಪರಿಷತ್‌ಗೆ ಆಯ್ಕೆಯಾದ ಕೆಲವೇ ತಿಂಗಳಲ್ಲಿ ಎರಡು ಕುಟುಂಬಗಳ ನಡುವೆ ಬೀಗತನದ ಬೆಳೆದಿದೆ. ಅದರ ಮುಂದುವರಿದ ಭಾಗವಾಗಿ ವಿವಾಹ ಸಂಬಂಧ ಏರ್ಪಟ್ಟಿದೆ ಎಂದು ಹೇಳಬಹುದು.

ಇನ್ನು, ಜಗದೀಶ್ ಶೆಟ್ಟರ್ ಅವರು ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಎಂಎಲ್‌ಸಿ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿಗೆ ಮರು ಸೇರ್ಪಡೆಯಾಗಿ ಬೆಳಗಾವಿ ಸಂಸದರಾಗಿದ್ದಾರೆ. ಈಗ ವಧು ತಂದೆ, ಜಗದೀಶ್ ಶೆಟ್ಟರ್ ಸಹೋದರ ಪ್ರದೀಪ್ ಶೆಟ್ಟರ್ ಬಿಜೆಪಿಯಿಂದ ವಿಧಾನ ಪರಿಷತ್ ಸದಸ್ಯರಾಗಿದ್ದಾರೆ. ಅವರ ಭಾವಿ ಅಳಿಯ ಧ್ರುವ ಜತ್ತಿ ಕಾಂಗ್ರೆಸ್ ಪಕ್ಷದ ದೇಶದ ಯುವ ವಕ್ತಾರರಾಗಿದ್ದಾರೆ.

## ಕೊಡಗಿನಲ್ಲಿ ಹೆಚ್ಚಾದ ಕಾಡು ಪ್ರಾಣಿಗಳ ಹಾವಳಿ ಜೀವ ಭಯದಲ್ಲಿ ದಿನ ಕಳೆಯುತ್ತಿರುವ ಜನ



**ಮಡಿಕೇರಿ:** ಕೊಡಗಿನಲ್ಲಿ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗುತ್ತಿದೆ. ಸೋಮವಾರ ಪೇಟೆ ತಾಲ್ಲೂಕಿನ ಭುವಂಗಾಲ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಕಾಡಾನೆಗಳ ಹಿಂಡು ಬೀಡುಬಿಟ್ಟಿವೆ. ಇದರಿಂದಾಗಿ ಜನ ಆತಂಕಗೊಂಡಿದ್ದಾರೆ.

ಭುವಂಗಾಲ ಗ್ರಾಮದ ರಸ್ತೆಯಲ್ಲಿ ಮರಿಯಾನೆ ಸೇರಿ 11 ಕಾಡಾನೆಗಳ ಹಿಂಡು ನಡು ರಸ್ತೆಯಲ್ಲಿ ಸಂಚಾರ ಮಾಡಿದ ವೀಡಿಯೋ ಸದ್ದು ಮಾಡುತ್ತಿವೆ.

ರಸ್ತೆಯಲ್ಲೇ ಕೆಲಕಾಲ ಅಡ್ಡಗಟ್ಟಿದ್ದ ಕಾಡಾನೆಗಳು ಬಳಿಕ ಸುತ್ತಮುತ್ತಲಿನ ಕಾಫಿ ತೋಟಕ್ಕೆ ನುಗ್ಗಿ ದಾಂಧಲೆ ನಡೆಸಿವೆ. ಇದರಿಂದ ಅಪಾರ ಬೆಳೆ ನಾಶವಾಗಿದೆ. ಸ್ಥಳಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆನೆಗಳ ಹಿಂಡನ್ನು ಪುನಃ ಕಾಡಿಗೆ ಓಡಿಸಲು ಕಾರ್ಯಾಚರಣೆ ನಡೆಸಿದ್ದಾರೆ.

ಜಿಲ್ಲೆಯ ಒಂದು ಭಾಗದಲ್ಲಿ ಹುಲಿ ಕಾರ್ಯಚರಣೆ, ಇನೊಂದು ಭಾಗದಲ್ಲಿ ಕಾಡಾನೆಗಳ ಉಪಟಳ ತಡೆಗೆ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಇದರಿಂದ ಜೀವಭಯದಲ್ಲಿ ಗ್ರಾಮದ ಜನ ಮತ್ತು ಕೂಲಿ ಕಾರ್ಮಿಕರು ದಿನ ಕಳೆಯುವಂತಾಗಿದೆ.

## ಪುನೀತ್ ಕೆರೆಹಳ್ಳಿ ಬಂಧನ

ಚನ್ನಪಟ್ಟಣದಲ್ಲಿ ಸಚಿವ ಜಮೀರ್ ಅಹ್ಮದ್ ಅವರ ಬಾಯಿಂದ ಬಂದತಹ ಆ ಮಾತು ಕಾಂಗ್ರೆಸ್ ಅಭ್ಯರ್ಥಿಯನ್ನ ಹೊಗಳುವ ಭರದಲ್ಲಿ ಈ ಆಕ್ಷೇಪಾರ್ಹ ಹೇಳಿಕೆ ಕೊಟ್ಟಿದ್ದರು. ಟೀಕಿಸೋ ಭರದಲ್ಲಿ ವಿವಾದವನ್ನೇ ಸೃಷ್ಟಿಸಿಬಿಟ್ಟಿದ್ದಾರೆ.

**ಅಮೆರಿಕದಲ್ಲಿ ಜೈಲಿಗೆ ಹಾಕುತ್ತಿದ್ದರು: ಆರ್.ಅಶೋಕ್:** ಜಮೀರ್ ಅಹ್ಮದ್ ಖಾನ್ ಆಕ್ಷೇಪಾರ್ಹ ಹೇಳಿಕೆಯನ್ನು ವಿಪಕ್ಷ ನಾಯಕ ಆರ್.ಅಶೋಕ್ ಖಂಡಿಸಿದ್ದಾರೆ. ಅಮೆರಿಕದಲ್ಲೇನಾದರೂ ಹೀಗೆ 'ಕರಿಯ' ಎಂದಿದ್ದರೆ ಬಂಧಿಸಿ ಜೈಲಿಗೆ ಹಾಕುತ್ತಿದ್ದರು. ಆದರೆ ಇಲ್ಲಿ ಕರಿಯಾ ಎಂಬ ಪದ ಹೇಳಿದವನನ್ನು ಸಿದ್ದರಾಮಯ್ಯ ಪಕ್ಕದಲ್ಲೇ ಇಟ್ಟುಕೊಂಡಿದ್ದಾರೆ ಅಂತಾ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಕ್ಷಮೆಯಾಚಿಸಿದ ಜಮೀರ್:** ಕೇಂದ್ರ ಸಚಿವರ ವಿರುದ್ಧದ ಆಕ್ಷೇಪಾರ್ಹ ಹೇಳಿಕೆಗೆ ವಿರೋಧ ವ್ಯಕ್ತವಾಗ್ತಿದ್ದಂತೆ ಸಚಿವ ಜಮೀರ್ ಅಹ್ಮದ್ ಖಾನ್ ಎಚ್ಚೆತ್ತುಕೊಂಡಿದ್ದಾರೆ. ನನ್ನ ಹೇಳಿಕೆಯಿಂದ ಜೆಡಿಎಸ್ ಮುಖಂಡರಿಗೆ ನೋವಾಗಿದ್ದರೆ ಕ್ಷಮೆ ಕೇಳುತ್ತೇನೆ ಎಂದಿದ್ದಾರೆ.

## ಇಡೀ ಸಂಸಾರ ಬಲಿ?

ಹೆಚ್ಚಿನ ಸಾಲದ ಅಗತ್ಯತೆಯಿಂದ ಮಹಮ್ಮದ್, ಕಾರ್ತಿಕ್ ಮಾತನ್ನ ನಂಬಿ ಪಕ್ಷಿಕೆರೆ ಬ್ಯಾಂಕ್‌ನಲ್ಲಿ ಚಿನ್ನ ಅಡವಿಡುತ್ತಾರೆ. ಆ ಬಳಿಕ 3,04,000 ರೂ. ಸಾಲವನ್ನೂ ಪಡೆಯುತ್ತಾರೆ. ಆ ಬಳಿಕ ವೈಯುಕ್ತಿಕ ಸಮಸ್ಯೆಯಿಂದ ಮಹಮ್ಮದ್ ಆ ಊರಲ್ಲಿ ಇರದ ಕಾರಣ ಬ್ಯಾಂಕ್‌ಗೆ ಸರಿಯಾಗಿ ಭೇಟಿ ನೀಡೋದಿಲ್ಲ. ಆದರೆ ಕಾರ್ತಿಕ್ ಆತ್ಮಹತ್ಯೆ ಮಾಡಿಕೊಂಡ ಸುದ್ದಿ ಕೇಳಿ ಸಂಶಯಗೊಂಡ ಮಹಮ್ಮದ್, ಬ್ಯಾಂಕ್‌ನಲ್ಲಿ ತಾವು ಅಡವಿಟ್ಟ ಚಿನ್ನದ ಬಗ್ಗೆ ವಿಚಾರಿಸುತ್ತಾರೆ. ಆದರೆ ಆವಾಗ ಶಾಕಿಂಗ್ ವಿಚಾರವೊಂದು ಬೆಳಕಿಗೆ ಬರುತ್ತೆ. ಚಿನ್ನ ಅಡವಿಟ್ಟ 4 ತಿಂಗಳಲ್ಲೇ ಅಡವಿಟ್ಟ ಬಂಗಾರ ಬಿಡಿಸಿರುವ ಬಗ್ಗೆ ಬ್ಯಾಂಕ್ ಅಧಿಕಾರಿಗಳು ವಿವರ ನೀಡಿದ್ದಾರೆ. ಕಾರ್ತಿಕ್ ಭಟ್ ಈ ಬಂಗಾರದ ಒಡವೆಗಳನ್ನು ಅಲ್ಲಿಂದ ಎಗರಿಸಿ ಅದರ ಮೂಲ ಬೆಲೆಗೆ ಮಾರಿದ್ದಾನೆ ಎಂದು ಬಂಗಾರದ ಒಡವೆ ಕಳೆದುಕೊಂಡ ಮಹಮ್ಮದ್ ಆರೋಪಿಸಿದ್ದಾರೆ.

ಕಾರ್ತಿಕ್ ಭಟ್ ವಿರುದ್ಧ ಕೇಳಿ ಬಂದಿರುವ ಈ ವಂಚನೆ ಆರೋಪದ ಸತ್ಯಾಸತ್ಯತೆ ಪೊಲೀಸ್ ತನಿಖೆಯಿಂದ

ಮೊದಲನೇ ಪುಟದಿಂದ...

ಹೊರಬರಬೇಕಿದೆ. ಅನೇಕ ಜನರು ಕಾರ್ತಿಕ್ ಭಟ್‌ನಿಂದ ವಂಚನೆಗೆ ಒಳಗಾಗಿದ್ದೇವೆ ಎಂದು ಆರೋಪಿಸುತ್ತಿದ್ದಾರೆ.

## ಡಿಜಿಟಲ್ ಲಾಕರ್ ಸೌಲಭ್ಯ

**ಡಿಜಿಟಲ್ ಲಾಕರ್ ಉಪಯೋಗ:** ಸ್ಮಾರ್ಟ್ ಡಿಜಿಟಲ್ ಲಾಕರ್‌ನಲ್ಲಿನ ಕಿಯೋಸ್ಕ್‌ನಲ್ಲಿನ ಆಯ್ಕೆಗಳನ್ನು ಭರ್ತಿ ಮಾಡಿ ಮೊಬೈಲ್ ಸಂಖ್ಯೆಯನ್ನು ನಮೂದಿಸಿದರೆ, ಒಟಿಪಿ ಬರಲಿದೆ. ಅದನ್ನು ಕಿಯೋಸ್ಕ್‌ನಲ್ಲಿ ಹಾಕಿದರೆ ಬ್ಯಾಗ್‌ಗಳನ್ನು ಇಡಲು ಲಾಕರ್ ದೊರೆಯಲಿದೆ. ನಂತರ, ಲಾಕರ್‌ನಲ್ಲಿ ಬ್ಯಾಗ್ ಇಟ್ಟು ಲಾಕ್ ಮಾಡಬೇಕು. ಅನಂತರ ತೆರೆಯಬೇಕಿದ್ದರೆ ಬ್ಯಾಗ್ ಮಾಲೀಕರೇ ಬಂದು ಒಟಿಪಿ ಹಾಕಬೇಕು. ಆಗ ಲಾಕರ್ ತೆರೆಯುತ್ತದೆ. ಹೀಗಾಗಿ, ಬೇರೆಯವರು ದುರ್ಬಳಕೆ ಮಾಡಿಕೊಳ್ಳಲು ಸಾಧ್ಯವಿಲ್ಲ.

**ಎಷ್ಟು ಹಣ ಪಾವತಿಸಬೇಕು?:** 2 ರಿಂದ 3 ಬ್ಯಾಗ್‌ಗಳನ್ನು 6 ಗಂಟೆಗಳ ಕಾಲ ಇಡಲು 70 ರೂ. ಹಾಗೂ 4 ರಿಂದ 5 ಬ್ಯಾಗ್‌ಗಳನ್ನು ಇಡಲು 100 ರೂ. ಶುಲ್ಕ ವಿಧಿಸಲಾಗುತ್ತದೆ. ಅದೇ 12 ಗಂಟೆಗಳ ಕಾಲ ಬ್ಯಾಗ್‌ಗಳನ್ನು ಇಟ್ಟರೆ ಕ್ರಮವಾಗಿ 120 ಮತ್ತು 160 ರೂ. ಶುಲ್ಕ ನಿಗದಿ ಮಾಡಲಾಗಿದೆ.

**ಶೀಘ್ರದಲ್ಲೇ ಎಲ್ಲ ನಿಲ್ದಾಣಗಳಿಗೂ ವಿಸ್ತರಣೆ:** ನೂತನ ಸೇವೆಯು ಸದ್ಯ ಮೆಜೆಸ್ಟಿಕ್ ಕೆಂಪೇಗೌಡ, ಚಿಕ್ಕಪೇಟೆ ಹಾಗೂ ಬೆನ್ನಿಗಾನಹಳ್ಳಿ ಮೆಟ್ರೋ ರೈಲು ನಿಲ್ದಾಣಗಳಲ್ಲಿ ಆರಂಭಿಸಲಾಗಿದೆ. ಶೀಘ್ರದಲ್ಲೇ ಇತರ ನಿಲ್ದಾಣಗಳಿಗೂ ವಿಸ್ತರಿಸಲು ಸೇಫ್ ಕ್ಲಾಕ್ ಸಂಸ್ಥೆ ಯೋಜಿಸಿದೆ.

## ಹರಾಜು

ಕತ್ತಿಯನ್ನು ಉಡುಗೊರೆಯಾಗಿ ಪಡೆದಿದ್ದ ಡಿಕ್ 75 ನೇ ಹೈಲ್ಯಾಂಡ್ ರೆಜಿಮೆಂಟ್ ಆಫ್ ಫೂಟ್‌ನಲ್ಲಿ ಸೆರಿಂಗಪಟ್ಟಂನಲ್ಲಿ ಲೆಫ್ಟಿನೆಂಟ್ ಆಗಿ ಸೇವೆ ಸಲ್ಲಿಸಿದ್ದರು. ಯುದ್ಧದ ನಂತರ ಟಿಪ್ಪುವಿನ ದೇಹವನ್ನು ಹುಡುಕುವಲ್ಲಿ ಅವನ ರೆಜಿಮೆಂಟ್ ಸಹಾಯ ಮಾಡಿತ್ತು.

## ಶರಣು

ಘಟನೆಗೆ ಸಂಬಂಧಿಸಿದಂತೆ ಬೈಲುಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ತನ್ನವರಿಂದಲೇ ಸಿದ್ದುಗೆ ಸಂಕಷ್ಟ!

### ಬಲಗೈ, ಎಡಗೈನಂತಿದ್ದ ನಾಯಕರೇ ಸಿಎಂ ಕುರ್ಚಿಗೆ ಕಂಟಕ?

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಸಾಲು ಸಾಲು ಹಗರಣಗಳ ಆರೋಪ ಕೇಳಿಬರುತ್ತಿವೆ. ಈ ನಡುವೆ ವಕ್ಫ್ ಆಸ್ತಿ ವಿವಾದ ದೇಶದ ಗಮನಸೆಳೆಯುವಂತೆ ಮಾಡಿದೆ. ಈಗಾಗಲೇ ರೈತರ ಭೂಮಿಯು ವಕ್ಫ್ ಆಸ್ತಿಯಾಗಿ ನಮೂದಾಗಿವೆ. ಮಠಗಳು ಹಾಗೂ ಹಿಂದೂ ದೇವಾಲಯದ ಆಸ್ತಿಗಳು ಕೂಡ ವಕ್ಫ್ ಆಸ್ತಿಯಾಗಿ ದಾಖಲಾತಿಯಲ್ಲಿ ನಮೂದಾಗಿವೆ. ಇಂತಹ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ, ಸರ್ಕಾರದ ಗುತ್ತಿಗೆಯಲ್ಲೂ ಮುಸ್ಲಿಮರಿಗೆ ಮೀಸಲಾತಿ ನೀಡಲು ಮುಂದಾಗಿದ್ದಾರೆ ಎನ್ನುವ ವಿಚಾರ ಹೈಕಮಾಂಡ್ ಅಂಗಳ ತಲುಪಿದೆ.

**ಸಿದ್ದರಾಮಯ್ಯಗೆ ತಮ್ಮರಿಂದಲೇ ಸಿಎಂ ಕುರ್ಚಿಗೆ ಕುತ್ತು!:** ವಕ್ಫ್ ಆಸ್ತಿ ವಿವಾದದಿಂದ ರಾಜ್ಯ ಕಾಂಗ್ರೆಸ್ ಸರ್ಕಾರ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂದು ಬಿಜೆಪಿ ಸೇರಿದಂತೆ ಹಿಂದೂ ಪರ ಸಂಘಟನೆಗಳು ಆರೋಪ ಮಾಡಿದ್ದವು. ಇದರ ಬೆನ್ನಲ್ಲೇ ಸರ್ಕಾರಿ ಕಾಮಗಾರಿಯಲ್ಲಿ ಮುಸ್ಲಿಮರಿಗೆ ಗುತ್ತಿಗೆ ನೀಡಲು ಮುಂದಾಗಿದೆ ಎನ್ನುವ ವಿಚಾರ ಕೇಸರಿ ಪಡೆಗೆ ಬ್ರಹ್ಮಾಸ್ತ್ರ ಸಿಕ್ಕಂತಾಗಿದೆ. ಈ ಎಲ್ಲ ಹಗರಣ ಹಾಗೂ ವಿವಾದಗಳು ಸಿಎಂ ಆಪ್ತರಿಂದಲೇ ಹುಟ್ಟಿಕೊಂಡಿರುವುದರಿಂದ ಸಿದ್ದರಾಮಯ್ಯ ಅವರಿಗೆ ತಮ್ಮರಿಂದಲೇ ಸಿಎಂ ಕುರ್ಚಿಗೆ ಕುತ್ತು ಬಂದೊದಗುತ್ತಾ? ಎನ್ನುವ ಪ್ರಶ್ನೆಗಳು ಮೂಡಿವೆ.

**ಸರಣಿ ಹಗರಣಗಳ ಆರೋಪದಿಂದ ಹೈಕಮಾಂಡ್ ಮುಜುಗರ:** ಒಂದು ಕಡೆ ಸಿಎಂ ಸೇರಿದಂತೆ ಸಚಿವರುಗಳ ಮೇಲೆ ಸರಣಿ ಹಗರಣಗಳ ಆರೋಪ ಕೇಳಬಂದಿದೆ.



ಮತ್ತೊಂದೆಡೆ ವಕ್ಫ್ ಹಾಗೂ ಮುಸ್ಲಿಂ ಮೀಸಲಾತಿ ವಿವಾದಗಳು ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುತ್ತಿವೆ. ಇದರಿಂದ ಎಐಸಿಸಿ ವರಿಷ್ಠರಿಗೆ ತೀವ್ರ ಮುಜುಗರ ತಂದಿದೆ.

**ಕೇಂದ್ರ, ಬಿಜೆಪಿಗೆ ಅಸ್ತ್ರವಾದ ರಾಜ್ಯದ ಹಗರಣಗಳು:** ದೇಶದಲ್ಲಿ ನಡೆಯುತ್ತಿರುವ ಚುನಾವಣಾ ಭಾಷಣಗಳಲ್ಲಿ ಮೋದಿ ಸೇರಿ ಕೇಂದ್ರ ಸಚಿವರೆಲ್ಲರೂ ಕರ್ನಾಟಕ ರಾಜ್ಯದ ಹಗರಣಗಳ ಬಗ್ಗೆ ಪ್ರಸ್ತಾಪ ಮಾಡುತ್ತಿದ್ದಾರೆ. ಇದರಿಂದ ಮಹಾರಾಷ್ಟ್ರ, ಜಾರ್ಖಂಡ್, ಲೋಕಸಭೆ ಉಪ ಚುನಾವಣೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಅಲ್ಪಸಂಖ್ಯಾತರ ಓಲೈಕೆಗಾಗಿ ಹಿಂದೂಗಳ ಭಾವನೆಗೆ ಧಕ್ಕೆ ಆಗ್ತಿದೆ ಎಂದು ಹೈ ಕಮಾಂಡ್ ಸಿದ್ದು ಸರ್ಕಾರದ ವಿರುದ್ಧ ಕೆಂಡವಾಗಿದೆ. ಸಿಎಂ ಸಿದ್ದರಾಮಯ್ಯ ಅವರ ಆಪ್ತ ಬಳಗದಿಂದಲೇ ಈ ವಿವಾದ ಸೃಷ್ಟಿಯಾಗಿದೆ ಎಂದು ಹೈಕಮಾಂಡ್ ತೀವ್ರ ಅಸಮಧಾನಗೊಂಡಿದೆ.

## ದೇವೇಗೌಡರು ನನ್ನ ಸೊಕ್ಕು ಮುರಿಯುತ್ತೇನೆ ಎಂದಿದ್ದು ಸರಿಯೇ?

**ಮೈಸೂರು:** ನನ್ನನ್ನು ದೇವೇಗೌಡರು ಸೊಕ್ಕು ಮುರಿಯುತ್ತೇನೆ. ಗರ್ವಭಂಗ ಮಾಡುತ್ತೇನೆ ಎಂದು ಹೇಳಿದ್ದು ಸರಿಯೇ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಚನ್ನಪಟ್ಟಣ ಚುನಾವಣಾ ಪ್ರಚಾರದಲ್ಲಿ ಜಮೀರ್ ಅಹ್ಮದ್ ಅವರು ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಅವರನ್ನು ಕರಿಯ ಎಂದು ಕರೆದ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಸಿಎಂ ಈ ಉತ್ತರ ನೀಡಿದ್ದಾರೆ.

ಜಮೀರ್ ಮತ್ತು ಕುಮಾರಸ್ವಾಮಿ ಥಿಕ್ ಅಂಡ್ ಥಿನ್ ಫ್ರೆಂಡ್ಸ್. ಅವರವರ ನಡುವೆ ಏನೇನೋ ನಡೆಯುತ್ತಿರುತ್ತದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಜಮೀರ್ ಈಗಾಗಲೇ ಸ್ಪಷ್ಟೀಕರಣ ಕೊಟ್ಟಿದ್ದಾರೆ. ಇದೆಲ್ಲವೂ ಉಪಚುನಾವಣೆಯ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಸಿಎಂ ತಿಳಿಸಿದರು.

ಅಬಕಾರಿಯಲ್ಲಿ ಒಂದೇ ಒಂದು ಪೈಸಾ ಭ್ರಷ್ಟಾಚಾರ ಮಾಡಿದರೆ ನಾನು ರಾಜಕೀಯ ಬಿಡುತ್ತೇನೆ. ಬಿಜೆಪಿ ಅವಧಿಯಲ್ಲಿನ ಕೋವಿಡ್ ವೇಳೆ ನಡೆದ ಭ್ರಷ್ಟಾಚಾರ ಬಗ್ಗೆ ಪ್ರಧಾನಿ ಏನು ಹೇಳುತ್ತಾರೆ? ಮೋದಿಯವರು ಪ್ರಧಾನಿ ಸ್ಥಾನ ಬಿಡುತ್ತಾರಾ ಎಂದು ಪ್ರಶ್ನಿಸಿ ತಿರುಗೇಟು ನೀಡಿದರು.

ಪ್ರಧಾನಿ ಮೋದಿ ಅವರಿಗೆ ಕರ್ನಾಟಕ ಮತ್ತು ಸಿದ್ದರಾಮಯ್ಯ ಇಬ್ಬರು ಟಾರ್ಗೆಟ್. ಕರ್ನಾಟಕ ಅತಿ ದೊಡ್ಡ ರಾಜ್ಯವಾಗಿದ್ದು ಇಲ್ಲಿ ನಾವು 136 ಸ್ಥಾನ ಗೆದಿದ್ದೇವೆ. ಹೀಗಾಗಿ ನಮ್ಮನ್ನೇ ಟಾರ್ಗೆಟ್ ಮಾಡುತ್ತಿದ್ದಾರೆ ನಮ್ಮಲ್ಲಿ ಯಾವ ಭ್ರಷ್ಟಾಚಾರವೂ ಇಲ್ಲ ಎಂದರು.

# ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** 2024-25 ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗಾಗಿ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದ್ದು, ಅರ್ಜಿಗಳನ್ನು ಇಲಾಖೆಯ ವೆಬ್‌ಸೈಟ್ www.swdhims.karnataka.gov.in ನಲ್ಲಿ ಪಡೆಯಬಹುದಾಗಿದೆ. ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 25% ಮೀಸಲಾತಿ ಇದ್ದು, ಆ ವಿದ್ಯಾರ್ಥಿಗಳು ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ದೃಢೀಕೃತ ದಾಖಲೆಗಳನ್ನು ಆಯ್ಕೆ ಮಾಡಿರುವ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರುಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆದಿಪಂಪ ರಸ್ತೆಯಲ್ಲಿರುವ ಡಾ|| ಬಾಬು ಜಗಜೀವನರಾಂ ಭವನ ಕಟ್ಟಡದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ದೂ.ಸಂ: 0821-2520910 ಅನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಮೈಸೂರು:** ''ಪ್ರಧಾನ ಮಂತ್ರಿ-ಬೀದಿಬದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ (ಪಿ.ಎಂ.ಸ್ವನಿಧಿ) ಯೋಜನೆಯಡಿ, ಕಡಿಮೆ ಬಡ್ಡಿದರದಲ್ಲಿ ಬ್ಯಾಂಕ್ ಮೂಲಕ ಸಾಲ ಸೌಲಭ್ಯ ಕಲ್ಪಿಸಲು ನಗರಸಭೆ ಹೂಟಗಳ್ಳಿ, ಪಟ್ಟಣ ಪಂಚಾಯಿತಿಗಳಾದ ಬೋಗಾದಿ, ಶ್ರೀರಾಂಪುರ, ರಮ್ಮನಹಳ್ಳಿ ಮತ್ತು ಕಡಕೊಳ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ Ministry of Housing and Urban Affairs £À https://pmsvanidhi.mohua.gov.inವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಬೀದಿಬದಿ ವ್ಯಾಪಾರಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಬೀದಿಬದಿ ವ್ಯಾಪಾರಿಗಳು ಕೆ.ವೈ.ಸಿ. ದಾಖಲೆಗಳೊಂದಿಗೆ ನಿಮ್ಮ ಹತ್ತಿರದ ಸಿ.ಎಸ್.ಸಿ ಕಂಪ್ಯೂಟರ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಬೀದಿಬದಿ ವ್ಯಾಪಾರಿಗಳು ತಾವು ವ್ಯಾಪಾರ ಮಾಡುತ್ತಿರುವ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳನ್ನು ಭೇಟಿ ಮಾಡಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ.ಎ.ಎಸ್ ಪರೀಕ್ಷೆಗೆ ತರಬೇತಿ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ, ಕರ್ನಾಟಕ ಲೋಕ ಸೇವಾ ಆಯೋಗ ದವರು 2024ರ ಡಿಸೆಂಬರ್ 29 ರಂದು ನಡೆಸಲಿರುವ ಕೆಎಎಸ್ ಪರೀಕ್ಷೆಗೆ 30 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು ನವೆಂಬರ್ 16 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕ.ರಾ.ಮು.ವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಚೇರಿಯಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವ ಪ್ರೊ. ಕೆ.ಬಿ. ಪ್ರವೀಣ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ 0821-2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

# 19ರಂದು ಪ್ರತಿಭಾಕಾರಂಜಿ

**ರಾಮನಗರ:** 2024-25ನೇ ಸಾಲಿನ ಜಿಲ್ಲಾ ಮಟ್ಟದ ಪ್ರತಿಭಾಕಾರಂಜಿ ಮತ್ತುಕಲೋತ್ಸವಕಾರ್ಯಕ್ರಮವನ್ನುಇದ ೇ ನ.19ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ನಗರದಗುರು ಭವನದಲ್ಲಿ ವೇದಿಕೆ ಕಾರ್ಯಕ್ರಮ ಹಾಗೂ ಸ್ಪರ್ಧೆಗಳನ್ನು ಬಾಲಕಿಯರ ಪದವಿ ಪೂರ್ವಕಾಲೇಜು (ಪ್ರೌಢಶಾಲಾ ವಿಭಾಗ) ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಜಿ.ಕೆ.ಬಿ.ಎಂ.ಎಸ್) ನಲ್ಲಿಆಯೋಜಿಸಲಾಗಿದೆ ಎಂದುಶಾಲಾ ಶಿಕ್ಷಣ ಇಲಾಖೆಯಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆಗಳ ಆಹ್ವಾನ

**ಮೈಸೂರು:** ಹುಣಸೂರು ನಗರಸಭಾ ವ್ಯಾಪ್ತಿಗೆ ಒಳಪಡುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ವಿಕಲಚೇತನರು ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ/ಇತರೆ ಫಲಾನುಭವಿಗಳಿಗೆ 2023-24 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಅನುದಾನ ಹಾಗೂ ನಗರಸಭಾ ಸಾಮಾನ್ಯ ನಿಧಿ ಅನುದಾನದಡಿ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು /ಇತರೆ ಫಲಾನುಭವಿಗಳನ್ನು ಕೌನ್ಸಿಲ್ ಸಭೆಯಲ್ಲಿ ಆಯ್ಕೆ ಮಾಡಿ ಕಛೇರಿಯ ನಾಮಫಲಕದಲ್ಲಿ ಪ್ರಕಟಣೆ ಪ್ರಚೂರಪಡಿಸಲಾಗಿದ್ದು, ಫಲಾನುಭವಿಗಳ ಆಯ್ಕೆ ಸಂಬಂಧ ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ, ಸಮರ್ಥ ದಾಖಲಾತಿಗಳೊಂದಿಗೆ ನವೆಂಬರ್ 20 ರೊಳಗಾಗಿ ಕಛೇರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಬಡತನ ನಿರ್ಮೂಲನೆ ಶಾಖೆಯನ್ನು ಸಂಪರ್ಕಿಸಬಹುದು.

# ರಾಷ್ಟ್ರೀಯ ಲೋಕ್‌ಅದಾಲತ್

**ರಾಮನಗರ:** ರಾಷ್ಟ್ರೀಯ ಲೋಕ್‌ಅದಾಲತ್‌ಅನ್ನುಡಿಸೆಂಬರ್ 14ರಂದು ನಗರದಜಿಲ್ಲಾಗ್ರಾಹಕರಆಯೋಗದಲ್ಲಿಆಯೋಜಿಸಲ ಾಗಿದೆಎಂದುಜಿಲ್ಲಾಗ್ರಾಹಕರ ವ್ಯಾಜ್ಯಗಳ ಪರಿಹಾರಆಯೋಗದ ಸಹಾಯಕರಿಜಿಸ್ಟ್ರಾರ್ ಮತ್ತು ಸಹಾಯಕ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಎಸ್‌ಪಿಬಿ ಗಾನ ರಸಾಯನ-3 ಯಶಸ್ವಿ ಪ್ರದರ್ಶನ

**ಮೈಸೂರಿನ ಶಾರದಾದೇವಿ ನಗರದಲ್ಲಿರುವ ಗಾನ ಚಂದನ ಕಲಾಬಳಗದ ವತಿಯಿಂದ ಇತ್ತೀಚೆಗೆ ನಾದಬ್ರಹ್ಮ ಸಭಾಂಗಣದಲ್ಲಿ ಎಸ್‌ಪಿಬಿ ಗಾನ ರಸಾಯನ-3 ಕಾರ್ಯಕ್ರಮವನ್ನು ಮಾಜಿ ನಗರಪಾಲಿಕೆ ಸದಸ್ಯ ಮ.ವಿ.ರಾಮಪ್ರಸಾದ್ ಅವರು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು. ಚಿತ್ರದಲ್ಲಿ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ಮುಖ್ಯಸ್ಥ ಕೆ.ಆರ್.ಯೋಗನರಸಿಂಹನ್ (ಮುರುಳಿ ಅಯ್ಯಂಗಾರ್), ಮಾಜಿ ನಗರಪಾಲಿಕೆ ಸದಸ್ಯ ಎಂ.ಡಿ.ಪಾರ್ಥಸಾರಥಿ, ಸಂಸ್ಥೆ ಸಂಸ್ಥಾಪಕ ಆರ್.ಸುಧೀಂದ್ರ, ಆರ್.ನಟರಾಜ್, ಎಸ್.ವಿಶ್ವನಾಥ್, ಶ್ರೀನಿವಾಸ್, ಹೆಚ್.ಗೋಪಾಲಕೃಷ್ಣ, ನಾಗರಾಜು, ಅಶ್ವಿನಿ, ಶಶಿಕಲಾ, ನಾಗಲಕ್ಷ್ಮಿ ಹಾಗೂ ಇತರರನ್ನು ಕಾಣಬಹುದು.**

# ನಾಳೆ ಜನಜಾತೀಯ ಗೌರವ್ ದಿವಸ್ ಆಚರಣೆ

**ಚಾಮರಾಜನಗರ:** ಭಗವಾನ್ ಶ್ರೀ ಬಿರ್ಸಾ ಮುಂಡಾ ಜಯಂತಿಯ ಅಂಗವಾಗಿ ಜನಜಾತೀಯ ಗೌರವ್ ದಿವಸ್ ಆಚರಣೆ ಮತ್ತು ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನ ಕಾರ್ಯಕ್ರಮ ಉದ್ಘಾಟನೆ ಹಾಗೂ ನೈಜ ದುರ್ಬಲ ಸಮುದಾಯದ ಪರಿಶಿಷ್ಟ ಪಂಗಡದ ಜೇನುಕುರುಬ ಜನಾಂಗದವರು ವಾಸಿಸುವ ಕಾಲೋನಿಗಳಲ್ಲಿ ಪ್ರಧಾನಮಂತ್ರಿ ಜನ್‌ಜಾತಿ ಆದಿವಾಸಿ ನ್ಯಾಯ ಮಹಾ ಅಭಿಯಾನ (ಪಿಎಂ-ಜನ್‌ಮನ್) ಯೋಜನೆಯಡಿ ಮಂಜೂರಾಗಿರುವ ಕಾಮಗಾರಿ ಶಂಕುಸ್ಥಾಪನೆ, ಉದ್ಘಾಟನೆ, ಸವಲತ್ತು ವಿತರಣೆ ಸಮಾರಂಭವನ್ನು ನವೆಂಬರ್ 15ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಈ ಎಲ್ಲಾ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಭಗವಾನ್ ಶ್ರೀ ಬಿರ್ಸಾ ಮುಂಡಾ ಅವರ ಅನುಯಾಯಿಗಳು, ಬುಡಕಟ್ಟು ಜನಾಂಗದ ಮುಖಂಡರು, ಬುಡಕಟ್ಟು ಸಮುದಾಯದ ಸಂಘ ಸಂಸ್ಥೆಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ದಲಿತಪರ, ಕನ್ನಡಪರ, ರೈತಪರ, ಮಹಿಳಾಪರ ಸಂಘಟನೆಗಳು, ಜಿಲ್ಲೆಯ ಎಲ್ಲಾ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಬೇಕು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಬಿಂದ್ಯಾ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬೆಳೆ ಹಾನಿ ವಿವರ ಪ್ರಕಟ : ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ಚಾಮರಾಜನಗರ:** ಮುಂಗಾರು ಹಂಗಾಮಿನಲಿ ಅತಿವೃಷ್ಟಿಯಿಂದ ತಾಲೂಕಿನಾದ್ಯಂತ ಆಗಿರುವ ಬೆಳೆಹಾನಿ ವಿವರವನ್ನು ಪ್ರಕಟಿಸಲಾಗಿದ್ದು ಈ ಸಂಬಂಧ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದಾಗಿದೆ. 2024-215ನೇ ಸಾಲಿನ ಮುಂಗಾರು ಹಂಗಾಮಿನ ಅವಧಿಯಲ್ಲಿ ಅಂದರೆ ದಿನಾಂಕ 01-10-2024 ರಿಂದ 31-10-2024 ವರೆಗೆ ಅತಿವೃಷ್ಠಿಯಿಂದ ಚಾಮರಾಜನಗರ ತಾಲೂಕಿನಾದ್ಯಂತ ಕೃಷಿ ಹಾಗೂ ತೋಟಗಾರಿಕಾ ಬೆಳೆಗಳು ಹಾನಿಯಾಗಿರುತ್ತದೆ. ಹಾನಿಗೊಳಗಾದ ಬೆಳೆಗಳಿಗೆ ಎಸ್.ಡಿ.ಅರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿಗಳ ಪ್ರಕಾರ ಪರಿಹಾರ ಪಾವತಿ ಮಾಡುವ ಸಂಬಂಧ ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದು ಜಂಟಿ ಸಮೀಕ್ಷೆ ಕೈಗೊಳ್ಳಲಾಗಿದೆ. ಜಂಟಿ ಸಮೀಕ್ಷೆಯಂತೆ ಬೆಳೆ ಹಾನಿ ವಿವರವನ್ನು ನಿಗದಿತ ನಮೂನೆಯಲ್ಲಿ ತಹಶೀಲ್ದಾರ್ ಕಚೇರಿ, ಕೃಷಿ, ತೋಟಗಾರಿಕರ ಇಲಾಖೆ, ಗ್ರಾಮ ಪಂಚಾಯಿತಿ, ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಿಸಿದ ತಹಶೀಲ್ದಾರ್, ಕೃಷಿ, ತೋಟಗಾರಿಕೆ, ಸಹಾಯಕ ನಿರ್ದೇಶಕರ ಕಚೇರಿಗೆ 7 ದಿವಸಗಳೊಳಗೆ ಸಲ್ಲಿಸುವಂತೆ ಚಾಮರಾಜನಗರ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡಿಗರ ಸಾಂಸ್ಕೃತಿಕ ಸಮ್ಮೇಳನ

**ಗೋವಾ(ಬಿಚೋಲಿಯಂ):** ಎಲ್ಲಾದರೂ ಇರು ಎಂತಾದರು ಇರು ಎಂದೆಂದಿಗೂ ನೀ ಕನ್ನಡಿಗನಾಗಿರು ಎಂಬ ರಾಷ್ಟ್ರಕವಿ ಕುವೆಂಪು ಅವರ ಸಂದೇಶವನ್ನು ಇಡೀ ವಿಶ್ವಕ್ಕೆ ನೀಡಿದ ಹಾಗೆ ಹೊರ ರಾಜ್ಯ ಅವರ ದೇಶದಲ್ಲಿರುವ ಕನ್ನಡಿಗರು ತಾವು ವಾಸಿಸುವ ಪ್ರದೇಶದಲ್ಲಿಯ ಜನರೊಂದಿಗೆ ಸೇರಿ ಕನ್ನಡ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸಿಕೊಂಡು ಕನ್ನಡ ತೇರನ್ನ ಎಳೆಯುವ ಮೂಲಕ ವಿಶ್ವ ಕನ್ನಡಿಗರಾಗಲು ಗೋವಾ ಕನ್ನಡಿಗರಿಗೆ ಕರೆ ನೀಡಿದರು.

ಅವರು ಗೋವಾದ ಬಿಚ್ಚುಲಿಯಂ ನ ಹೀರಬಾಯಿ ಜಾ0ಟೆ ಭವನದಲ್ಲಿ ನಡೆದ ಕನ್ನಡಿಗರ 15ನೇ ಸಾಂಸ್ಕೃತಿಕ ಸಮ್ಮೇಳನದಲ್ಲಿ ಗುರುವಂದನೆ ಸ್ವೀಕರಿಸಿ ತಮ್ಮ ಶಷ್ಟಾಬ್ಬಿ ಕಾರ್ಯಕ್ರಮವನ್ನು ಆಯೋಜಿಸಿದ ಕನ್ನಡ ಗೋವಾ ಕನ್ನಡಿಗರನ್ನು ಉದ್ದೇಶಿಸಿ ಮಾತನಾಡುತ್ತಾ ಕನ್ನಡ ಸಂಸ್ಕೃತಿ ಪರಂಪರೆಗೆ ಭವ್ಯವಾದ ಇತಿಹಾಸವಿದೆ

ಇದು ಪ್ರಾಚೀನ ಕಾಲದ ವಿಶ್ವದ ಶ್ರೇಷ್ಠ ಬಸವ ನಾಡಿನ ಸಂಸ್ಕೃತಿ ಯಾಗಿದ್ದು ಎಲ್ಲಾ ಧರ್ಮಿಯರನ್ನ ಒಳಗೊಂಡಂತೆ ವೈವಿಧ್ಯಮಯ ವೈಭವದ ಕರ್ನಾಟಕ ತನ್ನ ಸುವರ್ಣ ಸಂಭ್ರಮ ವನ್ನ ಆಚರಿಸಿಕೊಳ್ಳುವ ಶುಭ ಸಂದರ್ಭದಲ್ಲಿ ಗೋವಾದ ಕನ್ನಡಿಗರು ಕರ್ನಾಟಕ



ಜಾಗೃತಿ ವೇದಿಕೆ ಬೆಂಗಳೂರು ಸದಸ್ಯರು ನಡೆಸುತ್ತಿರುವ ಈ ಸಮ್ಮೇಳನ ಅತ್ಯಂತ ಮಹತ್ವದ್ದಾಗಿದ್ದು ಮುಂಬರುವ ದಿನಗಳಲ್ಲಿ ಗೋವಾದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಸಹಕಾರಿಯಾಗಲಿದೆ ಎಂದರು.

ಗೋವಾದ ವಾಸ್ಕೊದಲ್ಲಿ 2005ರಲ್ಲಿ ಈ ಕಾರ್ಯಕ್ರಮವನ್ನು ಪ್ರಾರಂಭದಲ್ಲಿ ಸಾನಿಧ್ಯವಹಿಸಿ ಉದ್ಘಾಟನೆ ಮಾಡಿದ ಸವಿನೆನಪನ್ನ ನೆನಪಿಸಿಕೊಂಡು ಗೋವಾದ ಬಿಚ್ಚುಲಿಯಂ ಕನ್ನಡಿಗರ ಸ್ವಾಭಿಮಾನದ ಕನ್ನಡ ತೇರನ್ನು ಎಳೆಯುವ ಕಾರ್ಯಕ್ರಮವನ್ನು ಶ್ಲಾಘಿಸಿದರು . ಅವರು ಕನ್ನಡಿಗರ ಸಾಂಸ್ಕೃತಿಕ ಸಮ್ಮೇಳನದಲ್ಲಿ ಸಾನಿಧ್ಯ ವಹಿಸಿ ಗುರುವಂದನೆ ಸ್ವೀಕರಿಸಿ ಭಕ್ತರು ಆಯೋಜಿಸಿದ್ದ ತಮ್ಮ ಷಷ್ಠಾಬ್ಬಿ ಕಾರ್ಯಕ್ರಮದಲ್ಲಿ ನೆರೆದಿದ್ದ ಸಾವಿರಾರು ಕನ್ನಡ ನುಡಿ ಸೇವಕರನ್ನು ಉದ್ದೇಶಿಸಿ ಮಾತನಾಡಿದರು. ಗೋವಾದಲ್ಲಿ ನಿರಂತರವಾಗಿ ಕನ್ನಡ ತೇರನ್ನು ಎಳೆಯುವ ಕೆಲಸವನ್ನು ಮಹೇಶ್ ಬಾಬು ಸುರ್ವೆ ಹಾಗೂ ಹನುಮಂತರೆಡ್ಡಿ ಶಿರೂರವರ ನೇತೃತ್ವದಲ್ಲಿ ನಡೆಯಲಿ ಎಂದು ಶುಭ ಹಾರೈಸಿದರು.

## ಕಲಾ ಪ್ರದರ್ಶನ

**ಕೊಪ್ಪಳದ ಗೊರ್ಲೆಕೊಪ್ಪದ ಮಹಿಳಾ ಡೊಳ್ಳು ಕುಣಿತ. ಕುಕುನೂರು ಇಟಗಿಯ ಕೋಲಾಟ. ಚಿತ್ರದುರ್ಗದ ಗೊಂಬೆ ಪ್ರದರ್ಶನ. ಗೋವಾದ ಜಾಂಜ್ ಮೇಳ. ಕಿತ್ತೂರಿನ ಸಮಾಳ ತಂಡಗಳು ಭಾಗವಹಿಸಿ ಕನ್ನಡಿಗರ 15ನೇ ಸಾಂಸ್ಕೃತಿಕ ಸಮ್ಮೇಳನ ಅಧ್ಯಕ್ಷ ಶ್ರೀ ಧನ್ಯ ಕುಮಾರ್ ಪಾಟೀಲ್ ಅವರ ಸಮ್ಮೇಳನ ಅಧ್ಯಕ್ಷರ ಮೆರವಣಿಗೆಗೆ ಮೆರಗನ್ನ ನೀಡಿದವು. ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಜಿಲ್ಲೆಯ ಸುಮಾರು 20ಕ್ಕೂ ಹೆಚ್ಚು ಕಲಾತಂಡಗಳು ಭಾಗವಹಿಸಿ ವೇದಿಕೆಯಲ್ಲಿ ಸಾಂಸ್ಕೃತಿಕ ಕಲಾ ಪ್ರದರ್ಶನವನ್ನು ನೀಡಿದವು. ಗಂಗಾವತಿಯ ದೀಪ ಶ್ಯಾಮ್ ನೇತೃತ್ವದ ಪ್ರತಿಭಾ ಕಲಾನಿಕೇತನ ತಂಡದಿಂದ ಸಮೂಹ ನೃತ್ಯ. ರುಕ್ಮಿಣಿ ಸರ್ವೆ ಬೆಂಗಳೂರ್ ತಂಡದಿಂದ ಸಮೋಹ ನೃತ್ಯ ಜೈವಿಹಾನ್ ಮಲ್ಲಿಕಾರ್ಜುನ ಮಠ ಬಿಜಾಪುರ್ ತಂಡದಿಂದ ಜಾನಪದ ನೃತ್ಯ ಅನುಷಾ ಆರ್ ಬೆಂಗಳೂರು ತಂಡದಿಂದ ಸಮೂಹ ಜಾನಪದ ನೃತ್ಯ. ಹೊಸಪೇಟೆಯ ವಿಜಯ ನೃತ್ಯ ತಂಡದಿಂದ ಸಮೂಹ ನೃತ್ಯ.ವಿಜಯ್ ಗವಿಮಠ ಇಲ್ಕಲ್ ತಂಡದಿಂದ ನೃತ್ಯ ರೂಪಕ ಶೀಲಾ ಜೀವಿ ಬೆಂಗಳೂರು ತಂಡದಿಂದ ಸಮೂಹ ನೃತ್ಯ ಕೊಪ್ಪಳದ ರಾಹುಲ್ ತಂಡದಿಂದ ಸಮೂಹ ನೃತ್ಯ. ಕುಕುನೂರಿನ ಸೂರಿ ತಂಡದಿಂದ ನೃತ್ಯರೂಪಕ ವಿದ್ಯಾ ಮಂಗಳೂರು ಕೊಪ್ಪಳ ತಂಡದಿಂದ ಸಮೂಹ ನೃತ್ಯ ಇನ್ನೂ ಅನೇಕ ಬೇರೆ ಬೇರೆ ಜಿಲ್ಲೆಯ ತಂಡಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಪ್ರದರ್ಶನಗಳು ನಡೆದಿದ್ದ ಪ್ರೇಕ್ಷಕರ ಮನಸೂರೆಗೊಂಡು ಕನ್ನಡ ಗೋವಾದಲ್ಲಿ ಕನ್ನಡ ಸಂಸ್ಕೃತಿಯನ್ನು ಬಿಂಬಿಸುವಲ್ಲಿ ಯಶಸ್ವಿಯಾದವು.**

## ದೀಪ ಬೆಳಗಿಸುವ ಮೂಲಕ ಉದ್ಘಾಟನೆ

**ಬಿಚ್ಚುಲಿಯಂ ಶಾಸಕರಾದ ಶ್ರೀ ಚಂದ್ರಕಾಂತ್ ಶೇಟಿ ಅವರು ಉದ್ಘಾಟಿಸಿ ಮೊದಲು ನಾವು ಭಾರತೀಯರು ನಂತರ ಕನ್ನಡಿಗರು ಕೊಂಕಣಿಯವರು ಗೋವಾದವರು ಮರಾಟಿಗರು . ಇಲ್ಲಿ ವಾಸಿಸುವ ಎಲ್ಲರೂ ಗೋವಾದ ಅಭಿವೃದ್ಧಿಯ ಬಗ್ಗೆ ಚಿಂತಿಸಬೇಕು ಎಂದು ಕರೆ ನೀಡಿದರು. ಸಾನಿಧ್ಯ ವಹಿಸಿದ್ದ ಹುಕ್ಕೇರಿಯ ಚಂದ್ರಶೇಖರ್ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡುತ್ತಾ ಗೋವಾ ಕನ್ನಡಿಗರ ಅಭಿಮಾನವನ್ನು ಕೊಂಡಾಡಿದರು. ಪ್ರಪ್ರಥಮ ಬಾರಿಗೆ ಗೋವಾದಲ್ಲಿ ಮಹಿಳೆಯರು. ದಾಖಲೆಯ 501 ಕುಂಭಗಳ ಮೆರವಣಿಯಲ್ಲಿ ಪಾಲ್ಗೊಂಡು ದಾಖಲೆ ನಿರ್ಮಿಸಿ ಸಮ್ಮೇಳನ ಅಧ್ಯಕ್ಷರ ಮೆರವಣಿಗೆಯನ್ನ ಯಶಸ್ವಿಗೊಳಿಸಿದರು ಎಂದು ಅಭಿಮಾನ ಪೂರ್ವಕವಾಗಿ ಮಾತನಾಡಿದರು. ಕಾರ್ಯಕ್ರಮಕ್ಕಿಂತ ಪೂರ್ವದಲ್ಲಿ ಶಾಂತದುರ್ಗ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿ 501 ಕುಂಭಗಳ ಕನ್ನಡ ಅಧ್ಯಕ್ಷರ ಮೆರವಣಿಗೆಗೆ ಕರ್ಮಭೂಮಿ ಕನ್ನಡ ಸಂಘದ ಪದಾಧಿಕಾರಿಗಳೊಂದಿಗೆ ಬೆಂಗಳೂರಿನ ಧಾರ್ಮಿಕ ಚಿಂತಕರಾದ ಶ್ರೀ ಮಂಜಯ್ಯ ಚಾವಡಿ. ಮತ್ತು ಸಮಾಜ ಸೇವಕರಾದ ಸಂಗನಾಬಸಪ್ಪ ಬಿರಾದಾರ್ ಅವರು ಮೆರವಣಿಗೆಗೆ ಚಾಲನೆ ನೀಡಿದರು.**

# ತಾನೊಂದು ಶಕ್ತಿ ಎಂಬುದನ್ನು ಮರೆತು ತಾನು ವ್ಯಕ್ತಿ ಎಂದುಕೊಂಡಿರುವುದೇ ಮನುಷ್ಯನ ಮಾನಸಿಕ ದುರ್ಬಲತೆಗೆ ಕಾರಣ

**ವಿಜಯಪುರ:** ಮನುಷ್ಯ ಮೊದಲಿಗೆ ನಾನು ಯಾರು ಎಂಬುದನ್ನು ಅರಿತುಕೊಳ್ಳಬೇಕಾಗಿದ್ದು ಮಹಾತ್ಮ ಗಾಂಧೀಜಿ ರವರು ತಿಳಿಸಿದಂತೆ ತನ್ನ ಅರಿವೇ ತನಗೆ ಗುರು ಎಂಬುದನ್ನು ನೆನಪಿಸಿ ಮನುಷ್ಯನ ದುರ್ಬಲತೆಗೆ ತನ್ನ ದೇಹಾಭಿಮಾನವಾಗಿದ್ದು, ತಾನು ಶಕ್ತಿ ಎಂಬುದನ್ನು ಮರೆತು ವ್ಯಕ್ತಿ ಎಂದು ತಿಳಿದುಕೊಂಡಿರುವುದೇ ಮನುಷ್ಯನ ಮಾನಸಿಕ ದುರ್ಬಲತೆಗೆ ಕಾರಣವಾಗಿದೆ ಎಂದು ಪಟ್ಟಣದ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಸಂಚಾಲಕಿ ಬ್ರಹ್ಮಕುಮಾರಿ ರೂಪಕ್ಕರವರು ತಿಳಿಸಿದರು.

ಅವರು ಇಲ್ಲಿನ ಅರಿವಿನ ಮನೆಯಲ್ಲಿ ಶ್ರೀ ವೀರಭದ್ರ ಸ್ವಾಮಿ ಗೋಷ್ಠಿ ಹಾಗೂ ಅಕ್ಕನ ಬಳಗದ ವತಿಯಿಂದ ಏರ್ಪಡಿಸಲಾಗಿದ್ದ ತಿಂಗಳ ಬೆಳಕು ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಅಕ್ಕನ (ಶರಣೆ ಮಹದೇವಿಯಕ್ಕನ) ಹಾದಿಯಲ್ಲಿ ನಡೆದ ಅಕ್ಕನ ಬಳಗದ ಶರಣೆಯರು ಜಗತ್ ಕಲ್ಯಾಣ ಮಾಡುವ ಜಗನ್ಮಾತೆಯರಂತೆ ಎಂದು ತಿಳಿಸಿದರು. ಶ್ರೀ ವೀರಭದ್ರ ಸ್ವಾಮಿ ಗೋಷ್ಠಿಯ ಅಧ್ಯಕ್ಷರಾದ ಅನಿಲ್ ಕುಮಾರ್ ರವರು ಮಾತನಾಡುತ್ತ ಎಲ್ಲರೂ ಒಂದೆಡೆ ಸಂಘಟನೆ ಸೇರುವುದು, ದೇವರ ನಾಮಸ್ಮರಣೆ ಮಾಡುವುದು, ಕೀರ್ತನೆಗಳನ್ನು ಪಠಿಸುವುದು, ಸತ್ಸಂಗಗಳಲ್ಲಿ ಪರಮಾತ್ಮನ ಮಹಿಮೆಯನ್ನು ಆಲಿಸುವುದರಿಂದ ದೊರೆಯುವ ಅನುಭವ ಆನಂದ ಟಿವಿ ಮೊಬೈಲ್ಗಳ ಮೂಲಕ ದೊರೆಯುವುದಿಲ್ಲವೆಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಉಪಾಧ್ಯಕ್ಷರಾದ ಅಂಬಾ ಭವಾನಿ, ಎಸ್.ರುದ್ರಮೂರ್ತಿ, ಎಸ್ .ಪಿ.ಕೃಷ್ಣಾನಂದ, ಕೃಷ್ಣಪ್ಪ ದಾಸರು ವಚನ ಬಳಗದ ಭಾನುಮತಿ ಕೋರಮಂಗಲ ರುದ್ರಪ್ಪ ಟ್ರಸ್ಟ್ ಅಧ್ಯಕ್ಷರಾದ ಸಿ.ಭಾಸ್ಕರ್, ಟ್ರಸ್ಟ್ ಸದಸ್ಯರಾದ ಮೀನಾ ಸುರೇಶ್ ಬಾಬು, ವಿಮಾಲಂಭ ಅನಿಲ್ ಕುಮಾರ್, ಭಾರತಿ ಶಿವಪ್ರಸಾದ್, ಗೌರವ ಕಾರ್ಯದರ್ಶಿಗಳಾದ ಮ.ಸುರೇಶ್ ಬಾಬು ಮತ್ತು ಅರಿವಿನ ಮನೆಯ ತಾಯಂದಿರು ಉಪಸ್ಥಿತರಿದ್ದರು.



# ಕನಕದಾಸರ ಜಯಂತಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ: ಹೆಚ್.ಡಿ.ಗಣೇಶ್

**ಪಿರಿಯಾಪಟ್ಟಣ:** ಪ್ರತಿವರ್ಷದಂತೆ ಈ ವರ್ಷವೂ ಕೂಡ ನ.18 ರಂದು ವಿಜೃಂಭಣೆಯಿಂದ ಕನಕದಾಸರ ಜಯಂತಿಯನ್ನು ಆಚರಿಸಲು ತಾಲೂಕಿನ ಜನತೆ ಕೈಜೋಡಿಸಬೇಕು ಎಂದು ತಾಲ್ಲೂಕು ಕುರುಬರ ಸಂಘದ ಅಧ್ಯಕ್ಷ ಹೆಚ್ .ಡಿ.ಗಣೇಶ್ ಮನವಿ ಮಾಡಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕು ಕುರುಬರ ಸಂಘದ ವತಿಯಿಂದ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನವೆಂಬರ 18 ರಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ತಾಲ್ಲೂಕು ಕುರುಬರ ಸಂಘದ ವತಿಯಿಂದ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ಪಟ್ಟಣದ ಡಿ.ದೇವರಾಜು ಅರಸು ಕಲಾ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮವನ್ನು ಸ್ಥಳೀಯ ಶಾಸಕರು ಹಾಗೂ ರೇಷ್ಮೆ ಹಾಗೂ ಪಶುಸಂಗೋಪನಾ ಖಾತೆ ಸಚಿವರಾದ ಶ್ರೀಯುತ ಕೆ.ವೆಂಕಟೇಶ್ ರವರು ಉದ್ಘಾಟಿಸಲಿದ್ದು, ಈ ಕಾರ್ಯಕ್ರಮಕ್ಕೆ ತಾಲೂಕಿನ ಎಲ್ಲಾ ಸೋದರ ಸಮಾಜದ ಬಂಧುಗಳು, ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು. ತಾಲ್ಲೂಕು ಕುರುಬರ ಸಂಘದ ಗೌರವಾಧ್ಯಕ್ಷ ದೊರೆ ಕೆರೆ ಜವರಪ್ಪ, ಉಪಾಧ್ಯಕ್ಷರಾದ ಎಂ.ಎಂ.ರಾಜೇಗೌಡ, ಎಂ.ಟಿ.ರಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್, ನಿರ್ದೇಶಕರಾದ ಬೆಟ್ಟದ ತುಂಗಾ ಮಲ್ಲಿಕಾರ್ಜುನ್, ಚಿಕ್ಕೇಗೌಡ, ಆರ್.ಎಸ್.ಮಹದೇವ್, ಮುತ್ತೂರು ಮಹಾದೇವ್ ಮುಖಂಡರಾದ ದೊರೆಕೆರೆ ನಾಗೇಂದ್ರ, ಕೋಳಿ ಮಂಜು, ಅಪ್ಪಾಜಿಗೌಡ, ಕರೀಗೌಡ, ಪುಟ್ಟರಾಜು, ಗಣೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# 20ರವರೆಗೆ ಅಖಿಲ ಭಾರತ ಸಹಕಾರ ಸಪ್ತಾಹ

**ಚಾಮರಾಜನಗರ:** 71 ನೇ ಅಖಿಲ ಭಾರತ ಸಹಕಾರ ಸಪ್ತಾಹದ ಅಂಗವಾಗಿ ನ. 14 ರಿಂದ 20 ರವರೆಗೆ ಜಿಲ್ಲೆಯಲ್ಲಿ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆ ಎಂದು ಜಿಲ್ಲಾ ಸಹಕಾರ ಯೂ ನಿಯನ್ ಅಧ್ಯಕ್ಷ ಎಚ್.ಎಸ್. ನಂಜುಂಡಪ್ರಸಾದ್ ತಿಳಿಸಿದರು.

ನ. 14 ರಂದು ಚಾಮರಾಜನಗರ ತಾಲೂಕಿನ ಕುದೇರಿನಲ್ಲಿರುವ ಚಾಮುಲ್ ಸಭಾಂಗಣದಲ್ಲಿ ಸಪ್ತಾಹಕ್ಕೆ ಚಾಮುಲ್ ಅಧ್ಯಕ್ಷ ನಾಗೇಂದ್ರ ಅವರು ಚಾಲನೆ ನೀಡಲಿದ್ದಾರೆ. ಇದೇ ವೇಳೆ ಸಹಕಾರ ಸಚಿವಾಲಯದ ನೂತನ ಪ್ರಯತ್ನಗಳ ಮೂಲಕ ಸಹಕಾರ ಚಳವಳಿಯನ್ನು ಬಲಪಡಿ ಸುವುದರ ಕುರಿತು ವಿಶೇಷ ಉಪನ್ಯಾಸ ನಡೆಯಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು. 15 ರಂದು ಹನೂರಿನ

ಚಾಮುಲ್ ಉಪ ಕಚೇರಿಯಲ್ಲಿ ಸಹಕಾರ ಸಂಸ್ಥೆಗಳಲ್ಲಿ ಅನ್ವೇಷಣೆ, ತಾಂತ್ರಿಕತೆ ಮತ್ತು ಉತ್ತಮ ಆಡಳಿತ, 16 ರಂದು ಕೊಳ್ಳೇಗಾಲದ ತಿಮ್ಮರಾಜೀಪುರದಲ್ಲಿ ಉದ್ಯಮಶೀಲತೆ, ಉದ್ಯೋಗ ಮತ್ತು ಕೌಶಲ್ಯಾಭಿವೃದ್ಧಿಯನ್ನು



ಉತ್ತೇಜಿಸುವಲ್ಲಿ ಸಹಕಾರ ಸಂಸ್ಥೆಗಳ ಪಾತ್ರ, 17 ರಂದು ಯಳಂದೂರಿನ ಗೌಡಹಳ್ಳಿಯಲ್ಲಿ ಸಹಕಾರಿ ಉದ್ಯಮಗಳಲ್ಲಿ ಪರಿವರ್ತನೆ, 18 ರಂದು ನಗರದ ಲ್ಯಾಂಪ್ಸ್ ಸಭಾಂಗಣದಲ್ಲಿ ಸಹಕಾರ ಸಂಸ್ಥೆಗಳ ನಡುವೆ ಸಹಕಾರವನ್ನು ಬಲಪಡಿಸುವುದನ್ನು, 19 ರಂದು ಗುಂಡ್ಲುಪೇಟೆ ಹಾಲಹಳ್ಳಿಯಲ್ಲಿ ಮಹಿಳೆಯರು, ಯುವಕರು ಮತ್ತು ಅಬಲವರ್ಗಗಳಿಗಾಗಿ ಸಹಕಾರ ಸಂಸ್ಥೆಗಳು ವಿಚಾರ ಹಾಗೂ 20 ರಂದು ಉತ್ತಮ ವಿಶ್ವ ನಿರ್ಮಾಣ ಹಾದಿಗಾಗಿ ಹಾಗೂ ಸುಸ್ಥಿರ ಅಭಿವೃದ್ಧಿ ಗುರಿ ಸಾಧನೆಯಲ್ಲಿ ಸಹಕಾರ ಸಂಸ್ಥೆಗಳ

ಪಾತ್ರ ಕುರಿತು ಉಪನ್ಯಾಸ ನಡೆಯಲಿದೆ ಎಂದು ತಿಳಿಸಿದರು. ಜವಹರಲಾಲ್ ನೆಹರೂ ಜನ್ಮದಿನದ ಅಂಗವಾಗಿ ದೇಶಾದ್ಯಂತ ಸಹಕಾರ ಸಪ್ತಾಹ ಕಾರ್ಯಕ್ರಮ ಆಯೋಜಿಸಲಾಗಿದೆ. ರಾಜ್ಯದಲ್ಲಿ 25 ಸಾವಿರಕ್ಕೂ ಹೆಚ್ಚು ಸಹಕಾರ ಸಂಘಗಳಿವೆ ಎಂದರು. ಸುದ್ದಿಗೋಷ್ಠಿಯಲ್ಲಿ ಯೂನಿಯನ್ ನಿರ್ದೇಶಕರಾದ ಸುಂದರಪ್ಪ, ಬಸವಣ್ಣ, ನಾಗರಾಜು, ಸಿಇಒ ಮನುಜ ಇದ್ದರು.

# ರಾಷ್ಟ್ರೀಯ ಸೇವಾ ಯೋಜನೆ, ವಿವಿಧ ಸಮಿತಿಗಳ ಉದ್ಘಾಟನಾ ಸಮಾರಂಭ

**ಚಾಮರಾಜನಗರ:** ತಾಲೂಕಿನ ಭೋಗಾಪುರದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಾಂಸ್ಕೃತಿಕ, ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ವಿವಿಧ ಸಮಿತಿಗಳ ಉದ್ಘಾಟನಾ ಸಮಾರಂಭವನ್ನು ನವೆಂಬರ್ 15 ರಂದು ಬೆಳಿಗ್ಗೆ 10.30 ಗಂಟೆಗೆ ಭೋಗಾಪುರದ ಕಾಲೇಜಿನ ಮಾತೆ ಸಾವಿತ್ರಿ ಬಾಪುಲೆ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಶಾಸಕರು ಹಾಗೂ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಕಾಲೇಜು ಅಭಿವೃದ್ದಿ ಸಮಿತಿಯ ಅಧ್ಯಕ್ಷರೂ ಆಗಿರುವ ಸಿ. ಪುಟ್ಟರಂಗಶೆಟ್ಟಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಭೋಗಾಪುರ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಪಿ. ದೇವರಾಜು ಅವರು ಅಧ್ಯಕ್ಷತೆ ವಹಿಸುವರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಎನ್. ಮುನಿರಾಜು, ಹನೂರಿನ ಜಿ.ವಿ.ಗೌಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಪ್ರೊ. ಚಂದ್ರಮ್ಮ, ಭೋಗಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರೂಪ, ಸಂಸ್ಕೃತಿಕ ಚಿಂತಕರಾದ ಅಂತರ ರಾಷ್ಟ್ರೀಯ ಮಟ್ಟದ ಖ್ಯಾತ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# 500 ಕಟ್ಟಡ, ಇತರೆ ಕಾರ್ಮಿಕರಿಗೆ ಕಿಟ್ ವಿತರಣೆ



**ಪಿರಿಯಾಪಟ್ಟಣ:** ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರಿಗೆ ನೆರವಾಗಲು ರಾಜ್ಯ ಸರ್ಕಾರ ಕಿಟ್ ನೀಡುತ್ತಿದ್ದು ಈ ಸೌಲಭ್ಯಗಳನ್ನು ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಆಯೋಜಿಸಿದ್ದ ಕಿಟ್ ವಿತರಣಾ ಸಮಾರಂಭದಲ್ಲಿ ಕಿಟ್ ವಿತರಿಸಿ ಮಾತನಾಡಿದರು.

ರಾಜ್ಯ ಸರ್ಕಾರ ಕಟ್ಟಡ ಹಾಗೂ ಇತರೆ ನಿರ್ಮಾಣ ಕ್ಷೇತ್ರದಲ್ಲಿ ದುಡಿಯುತ್ತಿರುವ ಬಡ ಹಿಂದುಳಿದ ವರ್ಗಗಳ ಕಾರ್ಮಿಕರ ಸಂಕಷ್ಟಗಳಿಗೆ ಸ್ಪಂದಿಸುವ ಮೂಲಕ ಅವರಿಗೆ ಕಿಟ್ ನೀಡುತ್ತಿದೆ. ಈ ಹಿಂದೆ ಕೋವಿಡ್ ಸಂದರ್ಭದಲ್ಲಿ ಆಹಾರ ಧಾನ್ಯದ ಕಿಟ್ ನೀಡಲಾಗಿತ್ತು ಎಂದರು.

ಜಿಲ್ಲಾ ಕಾರ್ಮಿಕ ಮಂಡಳಿ ನಿರ್ದೇಶಕ ಚೇತನ್ ಕುಮಾರ್ ಮಾತನಾಡಿ ಕಾರ್ಮಿಕ ಮಂಡಳಿ ವತಿಯಿಂದ ನೋಂದಾಯಿತ ಫಲಾನುಗಳಿಗೆ ಪಿಂಚಣಿ ಸೌಲಭ್ಯ, ಕುಟುಂಬ ಪಿಂಚಣಿ ಸೌಲಭ್ಯ, ದುರ್ಬಲದ ಪಿಂಚಣಿ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ಸಾವು ವೆಚ್ಚ, ಶೈಕ್ಷಣಿಕ ಸಹಾಯಧನ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯಧನ, ಮದುವೆ ಸಹಾಯಧನ, ತಾಯಿ ಮಗು ಸಹಾಯಸ್ತ ಸೇರಿದಂತೆ ಇನ್ನೂ ಹತ್ತು ಹಲವಾರು ಸೌಲಭ್ಯಗಳನ್ನು ಸರ್ಕಾರ ನೀಡುತ್ತಿದ್ದು ಇದನ್ನು ಕಾರ್ಮಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್, ತಾಲ್ಲೂಕು ಕಾರ್ಮಿಕ ನಿರೀಕ್ಷಕರಾದ ಸಿ.ಎನ್.ಮಂಜುನಾಥ್, ಗೋವಿಂದರಾಜ್, ಶಿರಸ್ತೇದಾರ್ ವಿನೋದ್ ಕುಮಾರ್ ಸೇರಿದಂತೆ 500 ಹೆಚ್ಚು ಕಾರ್ಮಿಕರು ಉಪಸ್ಥಿತರಿದ್ದರು.

# ಅರಿತು ನಡೆದರೆ ಬದುಕು ಬಂಗಾರ ಮರೆತು ನಡೆದರೆ ಬದುಕು ಬಂಧನಕಾರಿ

**ಹೊನ್ನಾಳಿ:** ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು. ಸಂತೃಪ್ತಿ ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಅರಿವುಳ್ಳ ಮಾನವ ಜನ್ಮದಲ್ಲಿ ಅರಿತು ನಡೆದರೆ ಬದುಕು ಬಂಗಾರಗೊಳ್ಳುತ್ತದೆ. ಮರೆತು ನಡೆದರೆ ಬದುಕು ಬಂಧನಕಾರಿಯಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಕ್ಯಾಸಿನಕೆರೆ ಗ್ರಾಮದಲ್ಲಿ ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮಪ್ರಜ್ಞೆ ಮತ್ತು ಸದಾಚಾರ ಬೆಳೆದು ಬರಬೇಕು. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಅಪಾಯ ತಪ್ಪಿದ್ದಲ್ಲ. ಜೀವನ ಮೌಲ್ಯಗಳನ್ನು ನಿರ್ಲಕ್ಷಿಸಿದರೆ ಅಧ:ಪತನ ನಿಶ್ಚಿತ. ಜ್ಞಾನ ಕ್ರಿಯಾತ್ಮಕ ಧರ್ಮಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುತ್ತದೆ. ವಿಜ್ಞಾನ ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಭಾವನೆಗಳು ಬೆಳೆಯದಿರುವುದೇ ಇಂದಿನ ಅವಾಂತರಗಳಿಗೆ ಕಾರಣವೆಂದರೆ ತಪ್ಪಾಗದು. ಸುಳ್ಳಿಗೆ ಸಾವಿರ ಮಿತ್ರರು. ಆದರೆ ಸತ್ಯಕ್ಕೆ ಎಲ್ಲರೂ ಶತ್ರುಗಳೇ. ಜನ ಸುಳ್ಳನ್ನು ನಂಬುವಷ್ಟು ಸತ್ಯವನ್ನು ನಂಬುವುದಿಲ್ಲ. ಸತ್ಯ ಸೈದ್ಧಾಂತಿಕ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಳ್ಳಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಬೋಧಿಸಿದ್ದಾರೆ. ದುಷ್ಟರ ಸಂಹಾರ ಶಿಷ್ಟರ ಸಂರಕ್ಷಣೆಗಾಗಿ ಶ್ರೀ ವೀರಭದ್ರೇಶ್ವರ ಸ್ವಾಮಿಯ ಅವತಾರವಾಗಿದೆ. ದಕ್ಷಬ್ರಹ್ಮನ ದುರಹಂಕಾರ ಹೆಚ್ಚಾದಾಗ ಶಿವಸಂಸ್ಕೃತಿ ಎತ್ತಿ ಹಿಡಿಯಲು ಪರಮಾತ್ಮನ ಜಟಾ ಮುಕುಟದಿಂದ ಅವತರಿಸಿ ಬಂದಾತ



ಶ್ರೀ ವೀರಭದ್ರಸ್ವಾಮಿ. ಅನ್ಯಾಯ ಅಧರ್ಮದ ಇಂದಿನ ದಿನಮಾನಗಳಲ್ಲಿ ಮತ್ತೊಮ್ಮೆ ಶ್ರೀ ವೀರಭದ್ರಸ್ವಾಮಿ ಅವತರಿಸಿ ಜನಸಮುದಾಯವನ್ನು ಸನ್ಮಾರ್ಗಕ್ಕೆ ಕರೆತರುವ ಅವಶ್ಯಕತೆಯಿದೆ. ಕ್ಯಾಸನಕೆರೆ ಸಕಲ ಸದ್ಭಕ್ತರು ಒಗ್ಗಟ್ಟಿನಿಂದ ಬಹು ದೊಡ್ಡ ಸಮಾರಂಭ ಹಮ್ಮಿಕೊಂಡಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ ಎಂದರು. ಈ ಪವಿತ್ರ ಸಮಾರಂಭವನ್ನು ಹೊನ್ನಾಳಿ ಹಿರೇಕಲ್ಮಠದ ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಉದ್ಘಾಟಿಸಿದರು. ರಾಂಪುರದ ಶಿವಕುಮಾರ ಹಾಲಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಪುರೋಹಿತರ ಬಳಗ ಮತ್ತು ರೇಣುಕಾರಾಧ್ಯರಿಂದ ವೇದಘೋಷ, ವಿಠಲಾಪುರ ಗಂಗಾಧರ ಶಾಸ್ತ್ರಿಗಳಿಂದ ಪ್ರಾರ್ಥನೆ ಜರುಗಿತು. ಕೆ.ವಿ. ಬಸವನಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಸಿ.ನಾಗರಾಜ್ ಸ್ವಾಗತಿಸಿದರು. ಕೆ.ಸಿ.ಚಂದ್ರಪ್ಪ ಶ್ರೀ ಜಗದ್ಗುರುಗಳಿಗೆ ಮಾಲಾರ್ಪಣೆ ಮಾಡಿ ಗೌರವಿಸಿದರು. ಸುಧಾ ಪಂಚಾಕ್ಷರಯ್ಯ ನಿರೂಪಿಸಿದರು. ಹೆಚ್.ಪಿ.ಪರಮೇಶ ಹಿತ್ತಲಮನೆ ವಂದನಾರ್ಪಣೆ ಸಲ್ಲಿಸಿದರು. ಸಮಾರಂಭದ ಹಿಂದಿನ ದಿನ ಕ್ಯಾಸಿನಕೆರೆ ಗ್ರಾಮದಲ್ಲಿ ಸಂಜೆ 7.30 ಗಂಟೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವಗಳೊಂದಿಗೆ ಜರುಗಿತು.

# ಬೆವರಿನ ಹನಿ ಬದುಕಿಗೆ ದಾರಿ ತೋರಿಸುತ್ತದೆ: ರಂಭಾಪುರಿ ಶ್ರೀ



**ಶಿವಮೊಗ್ಗ:** ಕಷ್ಟ ಕಾಲದಲ್ಲಿ ನಗಿಸಿದವರನ್ನು ನೋಡಿ ನಕ್ಕವರನ್ನು ಎಂದಿಗೂ ಮರೆಯಬಾರದು. ಒಬ್ಬರು ಬದುಕಿನಲ್ಲಿ ಭರವಸೆ ಮೂಡಿಸಿದರೆ ಇನ್ನೊಬ್ಬರು ಬದುಕಿನಲ್ಲಿ ಛಲ ಮೂಡಿಸುತ್ತಾರೆ. ಕಣ್ಣೀರಿನ ಹನಿ ಜೀವನದಲ್ಲಿ ಹೇಗಿರಬೇಕೆಂಬುದನ್ನು ಕಲಿಸುತ್ತದೆ. ಆದರೆ ಬೆವರಿನ ಹನಿ ಬದುಕಿಗೆ ದಾರಿ ತೋರಿಸುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ನಗರದ ವೀರಶೈವ ಸಾಂಸ್ಕೃತಿಕ ಸಭಾ ಭವನದಲ್ಲಿ ಜರುಗಿದ ಎನ್.ಜೆ.ರಾಜಶೇಖರ (ಸುಭಾಷ್) ಅವರ ಶಿವಗಣಾರಾಧನಾ ಶ್ರದ್ಧಾಂಜಲಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವನ ಒಂದು ಗೋಣಿ ಚೀಲ ಇದ್ದಂತೆ. ಚಂದವಿದ್ದಾಗ ಧಾನ್ಯ ತುಂಬಿಸುತ್ತಾರೆ. ಅದೇ ರೀತಿ ಹರಿದು ಹೋದಾಗ ಕಾಲಡಿಗೆ ಹಾಕುತ್ತಾರೆ. ಜೀವ ಇದ್ದಾಗ ಕಾಯಕ್ಕೆ ಬೆಲೆ. ಜೀವದ ಉಸಿರು ನಿಂತಾಗ ಕಾಯಕ್ಕೆ ಬೆಲೆ ಸಿಗದು. ಹುಟ್ಟು ಎ?ಟ್ಟು ಸಹಜವೋ ಮೃತ್ಯು ಅಷ್ಟೇ ಸತ್ಯ. ಹುಟ್ಟು ಸಾವುಗಳ ಮಧ್ಯದ ಬದುಕು ಶ್ರೀಮಂತಗೊಳ್ಳಬೇಕು. ಅದು ಸತ್ಕಾರ್ಯ ಸಂಸ್ಕೃತಿಯ ಪರಿಪಾಲನೆಯಿಂದ ಮಾತ್ರ ಗೌರವ ಪ್ರಾಪ್ತವಾಗಲು ಸಾಧ್ಯವಾಗುತ್ತದೆ. ಲಿಂ. ಎನ್.ಜೆ.ರಾಜಶೇಖರ(ಸುಭಾಷ್) ಅವರು ಜನಾನುರಾಗಿ ವ್ಯಕ್ತಿತ್ವವನ್ನು ಗಳಿಸಿಕೊಂಡವರು. ನೊಂದವರ ಬೆಂದವರ ಧ್ವನಿಯಾಗಿ ಎಲ್ಲರೊಂದಿಗೆ ಬೆರೆತು ಬಾಳಿದ ಆದರ್ಶ ವ್ಯಕ್ತಿ. ಮಾಜಿ ನಗರ ಸಭಾ ಅಧ್ಯಕ್ಷರಾಗಿ, ವೀರಶೈವ ಕಲ್ಯಾಣ ಮಂದಿರ ಅಧ್ಯಕ್ಷರಾಗಿ, ವೀರಶೈವ ಸಮಾಜದ ಅಧ್ಯಕ್ಷರಾಗಿ ಮಾಡಿದ ಸತ್ಕಾರ್ಯಗಳು ಹಲವಾರು. ಅವರ ಅಗಲಿಕೆಯಿಂದ ಧರ್ಮಕ್ಕೆ ಸಮಾಜಕ್ಕೆ ಬಹಳ?ಟ್ಟು ನ?ಟವಾಗಿದೆ. ಅವರ ಆದರ್ಶ ಚಿಂತನಗಳು ಯುವ ಜನಾಂಗದಲ್ಲಿ ಬೆಳೆದು ಬರಲೆಂದು ಆಶಿಸಿದರು.

ಎಡೆಯೂರು ರೇಣುಕ ಶಿವಾಚಾರ್ಯರು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ಮಳಲಿಮಠದ ಡಾ।।ನಾಗಭೂಷಣ ಶಿವಾಚಾರ್ಯರು, ಹೊನ್ನಾಳಿ ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರನ್ನು ಮೊದಲ್ಗೊಂಡು ಹಲವಾರು ಮಠಾಧೀಶರು ಉಪಸ್ಥಿತರಿದ್ದರು. ನಂಜಪ್ಪ ಹೆಲ್ಥ್ ಕೇರ್ ಛೇರಮನ್ ಡಾ.ಬೆನಕಪ್ಪ ಅಧ್ಯಕ್ಷತೆ ವಹಿಸಿದ್ದರು.

ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ ಜಾತ್ಯಾತೀತ ಚಿಂತನೆಯುಳ್ಳ ನೇರ ನಿಷ್ಠೂರವಾದಿ ವ್ಯಕ್ತಿತ್ವ ರಾಜಶೇಖರ್ ಅವರದಾಗಿತ್ತು ಎಂದರು. ಶಾಸಕ ಚನ್ನಬಸಪ್ಪ ಮಾತನಾಡಿ ಸಮಸ್ತ ಹಿಂದೂ ಸಮಾಜದ ಉನ್ನತಿಯ ದೃಷ್ಟಿಯಿಂದ ಕಾರ್ಯ ನಿರ್ವಹಿಸಿದ ರಾಜಶೇಖರ್ ಎಲ್ಲ ಸಮಾಜದ ಎಲ್ಲ ವರ್ಗದ ಜನತೆಯ ಜೊತೆಗೆ ಗಟ್ಟಿ ಬಾಂಧವ್ಯ ಹೊಂದಿದ್ದರು ಎಂದರು. ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಮಾತನಾಡಿ ರಾಜಶೇಖರ್ ಅವರ ಜೀವನದಲ್ಲಿ ಸತ್ಕಾರ್ಯಗಳನ್ನು ಮಾಡುತ್ತ ಯಶಸ್ಸನ್ನು ಕಂಡವರು. ಅವರ ಆದರ್ಶ ಗುಣಗಳನ್ನು ನಾವೆಲ್ಲ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು. ಮಾಜಿ ಸಂಸದ ಆಯನೂರ ಮಂಜುನಾಥ ಮಾತನಾಡಿ ಎನ್.ಜೆ.ರಾಜಶೇಖರ್ ಕುಟುಂಬದಿಂದ ಶ್ರೀಮಂತರಾಗಿದ್ದರೂ ಅವರಲ್ಲಿ ಶ್ರೀಮಂತಿಕೆಯ ಅಹಂಕಾರ ಇರಲಿಲ್ಲ. ಸಮಾಜದ ಹಲವಾರು ಸಮಸ್ಯೆಗಳಿಗೆ ಸಮಸ್ಯೆಗಳಿಗೆ ಸರಳವಾಗಿ ಪರಿಹಾರ ಹುಡುಕುವ ಗುಣ ಅವರಲ್ಲಿತ್ತು ಎಂದರು. ಬಾನಂದೂರ ಪ್ರಕಾಶ, ಸಿದ್ರಾಮಣ್ಣ ಮಾತನಾಡಿದರು. ವಿ.ಪ.ಸದಸ್ಯ ಡಿ.ಎಸ್.ಅರುಣ, ಮಾಜಿ ವಿ.ಪ.ಸದಸ್ಯ ರುದ್ರೇಗೌಡರು, ವೀರಶೈವ ಸಮಾಜದ ಅಧ್ಯಕ್ಷ ಎಸ್.ಎಸ್. ಜ್ಯೋತಿಪ್ರಕಾಶ, ವೀರಣ್ಣ, ಹೆಚ್ .ಸಿ.ಯೋಗೀಶ, ಟಿ.ವಿ.ಈಶ್ವರಯ್ಯ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಕೆ.ಎಸ್ ತಾರಾನಾಥ ಎನ್.ಜೆ.ರಾಜಶೇಖರ ಕುರಿತ ವಿವರವಾದ ಲೇಖನ ಓದಿದರು. ಸಮಾರಂಭಕ್ಕೂ ಮುನ್ನ 2 ನಿಮಿಷದ ಮೌನಾಚರಣೆ ಮಾಡಲಾಯಿತು. ಎನ್. ಕಾರ್ತೀಕ. ಸ್ವಾಗತಿಸಿದರು. ಶಾಂತಾ ಆನಂದ ನಿರೂಪಿಸಿದರು. ಜಂಗಮ ಮಹಿಳಾ ಸಮಾಜದ ಸದಸ್ಯರಿಂದ ಪ್ರಾರ್ಥನೆ ಜರುಗಿತು.

## ರಾಗಿ ಬೆಳೆ ಕಟಾವು ಯಂತ್ರದ ಹೆಚ್ಚು ಬಾಡಿಗೆ ಕೇಳಿದರೆ ದೂರು ನೀಡಿ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಮುಂಗಾರು ಹಂಗಾಮಿನಲ್ಲಿ ರಾಗಿ ಬೆಳೆಯು ಒಟ್ಟು 31,500 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಮುಂದಿನ 15 ರಿಂದ 20 ದಿನಗಳೊಳಗಾಗಿ ರಾಗಿ ಬೆಳೆ ಕಟಾವು ಪ್ರಾರಂಭಗೊಳ್ಳಲಿದೆ. ರಾಗಿ ಕಟಾವು ಮಾಡಲು ಯಂತಕ್ಕೆ ಪ್ರತಿ ಗಂಟೆಗೆ 2700 ರೂ. ಮೀರದಂತೆ ಜಿಲ್ಲಾಧಿಕಾರಿಗಳು ಬಾಡಿಗೆ ನಿಗದಿಪಡಿಸಿದ್ದಾರೆ



ಎಂದು ಸಹಾಯಕ ಕೃಷಿ ನಿರ್ದೇಶಕರಾದ ಶಿವರಾಜ್ ಕುಮಾರ್ ಹೆಚ್. ಎಸ್ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲೂ ಸಹ ಗಂಟೆಗೆ 2700 ರೂ. ಬಾಡಿಗೆ ನಿಗಧಿ ಮಾಡಲಾಗಿದೆ. ರಾಗಿ ಬೆಳೆ ಕಟಾವಿಗಾಗಿ ಹೆಚ್ಚು ಬಾಡಿಗೆ ದರ ತೆಗೆದುಕೊಳ್ಳುವ ಕಟಾವು ಯಂತ್ರದ ಮಾಲೀಕರ ವಿರುದ್ಧ ವಿಪತ್ತು ನಿರ್ವಹಣೆ ಕಾಯ್ದೆಯ ಪ್ರಕಾರ ಕಾನೂನು ಕ್ರಮ ಕೈಗೊಂಡು ಲೈಸೆನ್ಸ್ ರದ್ದು ಮಾಡಲಾಗುವುದು ಎಂದು ಎಚ್ಚರಿಸಿದ್ದಾರೆ. ಕಟಾವು ಯಂತ್ರದ ವೈಖರಿ ಚೆನ್ನಾಗಿರಬೇಕು. ಸದರಿ ಯಂತದಲ್ಲಿ ರಾಗಿ ಜರಡಿ ಅಳವಡಿಕೆಯ ಬಗ್ಗೆ ರೈತರು ಖಾತ್ರಿ ಪಡೆದುಕೊಂಡಿರಬೇಕು. ರಾಗಿ ಹುಲ್ಲಿನ ಹೊರೆ ಕಟ್ಟಲು ನೈಲಾನು ದಾರದ ಬದಲು ಸೆಣಬಿನ ದಾರವನ್ನೆ ಉಪಯೋಗಿಸಬೇಕು ಎಂದು ತಿಳಿಸಿದ್ದಾರಲ್ಲದೆ ರೈತರು ಹೆಚ್ಚು ಬಾಡಿಗೆ ತೆಗೆದುಕೊಳ್ಳುವ ಯಂತ್ರದ ಬಗ್ಗೆ ದೂರು ಸಲ್ಲಿಸಬಹುದು ಎಂದು ಶಿವರಾಜ್ ಕುಮಾರ್ ತಿಳಿಸಿದರು.

# ಭೂಮಿ ಹಂಚಿಕೆ ಮಾಡಲು ಮುಂದಾಗಿ

**ಮಾಲೂರು :** ರೈತರು ಸ್ವಾಧೀನದಲ್ಲಿರುವ ಸರ್ಕಾರಿ ಭೂಮಿ ಯನ್ನು ಕಾನೂನು ಚೌಕಟ್ಟಿನಲ್ಲಿ ಕಂದಾಯ ಇಲಾಖೆ ಮಂಜೂರು ಮಾಡಲು ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ಎರಡು ಬಗರ್ ಹುಕುಂ ಸಮಿತಿಗಳನ್ನು ಮಾಡಲು ಕಂದಾಯ ಇಲಾಖೆ ಸಚಿವರಲ್ಲಿ ಮನವಿ ಮಾಡಲಾಗಿತ್ತು ಕಸಬಾ ಹಾಗೂ ಲಕ್ಕೂರು ಹೋಬಳಿಯ ದರ್ಕಾಸ್ತು ಸಮಿತಿ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸಿ ಸಿ ನಾರಾಯಣಸ್ವಾಮಿ ಅವರನ್ನು ಅಧ್ಯಕ್ಷರನ್ನಾಗಿ ಸರ್ಕಾರ ನೇಮಕ ಮಾಡಿ ಆದೇಶಿಸಿದೆ ಸಮಿತಿಯ ಅಧ್ಯಕ್ಷರು ಗಳು ಸದಸ್ಯರು ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಪ್ರತಿ ತಿಂಗಳು ಸಭೆ ನಡೆಸಿ ಭೂಮಿ ಹಂಚಿಕೆ ಮಾಡಲು ಮುಂದಾಗುವಂತೆ ಶಾಸಕ ಕೆ ವೈ ನಂಜೇಗೌಡ ಹೇಳಿದರು.

ಕಸಬಾ ಹಾಗೂ ಲಕ್ಕೂರು ಹೋಬಳಿಯ ಬಗರ್ ಹುಕ್ಕುಂ ನೂತನ ಅಧ್ಯಕ್ಷ ಎಸ್ ಸಿ ನಾರಾಯಣಸ್ವಾಮಿ ಅವರಿಗೆ ಸರ್ಕಾರದ ಆದೇಶ ಪತ್ರ ನೀಡಿ ಅಭಿನಂದಿಸಿ ಮಾತನಾಡಿದರು ತಾಲೂಕಿನಲ್ಲಿ ಭೂಸ್ವಾಧೀನದಲ್ಲಿರುವ ರೈತರು ಫಾರಂ ನಂಬರ್ 53 ಹಾಗೂ 57ರ ಅರ್ಜಿಗಳನ್ನು ಸಲ್ಲಿಸಿದ್ದು ಭೂಸ್ವಾಧೀನದಲ್ಲಿರುವ ರೈತರನ್ನು ಗುರುತಿಸಿ ಅಂತಹ ರೈತರಿಗೆ ಜಮೀನು ಮಂಜೂರು ಮಾಡಲು ಸಾಧ್ಯವಾಗಿರಲಿಲ್ಲ ಅರ್ಜಿಗಳನ್ನು ತ್ವರಿತ ಗತಿಯಲ್ಲಿ ವಿಲೇವಾರಿ ಮಾಡಲು ಕಂದಾಯ ಇಲಾಖೆಯ ಸಚಿವ ಕೃ?ಣ ಬೈರೇಗೌಡ ಅವರನ್ನು ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ಎರಡು ಸಮಿತಿಗಳನ್ನು ರಚಿಸಿ ಕೊಡುವಂತೆ ಮನವಿ ಮಾಡಲಾಗಿತ್ತು ಅದರಂತೆ ಸಚಿವರು ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ಕಸಬಾ ಹಾಗೂ ಲಕ್ಕೂರು ಒಬ್ಬ ಅಧ್ಯಕ್ಷರು ಮೂರು ಮಂದಿ ಸದಸ್ಯರು ಬೇಕಲ್ ಹಾಗೂ ಮಾಸ್ತಿ ಹೋಬಳಿಗೆ ಒಬ್ಬೊಬ್ಬ ಅಧ್ಯಕ್ಷರು ಹಾಗೂ ಮೂರು ಜನ ಸದಸ್ಯರನ್ನು ನೇಮಕ ಮಾಡಿ ಆದೇಶಿಸಿದ್ದಾರೆ ,. ಬಗರುಕ್ಕಂ ಸಮಿತಿಯ ಅಧ್ಯಕ್ಷರು ಸದಸ್ಯರು ರೈತರ ಜಮೀನುಗಳನ್ನು ವೀಕ್ಷಣೆ ಮಾಡಿ ಪ್ರತಿ 15 ದಿನಗಳಿಗೊಮ್ಮೆ ತಾಲೂಕು ಕಚೇರಿಯಲ್ಲಿ ಸಭೆಯನ್ನು ನಡೆಸಿ ಭೂ ಮಂಜೂರಾತಿಗಾಗಿ ಸಲ್ಲಿಸಿರುವ ಅರ್ಜಿಗಳನ್ನು ಕಂದಾಯ ಇಲಾಖೆಯ ನೀತಿ ನಿಯಮಾನುಸಾರ ವಿಲೇವಾರಿ ಮಾಡಿ ರೈತರಿಗೆ ಅನುಕೂಲ ಕಲ್ಪಿಸಬೇಕು ಸಮಿತಿಗಳು ಯಾವ ರೀತಿ ಕಾರ್ಯನಿರ್ವಹಿಸುತ್ತಿದೆ ಎಂಬುದರ ಬಗ್ಗೆ ಪ್ರತಿ ತಿಂಗಳು ಎರಡು ತಿಂಗಳಿಗೊಮ್ಮೆ ಎರಡು ಸಮಿತಿಗಳ ಸಭೆಯನ್ನು ಕರೆದು ಪ್ರಗತಿಯ ಬಗ್ಗೆ ಚರ್ಚಿಸಿ ಮಾಹಿತಿ ಪಡೆಯಲಾಗುವುದು ಎಂದರು. ಇದೇ ಸಂದರ್ಭದಲ್ಲಿ ಕಸಬಾ ಹಾಗೂ ಲಕ್ಕೂರು ಹೋಬಳಿಯ ನೂತನ ಬಗರುಕುಂ ಅಧ್ಯಕ್ಷ ಎಸ್ ಸಿ ನಾರಾಯಣಸ್ವಾಮಿ ಅವರನ್ನು ಶಾಸಕ ಕೆ ವೈ ನಂಜೇಗೌಡ ಯೋಜನಾ ಪ್ರಾಧಿಕಾರ ಅಧ್ಯಕ್ಷ ಮಹಮದ್ ನಂಹೀಮ್ ಉಲ್ಲಾ, ತಹಶೀಲ್ದಾರ್ ಕೆ ರಮೇಶ್ , ತಾಪಂ ಇ ಒ ವಿ ಕೃಷ್ಣಪ್ಪ ಅಭಿನಂದಿಸಿದರು.



# ಭತ್ತ, ರಾಗಿ ಖರೀದಿಗೆ ರೈತರ ನೋಂದಣಿ ಕೇಂದ್ರ ಶೀಘ್ರ ಆರಂಭ

**ಮಂಡ್ಯ:** ಜಿಲ್ಲೆಯಲ್ಲಿ ಭತ್ತ, ರಾಗಿಖರೀದಿಗೆರೈತರ ನೋಂದಣಿ ಕೇಂದ್ರಗಳನ್ನು ಶೀಘ್ರದಲ್ಲಿಯೇ ಆರಂಭಿಸಲಾಗುವುದುಎಂದು ಜಿಲ್ಲಾಧಿಕಾರಿಡಾಕುಮಾರಅವರು ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ 2024-25 ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಟಾಸ್ಕ್ ಫೋರ್ಸ್ ಸಮಿತಿ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.

2024- 25 ನೇ ಸಾಲಿನ ಮುಂಗಾರುಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಕಾರ್ಯ ನಿರ್ವಹಿಸಲು ಸರ್ಕಾರವು ಮಂಡ್ಯಜಿಲ್ಲೆಗೆಕರ್ನಾಟಕರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ರವರನ್ನುಖರೀದಿ ಏಜೆನ್ಸಿಯಾಗಿ ನೇಮಿಸಿದ್ದು, ರೈತರ ನೋಂದಣಿಕಾರ್ಯವನ್ನು ಹಾಗೂ ಭತ್ತ/ರಾಗಿಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಆದೇಶಿಸಿದೆ ಎಂದರು.

ಜಿಲ್ಲೆಯಲ್ಲಿಒಟ್ಟು 34 ಎಂ ಎಸ್ ಪಿ ನೋಂದಣಿ ಕೇಂದ್ರಗಳನ್ನು ತೆರೆಯಲಾಗುವುದು. ಮಂಡ್ಯ ತಾಲ್ಲೂಕಿನಲ್ಲಿ -6, ಮದ್ದೂರು -6, ಮಳವಳ್ಳಿ - 4, ಕೆ ಆರ್ ಪೇಟೆ - 6, ಪಾಂಡವಪುರ -4, ಶ್ರೀರಂಗಪಟ್ಟಣ -4, ನಾಗಮಂಗಲ ತಾಲ್ಲೂಕಿನಲ್ಲಿ -4 ನೋಂದಣಿ ಕೇಂದ್ರಗಳನ್ನು ತಾಲ್ಲೂಕುವಾರು ಪ್ರಾರಂಭಿಸಲಾಗುವುದು ಎಂದರು. ಎಂ ಎಸ್ ಪಿ ನೋಂದಣಿಕೇಂದ್ರಕ್ಕೆರೈತರು ನೋಂದಣಿಯಾಗಲು ಅಗತ್ಯ ದಾಖಲೆಗಳಾದ ಆಧಾರ್‌ಕಾರ್ಡ್ ಪ್ರತಿ, ಫ್ರೂಟ್‌ಐಡಿ, , ಆಧಾರ್‌ಕಾರ್ಡ್‌ಜೋಡಣೆ ಮಾಡಿರುವ ಮತ್ತು ಓಟಿಅಕ ಆಕ್ಟಿವೇಟ್‌ಆಗಿರುವ ಬ್ಯಾಂಕ್‌ಅಕೌಂಟ್ ಪ್ರತಿಯನ್ನುಕಡ್ಡಾಯವಾಗಿತರಬೇಕು ಹಾಗೂ ನೋಂದಣಿ ಪ್ರಾರಂಭವಾಗುವ ದಿನಾಂಕದ ಮಾಹಿತಿಯನ್ನು ಪತ್ರಿಕಾ ಪ್ರಕಟಣೆಯನ್ನು ಹೊರಡಿಸಬೇಕು ಎಂದರು.

ಪ್ರತಿ ನೋಂದಣಿ ಕೇಂದ್ರಗಳಲ್ಲಿ ರೈತರಿಗೆಅಗತ್ಯ ಮಾಹಿತಿ ನೀಡುವ ನಾಮಫಲಕಗಳನ್ನು ಅಳವಡಿಸಬೇಕು. ರೈತರಿಗೆಯಾವುದೇಗೊಂದಲವಾಗಬಾರದು. ಜೊತೆಗೆ ನೋಂದಣಿ ಮಾಡಿಕೊಳ್ಳಲು ಬರುವರೈತರಿಗೆ ಮೂಲಭೂತ ಸೌಲಭ್ಯವಾದಕುಡಿಯುವ ನೀರಿನ ವ್ಯವಸ್ಥೆಯನ್ನುಕಲ್ಪಿಸಬೇಕು. ನೋಂದಣಿಗೆ ಸಂಬಂಧಿಸಿದಂತೆ Fruit Id/ Crop survey ಬಗೆಗಿನ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಕೃಷಿ ಇಲಾಖೆಯವರುಅಗತ್ಯಕ್ರಮ ವಹಿಸಬೇಕು ಎಂದು ತಿಳಿಸಿದರು.

ಕಳೆದ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿರಾಗಿಖರೀದಿಗೆಜಿಲ್ಲೆಯಲ್ಲಿಒಟ್ಟು 21,855 ರೈತರು ನೋಂದಣಿಯಾಗಿದ್ದರು.ಅದರಲ್ಲಿ 8,281 ರೈತರ 166409 ಕ್ವಿಂಟಾಲ್‌ರಾಗಿಯನ್ನುಖರೀದಿಸಲಾಗಿದೆಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆಯಜಂಟಿ ನಿರ್ದೇಶಕಅಶೋಕ್, ಆಹಾರ ಮತ್ತು ನಾಗರೀಕ ಸರಬರಾಜುಇಲಾಖೆಯ ಸಹಾಯಕ ನಿರ್ದೇಶಕ ಶ್ರೀನಿವಾಸ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

## ರಫ್ತು ಉತ್ತೇಜನಕ್ಕೆ ಕ್ರಿಯಾಯೋಜನೆ ರೂಪಿಸಿ: ಜಿಲ್ಲಾಧಿಕಾರಿ ಕುಮಾರ್

ಮಂಡ್ಯ ಜಿಲ್ಲಾ ಮಟ್ಟದಲ್ಲಿರಫ್ತು ಉತ್ತೇಜನಕ್ಕೆ ಕ್ರಿಯಾಯೋಜನೆ ರೂಪಿಸಲು ಒಂದು ಸಮಿತಿ ರಚಿಸಿ. ಜೊತೆಗೆ ರಫ್ತಾಗುವ ಸಂಭಾವ್ಯ ಬೆಳೆ ಉತ್ಪನ್ನಗಳನ್ನು ಪಟ್ಟಿಮಾಡಿ, ರಫ್ತು ಹೆಚ್ಚಾಗುವ ಉತ್ಪನ್ನಗಳಿಗೆ ಸಂಬಂಧಿಸಿದ ನವೀನ ಬೆಳೆಗಳನ್ನು ಬೆಳೆಯಲು ಜಾಗೃತಿ ಮೂಡಿಸಿ ಎಂದುಜಿಲ್ಲಾಧಿಕಾರಿಡಾ. ಕುಮಾರಅವರುಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕೈಗಾರಿಕೆ ಹಾಗೂ ವಾಣಿಜ್ಯ ಇಲಾಖೆ ವತಿಯಿಂದ ನಡೆದಜಿಲ್ಲಾ ಮಟ್ಟದರಫ್ತುಉತ್ತೇಜನ ಸಮಿತಿ ಸಭೆಯಲ್ಲಿಅವರು ಮಾತನಾಡಿದರು. ಜಿಲ್ಲೆಯ ಪ್ರಮುಖ ಉತ್ಪನ್ನಗಳಾದ ಬೆಲ್ಲ, ಸಕ್ಕರೆ, ಸಿರಿಧಾನ್ಯ ಸೇರಿದಂತೆ ಮುಖ್ಯ ಉತ್ಪನ್ನಗಳನ್ನು ಪಟ್ಟಿ ಮಾಡಿಕೊಳ್ಳಿ. ಬೇರೆ ಜಿಲ್ಲೆಗಳಲ್ಲಿನ ಉತ್ಪನ್ನಗಳ ರಫ್ತಿನ ದತ್ತಾಂಶಗಳನ್ನು ಪಟ್ಟಿ ಮಾಡಿ ಮಂಡ್ಯಜಿಲ್ಲೆಯಲ್ಲಿರಫ್ತಿಗೆಉತ್ತೇಜನಕೊಡವಕ್ಷೇತ್ರವನ್ನು ಗುರುತಿಸಿ ಎಂದರು. ರಫ್ತುಉತ್ತೇಜನ ಸಮಿತಿಯಲ್ಲಿಎಫ್‌ಪಿಓ ಹಾಗೂ ನಬಾರ್ಡ್ ಸಂಸ್ಥೆಗಳನ್ನು ಸೇರಿಸಲು ಸಲಹೆ ನೀಡಿದರು. ಜೊತೆಗೆ ಸಮಿತಿ ವತಿಯಿಂದರಫ್ತುಉತ್ತೇಜನಕ್ಕೆತರಬೇತಿ ಕಾರ್ಯಕ್ರಮಗಳನ್ನು ಪ್ರಾರಂಭಿಸಿ, ಅದರೊಂದಿಗೆಉಪಸಮಿತಿರಚಿಸಿ ನವೀನ ಬೆಳೆಗಳನ್ನು ಮುಂಚೂಣಿಗೆತರಬೇಕೆಂದರು. ಮಂಡ್ಯಜಿಲ್ಲೆಯಿಂದಯಾವ್ಯಾವ ಉತ್ಪನ್ನಗಳು ಎಷ್ಟು ಪ್ರಮಾಣದಲ್ಲಿರಫ್ತುಆಗುತ್ತಿದೆ ಎಂದು ಅವರು ವಿಚಾರಿಸಿ, ಕೃಷಿ ಉತ್ಪನ್ನಗಳು ಹೊರದೇಶಕ್ಕೆರಫ್ತುಆಗುತ್ತಿಲ್ಲ. ಕೃಷಿ ಪ್ರಧಾನಜಿಲ್ಲೆಯಾದ್ದರಿಂದ ಸಿರಿ ಧಾನ್ಯಗಳು ಸೇರಿದಂತೆ ಬೆಲ್ಲ, ಸಕ್ಕರೆಇತರೆ ಕೃಷಿ ಉತ್ಪನ್ನಗಳನ್ನು ವಿದೇಶಕ್ಕೆರಫ್ತು ಮಾಡಬಹುದಾಗಿದೆಎಂದರು. ಸಭೆಯಲ್ಲಿಕೈಗಾರಿಕಾ ಹಾಗೂ ವಾಣಿಜ್ಯಇಲಾಖೆಯಜಂಟಿ ನಿರ್ದೇಶಕ ಟಿ. ದಿನೇಶ್, ಲೀಡ್ ಬ್ಯಾಂಕ್ ಮುಖ್ಯಸ್ಥಅರುಣ್‌ಕುಮಾರ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

## ಕನ್ನಡಕ್ಕೆ ಕಳಶಪ್ರಾಯರಾದಂತಹ ಪ್ರಾತಃಸ್ಮರಣೀಯರನ್ನು ಮರೆಯಬಾರದು: ರಮೇಶ್

**ವಿಜಯಪುರ:** ಕನ್ನಡ ನಾಡು, ನುಡಿ, ಸಂಸ್ಕೃತಿ, ಸಂಸ್ಕಾರಗಳಿಗೆ ಕಾಣಿಕೆಯನ್ನು ನೀಡಿದ ಸಾವಿರಾರು ಮಂದಿಯನ್ನು ಸದಾಕಾಲ ನಾವು ಸ್ಮರಿಸುವಂಥವರಾಗಬೇಕೆಂದು ಜೆ ಸಿ ಐ ವಲಯ ತರಬೇತುದಾರರಾದ ಎಸ್ ರಮೇಶರವರು ತಿಳಿಸಿದರು .

ಅವರು ಪಟ್ಟಣದ ಶ್ರೀನಗರೇಶ್ವರ ಸ್ವಾಮಿ ಜ್ಞಾನ ಮಂದಿರದಲ್ಲಿ ನಗರ್ತ ಯುವಕ ಸಂಘದ ವತಿಯಿಂದ ಏರ್ಪಡಿಸಲಾಗಿದ್ದ 59ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡದ ಕಣ್ಮಣಿಗಳು ಎಂಬ ವಿಷಯವಾಗಿ ಮಾತನಾಡುತ್ತಿದ್ದರು. ಆಲೂರು ವೆಂಕಟರಾಯರು, ಕುವೆಂಪು, ಗಂಗೂಬಾಯಿ ಹಾನಗಲ್, ಕ್ರಿಕೆಟಿಗರಾದ ವಿಶ್ವನಾಥ್, ಅನಿಲ್ ಕುಂಬಳೆ, ರಾಹುಲ್ ದ್ರಾವಿಡ್, ಸ್ವಾತಂತ್ರ್ಯ ಹೋರಾಟಗಾರರಾದ ಕಿತ್ತೂರು ರಾಣಿ ಚೆನ್ನಮ್ಮ ಮುಂತಾಗಿ ಕನ್ನಡದ ನಾಡು, ನುಡಿ, ಸಂಸ್ಕೃತಿ, ಕ್ರೀಡೆ, ಸಂಗೀತ ಮುಂತಾದ ಎಲ್ಲಾ ಕ್ಷೇತ್ರಗಳಲ್ಲಿಯೂ ಕಾಣಿಕೆ ನೀಡಿದ ಕನ್ನಡಿಗರು ಸಾವಿರಾರು ಮಂದಿ ಇದ್ದು ಪ್ರತಿಯೊಬ್ಬರ ಜೀವನ ಚರಿತ್ರೆಗಳನ್ನು ನಾವುಗಳು ತಿಳಿದುಕೊಳ್ಳಬೇಕೆಂದು ತಿಳಿಸಿದರು. ನಗರ್ತ ಯುವಕ ಸಂಘದ ಅಧ್ಯಕ್ಷರಾದ ಎ ಮಂಜುನಾಥ್ ರವರು ಅಧ್ಯಕ್ಷತೆ ವಹಿಸಿದ್ದು, ಗೌರವ ಕಾರ್ಯದರ್ಶಿಯಾದ ಅಮರ್, ಸಂಘಟನಾ ಕಾರ್ಯದರ್ಶಿಯಾದನಿರ್ದೇಶಕರುಗಳಾದ ಎಮ್. ಶಂಕರ್. ಪಿ ವಿಶ್ವನಾಥ್. ಬಿಸಿ ಸಿದ್ದರಾಜು, ಅವಿನಾಶ್, ನಿಖಿಲ್ ಇದ್ದರು.



## ಖಾಸಗಿ ನಿವಾಸಿಗಳಿಂದ ಬೆಳೆ ಸಮೀಕ್ಷೆ

**ಚಾಮರಾಜನಗರ,** ಬೆಳೆ ಸಮೀಕ್ಷೆ ಕಾರ್ಯ ಚಟುವಟಿಕೆಗಳನ್ನು ಜಿಲ್ಲೆಯ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಬೆಳೆ ಸಮೀಕ್ಷೆ ಸೇವೆಯನ್ನು ಮಾಡಬಯಸುವ ಆಸಕ್ತ ಖಾಸಗಿ ನಿವಾಸಿಗಳು ಕೃಷಿ ಇಲಾಖೆಯನ್ನು ಸಂಪರ್ಕಿಸಬಹುದು. ಬೆಳೆ ಸಮೀಕ್ಷೆ ಕಾರ್ಯಕ್ರಮವು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಬೆಳೆ ಸಮೀಕ್ಷೆಯ ದತ್ತಾಂಶವನ್ನು ಬೆಳೆ ವಿಮೆ, ಬೆಳೆ ಪರಿಹಾರ, ಕನಿಷ್ಠ ಬೆಂಬಲ ಬೆಲೆ ಯೋಜನೆ ಹಾಗೂ ಸರ್ಕಾರದ ವಿವಿಧ ಯೋಜನೆಗಳಡಿ ಸವಲತ್ತುಗಳನ್ನು ವಿತರಿಸಲು ಬಳಸುತ್ತಿರುವುದರಿಂದ ಸಕಾಲದಲ್ಲಿ ಬೆಳೆ ಸಮೀಕ್ಷೆಯ ಕಾರ್ಯಚಟುವಟಿಕೆಗಳ ಪ್ರಗತಿಯನ್ನು ಪೂರ್ಣಗೊಳಿಸುವ ಅವಶ್ಯಕತೆ ಇರುತ್ತದೆ. ಪ್ರತಿ ಹಂಗಾಮಿನಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ರೈತರ ಸರ್ವೇ ನಂಬರ್/ ಹಿಸ್ಸಾ ನಂಬರ್‌ವಾರು ಬೆಳೆ ಮಾಹಿತಿ ಸಂಗ್ರಹಣೆ ಹಮ್ಮಿಕೊಳ್ಳಲಾಗುತ್ತಿದ್ದು, 2017ರ ಮುಂಗಾರು ಹಂಗಾಮಿನಿಂದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಅಭಿವೃದ್ಧಿಪಡಿಸಿರುವ ಮೊಬೈಲ್ ತಂತ್ರಾಂಶದ ಮೂಲಕ ರೈತರು ಬೆಳೆದಿರುವ ಬೆಳೆಯ ಮಾಹಿತಿಯನ್ನು ಮೊಬೈಲ್ ಆಪ್ ಮೂಲಕ ಸಂಗ್ರಹಿಸಲಾಗುತ್ತಿದೆ. ಈ ಕಾರ್ಯ ಚಟುವಟಿಕೆಗಳನ್ನು ಬೆಳೆ ಸಮೀಕ್ಷೆ ಮೊಬೈಲ್ ಆಪ್ ಬಳಸಿಕೊಂಡು ಆಯಾ ಗ್ರಾಮದಲ್ಲಿ ಲಭ್ಯವಿರುವ, ಮಾಹಿತಿ ತಂತ್ರಜ್ಞಾನದ ಬಗ್ಗೆ ತಿಳುವಳಿಕೆ ಇರುವ ಯುವಕರ ಸೇವೆಯನ್ನು (ಖಾಸಗಿ ನಿವಾಸಿಗಳು) ಮತ್ತು ಇಲಾಖಾ ಸಿಬ್ಬಂದಿಗಳ ಸೇವೆಯನ್ನು ಬಳಸಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ. ಬೆಳೆ ಸಮೀಕ್ಷೆ ಕಾರ್ಯದಡಿ ಖಾಸಗಿ ನಿವಾಸಿಗಳಿಗೆ ಪ್ರತಿ ತಾಕಿನ ಮೊದಲ ಬೆಳೆಗೆ 11ರೂ. ರಂತೆ, ಬಹುಬೆಳೆ ಹೊಂದಿದ ಜಮೀನಿಗೆ ಪ್ರತಿ ಹೆಚ್ಚುವರಿ ಬೆಳೆ ದಾಖಲೆಗೆ 5ರೂ. ರಂತೆ ಗರಿಷ್ಠ 20ರೂ. ಗಳನ್ನು ಮೀರದಂತೆ ಗೌರವಧನವನ್ನು ಗರಿಷ್ಠ 1000 ತಾಕು ಮೀರದಂತೆ ಖಾಸಗಿ ನಿವಾಸಿಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತದೆ. ಬೆಳೆ ಸಮೀಕ್ಷೆ ಸೇವೆ ಮಾಡಲು ಆಸಕ್ತಿಯುಳ್ಳವರು ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ವಿಜಯಪುರ ಪಟ್ಟಣದ ಸರ್ಕಾರಿ ಮಾದರಿ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯ ಆವರಣದಲ್ಲಿ ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ ಇಂದು ಒನಕೆ ಓಬವ್ವ ನವರ ಜನ್ಮದಿನೋತ್ಸವ ಹಾಗೂ ಕುವೆಂಪು ಅವರ ಪುಣ್ಯ ಸ್ಮರಣೆಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಮಿತ್ರ ಸಂಘದ ಅಧ್ಯಕ್ಷ ಚಿ. ಮಾ. ಸುಧಾಕರ್ ಒನಕೆ ಓಬವ್ವ ಅವರ ಬಗ್ಗೆ ಉಪನ್ಯಾಸವನ್ನು ನೀಡಿದರು. ಈ ಕಾರ್ಯಕ್ರಮದಲ್ಲಿ ಶಾಲಾ ಮುಖ್ಯೋಪಾಧ್ಯಾಯರಾದ ಮನೋಹರ್, ಶಿಕ್ಷಕಿಯರಾದ ಶ್ರೀಮತಿ ದ್ರಾಕ್ಷಾಯಿಣಿ, ಶಿಕ್ಷಕರಾದ ಶ್ರೀನಿವಾಸ್ ರವರು,ಮಿತ್ರ ಸಂಘದ ಗೌರವ ಕಾರ್ಯದರ್ಶಿ ಅರ್. ಮುನಿರಾಜು, ಕಾರ್ಯಾಧ್ಯಕ್ಷರಾದ ವಿ. ವಿಶ್ವನಾಥ್ ಹಾಗೂ ಶಾಲೆಯ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.**

# ಪಂಚಾಚಾರ್ಯರಿಗೆ ಗೌರವ ಸಮರ್ಪಣೆ



**ಮೈಸೂರು:** ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಆರಾಧ್ಯ ಮಹಾಸಭಾದಲ್ಲಿ ಶ್ರೀ ಉಮಾಮಹೇಶ್ವರ ಹಾಗೂ ಪಂಚಾಚಾರ್ಯ ದೇವಾಲಯದ 3ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ನಿನ್ನೆ (ನ.11) ಗುರುವಂದನಾ ಕಾರ್ಯಕ್ರಮವನ್ನು ಪಂಚಾಚಾರ್ಯರಿಗೆ ಸಮರ್ಪಣೆ ಮಾಡಲಾಯಿತು. ಚಿತ್ರದಲ್ಲಿ ಪಂಚಾಚಾರ್ಯರುಗಳಾದ ಹೊನ್ನೇಗೌಡನಹಳ್ಳಿ ಗುರುಮಠದ ಶ್ರೀ ವೀರಣ್ಣಾರಾಧ್ಯ, ನಂಜನಗೂಡು ದೇವನೂರು ಗುರುಮಠದ ಶ್ರೀ ಮಲ್ಲಿಕಾರ್ಜುನ ಆರಾಧ್ಯರು, ಗುಂಡ್ಲುಪೇಟೆ ತಾಲ್ಲೂಕು ಹೆಗ್ಗಡಳ್ಳಿ ಗುರುಮಠದ ಶ್ರೀ ಚಂದ್ರಶೇಖರ ಆರಾಧ್ಯ, ಹೊಸೂರು ಗುರುಮಠದ ಮಲ್ಲಾರಾಧ್ಯ, ಮಲ್ಲಿಗೆರೆ ಗುರುಮಠದ ಅರುಣ್ ರಾಮಾರಾಧ್ಯರನ್ನು ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ಆರಾಧ್ಯ ಯುವಸೇನೆಯ ಸದಸ್ಯರಾದ ಸುನಿಲ್ ಆರ್.ಆರಾಧ್ಯ, ಜಯಶಂಕರ ಆರಾಧ್ಯ, ರಘು ಆರಾಧ್ಯ, ಪ್ರಸನ್ನ ಆರಾಧ್ಯ, ಮಲ್ಲಿಕಾರ್ಜುನ ಆರಾಧ್ಯ, ಮೋಹನ ಆರಾಧ್ಯ ಹಾಗೂ ಆರಾಧ್ಯ ಮಹಾಸಭಾದ ಕಾರ್ಯದರ್ಶಿಗಳಾದ ಮಹೇಶ್ ಆರಾಧ್ಯ, ನಿರ್ದೇಶಕರುಗಳಾದ ವರಲಕ್ಷ್ಮಿ ಕುಮಾರ್, ಹಿರಿಯರಾದ ಮಲ್ಲಾರಾಧ್ಯ, ಜಯಶಂಕರ ಆರಾಧ್ಯ, ಅನುಕುಮಾರ್, ಧನುಷ್, ದೀಕ್ಷಿತ್ ಹಾಗೂ ಯುವಸೇನೆ ಸದಸ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ದಲಿತ ವಿರೋಧಿ ನೀತಿ ಖಂಡಿಸಿ ಪ್ರತಿಭಟನೆ

**ಮಾಲೂರು :** ತಾಲ್ಲೂಕು ಆಡಳಿತ ಹಾಗೂ ಪುರಸಭೆ ಅಕ್ರಮಗಳ ತಾಣವಾಗಿ ಮಾರ್ಪಟ್ಟು ದಲಿತ ವಿರೋಧಿ ನೀತಿಯನ್ನು ಅನುಸರಿಸುತ್ತಿರುವ ಮೂಲಕ ಮೂಲ ಭೂತ ಸೌಕರ್ಯಗಳನ್ನು ಕಲ್ಪಿಸಲು ವಿಫಲರಾದ ಅಧಿಕಾರಿಗಳನ್ನು ಕೂಡಲೇ ಅಮಾನತು ಮಾಡಬೇಕು ಎಂದು



ದಲಿತ ಸಂಘರ್ಷ ಸಮಿತಿ ತಾಲ್ಲೂಕು ಸಂಚಾಲಕ ಎಸ್ ಎಂ ವೆಂಕಟೇಶ್ ಒತ್ತಾಯಿಸಿದರು, ದಲಿತ ಸಂಘರ್ಷ ಸಮಿತಿ ವತಿಯಿಂದ ತಾಲ್ಲೂಕು ಆಡಳಿತ ಮತ್ತು ಪುರಸಭೆ ದಲಿತ ವಿರೋಧಿ ನೀತಿ ಖಂಡಿಸಿ ಪಟ್ಟಣದ ಡಾ.ಬಿ.ಆರ್ ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಪುರಸಭೆಯ ವರೆಗೂ ರ್ಯಾಲಿ ನಡೆಸಿ ಶ್ರೀ ಮಾಸ್ತಿವೆಂಕಟೇಶ ಅಯ್ಯಂಗಾರ್ ರಂಗಮಂದಿರ ಆವರಣದಲ್ಲಿ ಪ್ರತಿಭಟನೆ ನಡೆಸಿದರು,

ನಮ್ಮ ದೇಶದ ಕ್ಕೆ ಸ್ವಾತಂತ್ರ್ಯ ಬಂದು 77 ವರ್ಷಗಳು ಕಳೆದರೂ ದಲಿತರಿಗೆ ಸಿಗಬೇಕಾದ್ದ ಸೌಲಭ್ಯಗಳು ಸಿಗದೇ ವಂಚಿತರಾಗಿದ್ದಾರೆ, ಅಲ್ಲದೆ ಮಾಲೂರು ತಾಲೂಕು ಆಡಳಿತ ಮತ್ತು ಪುರಸಭೆ ದಲಿತ ವಿರೋಧಿ ನೀತಿ ಅನುಸರಿಸುತ್ತಿದ್ದು ಅಕ್ರಮಗಳ ತಾಣವಾದ್ದು ಪುರಸಭೆಯಲ್ಲಿ ನಡೆದಿರುವ ನಕಲಿ ಕಾಮಗಾರಿ ಹೆಸರಿನಲ್ಲಿ ನಡೆದಿರುವ ಹಣದ ವೈಹಿವಾಟದ ಬಗ್ಗೆ ತನಿಖೆ ಮಾಡಿ ಹಾಲಿ ಪುರಸಭಾ ಮುಖ್ಯಾಧಿಕಾರಿಗಳು ಮತ್ತು ಸಂಬಂಧಿಸಿದ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸು ದಾಖಲಿಸಿ ಕರ್ತವ್ಯದಿಂದ ಅಮಾನತ್ತುಗೊಳಿಸಬೇಕು ತಾಲ್ಲೂಕಿನ ಮಾಸ್ತಿ ಹೋಬಳಿ, ಮಾಸ್ತಿ ಗ್ರಾಮದ ಸರ್ವೆ ನಂ.525 ಸರ್ವೆ ನಂ, 350 ಹಾಗೂ ಸರ್ಕಾರಿ ಬಸ್ ನಿಲ್ದಾಣದ ಜಮೀನನ್ನು ಸರ್ವೆ ಮಾಡಿಸಿ ಅಕ್ರಮ ಒತ್ತುವರಿ ತೆರವುಗೊಳಿಸಬೇಕು ಹಾಗೂ ಸರ್ಕಾರಿ ವಸತಿ ಗೃಹಗಳು ಮತ್ತು ಸರ್ಕಾರಿ ಕಛೇರಿಗಳನ್ನು ಮಾಸ್ತಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ಖಾಸಗಿಯವರಿಗೆ ಅಕ್ರಮ ಇ-ಖಾತೆಗಳನ್ನು ಮಾಡಿದ್ದು ಸದರಿ ಅಕ್ರಮ ಇ-ಖಾತೆಗಳನ್ನು ರದ್ದುಗೊಳಿಸಿ ಸರ್ಕಾರಿ ಸ್ವತ್ತುಗಳನ್ನು ಸರ್ಕಾರದ ವಶಕ್ಕೆ ಪಡೆಯಬೇಕು ಇನ್ನೂ ಮಾಸ್ತಿಯಲ್ಲಿನ ಅಂಬೇಡ್ಕರ್ ಕಾಲೇಜು ವಿದ್ಯಾರ್ಥಿನಿಲಯ ಕಟ್ಟಡ ಕಾಮಗಾರಿ ಗುತ್ತಿಗೆದಾರ ಸಂಸ್ಥೆಯಾದ ಭೂಸೇನೆ ನಿಗಮದ ಅಧಿಕಾರಿಗಳ ಮೇಲೆ ದಲಿತ ದೌರ್ಜನ್ಯ ಪ್ರಕರಣ ದಾಖಲಿಸಿ ಕೂಡಲೇ ಬಂಧಿಸಲು ಕ್ರಮಕ್ಕೈಗೊಳ್ಳಬೇಕು ಹಾಗೂ ವಸತಿ ನಿಲಯದ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಕಸಬಾ ಹೋಬಳಿ, ಮಜರ ಗೆರದೆಗೆನಹಳ್ಳಿ ಗ್ರಾಮದ ಸರ್ವೆ ನಂ 43 ರಲ್ಲಿ 19 ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ರೈತರು 53 ಅರ್ಜಿ ಸಲ್ಲಿಸಿಕೊಂಡಿದ್ದು, ಸ್ವಾಧೀನ ಅನುಭವದಲ್ಲಿ ಇದ್ದರೂ ಸಹ ಇವರಿಗೆ ಭೂ ಮಂಜೂರಾತಿ ಮಾಡದೇ ಪ್ರಭಾವಿ ವ್ಯಕ್ತಿಗೆ 30 ಎಕರೆ ಪಹಣಿ ಮಾಡಿಕೊಟ್ಟು ದಲಿತರಿಗೆ ಅನ್ಯಾಯ ಮಾಡಲು ಹೊರಟಿದ್ದು ಈ ಕೂಡಲೇ 30 ಎಕರೆ ಪಹಣಿ ರದ್ದುಗೊಳಿಸಿ ದಲಿತರಿಗೆ ಭೂ ಮಂಜೂರಾತಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು, ಸ್ಥಳಕ್ಕೆ ಅಪರ ಜಿಲ್ಲಾಧಿಕಾರಿ ಮಂಗಳಾ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ವಸಂತ್ ಬೇಟಿ ನೀಡಿ ಮನವಿ ಸ್ವೀಕರಿಸಿದರು,

ಈ ಪ್ರತಿಭಟನೆಯಲ್ಲಿ ಜಿಲ್ಲಾ ಸಂಚಾಲಕ ಚವ್ವೇನಹಳ್ಳಿ ವಿಜಿ, ಮಾಸ್ತಿ ಹೋಬಳಿ ಸಂಚಾಲಕ ವರದಾಪುರ ನಾರಾಯಣಸ್ವಾಮಿ, ತಾಲ್ಲೂಕು ಸಂಘಟನಾ ಸಂಚಾಲಕ ನಾರಾಯಣಸ್ವಾಮಿ,ತಾಲ್ಲೂಕು ಸಂಘಟನಾ ಸಂಚಾಲಕ ತಿರುಮಲೇಶ್, ಬಂಡಹಟ್ಟಿ ನಾರಾಯಣಸ್ವಾಮಿ, ಖಜಾಂಚಿ ಶಾಮಣ್ಣ, ಉಳ್ಳೇರಹಳ್ಳಿ ಮುನಿರಾಜು, ಯಶವಂತಪುರ ಮುನಿರಾಜು, ಹಾರೋಹಳ್ಳಿ ರಾಜು ಇನ್ನೂ ಮುಂತಾದವರು ಹಾಜರಿದ್ದರು.

# ಮಾಧ್ಯಮ ಕ್ಷೇತ್ರದ ಅಪ್ರೆಂಟಿಸ್ ತರಬೇತಿಗೆ ಪ.ಜಾ, ಪ.ಪಂಗಡದ ಪತ್ರಿಕೋದ್ಯಮ ಪದವೀಧರರಿಂದ ಅರ್ಜಿ

**ಚಾಮರಾಜನಗರ:** 2024-25ನೇ ಸಾಲಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಚಾಮರಾಜನಗರ ಜಿಲ್ಲಾ ಕಚೇರಿಯಲ್ಲಿ ಮಾಧ್ಯಮ ಹಾಗೂ ಕ್ಷೇತ್ರ ಪ್ರಚಾರ ಕುರಿತ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ/ಸ್ನಾತಕೋತ್ತರ ಪದವಿ ಹೊಂದಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಪರಿಶಿಷ್ಟ ಜಾತಿಯ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ 2025ರ ಜನವರಿ ಯಿಂದ ಡಿಸೆಂಬರ್ ವರೆಗೆ ತರಬೇತಿ ನೀಡಲಿದ್ದು, ಚಾಮರಾಜನಗರ ವಾರ್ತಾ ಇಲಾಖೆಯ ಜಿಲ್ಲಾ ಕಚೇರಿಗೆ ಪರಿಶಿಷ್ಟ ಜಾತಿಗೆ ಸೇರಿದ ಓರ್ವ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಓರ್ವ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ತರಬೇತಿ ಅವಧಿಯಲ್ಲಿ ಪ್ರತಿ ತಿಂಗಳಿಗೆ ಅಭ್ಯರ್ಥಿಗೆ 15 ಸಾವಿರ ರೂ. ಸ್ಟೈಫಂಡ್ ನೀಡಲಾಗುತ್ತದೆ. ಕರ್ನಾಟಕ ರಾಜ್ಯದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರಬೇಕು. ಕಂಪ್ಯೂಟರ್ ಜ್ಞಾನ, ಕನ್ನಡ ಭಾಷೆ ಬಳಕೆ ಬಗ್ಗೆ ಪ್ರಬುದ್ಧತೆ ಇರಬೇಕು. ಮೆರಿಟ್ ಹಾಗೂ ಸಂದರ್ಶನ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು 35 ವರ್ಷ ಮೀರಿರಬಾರದು. ಅಭ್ಯರ್ಥಿಗಳು ಪದವಿ/ಸ್ನಾತ್ತಕೋತ್ತರ ಅಂತಿಮ ವರ್ಷದ ಪದವಿ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

ನಿಗದಿತ ನಮೂನೆಯ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ಪ್ರಮಾಣ ಪತ್ರ, ಪದವಿ/ಸ್ನಾತ್ತಕೋತ್ತರ ಪದವಿ ಅಂಕಪಟ್ಟಿ ಪ್ರಮಾಣಪತ್ರ, ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ಇನ್ನಿತರ ಪೂರಕ ದಾಖಲೆಗಳು, ಪ್ರಮಾಣ ಪತ್ರದ ನಕಲನ್ನು ದೃಢೀಕರಿಸಿ ನವೆಂಬರ್ 27ರೊಳಗೆ ಹಿರಿಯ ಸಹಾಯಕ ನಿರ್ದೇಶಕರು, ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಜಿಲ್ಲಾ ಆಡಳಿತ ಭವನದ ಆವರಣ, ಬಿ. ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ-571313 ಇಲ್ಲಿಗೆ ಸಲ್ಲಿಸಬೇಕು. ಅರ್ಜಿ ಲಕೋಟೆಯ ಮೇಲೆ ವಿಶೇಷಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಜಿಲ್ಲಾ ಆಡಳಿತ ಭವನದ ಆವರಣ, ಬಿ. ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ ಇವರನ್ನು ಸಂಪರ್ಕಿಸುವಂತೆ ವಾರ್ತಾ ಇಲಾಖೆ ಪ್ರಕಟಣೆ ತಿಳಿಸಿದೆ.

ಸಂಜೆ ಟಿಪ್ಸ್

## ಜಿಯೋ ವರ್ಲ್ಡ್ ಪ್ಲಾಜಾದಲ್ಲಿ ಬ್ಯೂಟಿ ಸ್ಟೋರ್ ಆರಂಭಿಸಿದ ಟಿರಾ

ರಿಲಯನ್ಸ್ ರೀಟೇಲ್ಗೆ ಸಂಬಂಧಿಸಿದ ಬ್ಯೂಟಿ ರಿಟೇಲ್ ಚೈನ್ ಟಿರಾ ಇಂದು ಮುಂಬೈನ ಜಿಯೋ ವರ್ಲ್ಡ್ ಪ್ಲಾಜಾದಲ್ಲಿ ತನ್ನ ಐಷಾರಾಮಿ ಫ್ಲ್ಯಾಗ್ಶಿಪ್ ಸ್ಟೋರ್ ಪ್ರಾರಂಭಿಸಿದೆ. 6200 ಚದರ ಅಡಿ ವಿಸ್ತೀರ್ಣದಲ್ಲಿ ವ್ಯಾಪಿಸಿರುವ ಈ ಪ್ರಮುಖ ಮಳಿಗೆಯು ಹೆಸರಾಂತ, ಜಾಗತಿಕ ಬ್ರ್ಯಾಂಡ್ಗಳ 15 ಶಾಪ್-ಇನ್-ಶಾಪ್ ಅಂಗಡಿಗಳನ್ನು ಒಳಗೊಂಡಿದೆ. ಉದಾಹರಣೆಗೆ ಡಿಯೋರ್, ಎಸ್ಟೀ ಲಾಡರ್, ಯೆವೆಸ್ ಸೇಂಟ್ ಲಾರೆಂಟ್, ಲಾ ಮೆರ್, ಪ್ರಾಡಾ ಮತ್ತು ವ್ಯಾಲೆಂಟಿನೊ. ಈ ಅಂಗಡಿಯಲ್ಲಿ ಅಲ್ಟ್ರಾ-ಐಷಾರಾಮಿ ಚರ್ಮದ ಆರೈಕೆ ಬ್ರ್ಯಾಂಡ್ - ಅಗಸ್ಟಿನಸ್ ಬೇಡರ್ ಕೂಡ ಸೇರಿದೆ. ಇದು ಟಿರಾ ಸ್ಟೋರ್ನಲ್ಲಿ ಪ್ರತ್ಯೇಕವಾಗಿ ಲಭ್ಯವಿದೆ. ರಿಲಯನ್ಸ್ ರೀಟೇಲ್ ವೆಂಚರ್ಸ್ ಲಿಮಿಟೆಡ್ನ ಕಾರ್ಯನಿರ್ವಾಹಕ ನಿರ್ದೇಶಕಿ ಇಶಾ ಅಂಬಾನಿ ಮಾತನಾಡಿ, ಟಿರಾ ಭಾರತದಲ್ಲಿ ಸೌಂದರ್ಯ ಮತ್ತು ಐಷಾರಾಮವನ್ನು ಮರು ವ್ಯಾಖ್ಯಾನಿಸುತ್ತಿದೆ. ಇದು ವಿಶ್ವದರ್ಜೆಯ ಬ್ರ್ಯಾಂಡ್ಗಳು ಮತ್ತು ಸಿಗ್ನೇಚರ್ ಸೇವೆಯೊಂದಿಗೆ ವಿಭಿನ್ನ ಅನುಭವವನ್ನು ನೀಡುತ್ತದೆ. ಜಿಯೋ ವರ್ಲ್ಡ್ ಪ್ಲಾಜಾದಲ್ಲಿರುವ ನಮ್ಮ ಟಿರಾ ಫ್ಲ್ಯಾಗ್ ಶಿಪ್ ಸ್ಟೋರ್ ಅನ್ನು ಪ್ರತಿಯೊಬ್ಬರನ್ನು ಪ್ರೇರೇಪಿಸಲು, ಒಟ್ಟುಗೂಡಿಸುವ ಉದ್ದೇಶದಿಂದ ವಿನ್ಯಾಸಗೊಳಿಸಲಾಗಿದೆ. ಐಷಾರಾಮಿ ಸೌಂದರ್ಯದ ಈ ಅಸಾಧಾರಣ ಪ್ರಯಾಣದಲ್ಲಿ ನಮ್ಮ ಗ್ರಾಹಕರನ್ನು ಕರೆದೊಯ್ಯಲು ನಾವು ಸಿದ್ಧರಿದ್ದೇವೆ' ಎಂದರು. ಸುಗಂಧ ಪ್ರಿಯರಿಗಾಗಿ ಅಂಗಡಿಯಲ್ಲಿ ವಿಶೇಷ ಪರಿಮಳ ಕೊಠಡಿಯನ್ನು ನಿರ್ಮಿಸಲಾಗಿದೆ. ಸುಗಂಧ ದ್ರವ್ಯಗಳ ಅಂತರರಾಷ್ಟ್ರೀಯ ಬ್ರ್ಯಾಂಡ್ಗಳು ಮತ್ತು ಸೀಮಿತ ಆವೃತ್ತಿಯ ಸಂಗ್ರಹಗಳು ಇಲ್ಲಿ ಲಭ್ಯವಿರುತ್ತವೆ. ಐಷಾರಾಮಿ ಸೌಂದರ್ಯ ಚಿಲ್ಲರೆ ವ್ಯಾಪಾರದಲ್ಲಿ ಮೊದಲ ಬಾರಿಗೆ, ಟಿರಾ ಬ್ಯೂಟಿ ಸೂಟ್ ಗಳಲ್ಲಿ ವಿಶೇಷ ಇನ್-ಸ್ಟೋರ್ ಚರ್ಮದ ಆರೈಕೆ ಸೇವೆಯನ್ನು ಪ್ರಾರಂಭಿಸಿದೆ. ಟಿರಾ ಅವರ ಸಹಿ ಚಿಕಿತ್ಸೆಯು ಸಿಗ್ನೇಚರ್-ಗ್ಲೋ, ಯೂತ್ ಎಲಿಕ್ಸಿರ್ ಮತ್ತು ಆಕ್ವಾ ಇನ್ಫ್ಯೂಷನ್ ಫೇಶಿಯಲ್ಗಳ ಜೊತೆಗೆ ಅಗಸ್ಟಿನಸ್-ಬೇಡರ್-ಸಿಗ್ನೇಚರ್ ಫೇಶಿಯಲ್ಗಳ ವಿಶೇಷ ರೂಪಗಳನ್ನು ಒಳಗೊಂಡಿದೆ. ಈ ಪ್ರಮುಖ ಅಂಗಡಿಯಲ್ಲಿ ತಂತ್ರಜ್ಞಾನವನ್ನು ಸಹ ಸಾಕಷ್ಟು ಬಳಸಲಾಗಿದೆ. ವರ್ಚುವಲ್ ಟ್ರೈ-ಆನ್ ಗಳಿಂದ ಹಿಡಿದು ವೈಯಕ್ತಿಕ ಸೌಂದರ್ಯ ಸ್ಥಳಗಳವರೆಗೆ, ಅತ್ಯಾಧುನಿಕ ತಂತ್ರಜ್ಞಾನ ಉಪಕರಣಗಳನ್ನು ಇಲ್ಲಿ ಸ್ಥಾಪಿಸಲಾಗಿದೆ. ಕಂಪನಿಯ ಪ್ರಕಾರ, ಟಿರಾ ಭಾರತದ ಸೌಂದರ್ಯ ಚಿಲ್ಲರೆ ವಹಿವಾಟಿನಲ್ಲಿ ಹೊಸ ಮಾನದಂಡವನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ, ಇದು ನಿಜವಾಗಿಯೂ ಸಾಟಿಯಿಲ್ಲದ ವಿಶ್ವದರ್ಜೆಯ ಅನುಭವವನ್ನು ನೀಡುತ್ತದೆ.

## ಹೆಸರು ಬೇಳೆ ಹಲ್ವ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹಳದಿ ಬಣ್ಣದ ಹೆಸರುಬೇಳೆ 1 ಕಪ್, ನೀರು-1/2 ಕಪ್, ತುಪ್ಪ- 3/4 ಕಪ್, ಸಕ್ಕರೆ -1 ಕಪ್, ಏಲಕ್ಕಿ ಪುಡಿ ? ಒಂದು ಚಿಟಕಿ, ಹೆಚ್ಚಿದ ಬಾದಾಮಿ 3-4 (ಅಲಂಕಾರಕ್ಕೆ), ಕೇಸರಿ ಎಳೆ 3-4 (ಅಲಂಕಾರಕ್ಕೆ)

### ಮಾಡುವ ವಿಧಾನ

ಒಂದು ಪಾತ್ರೆಯಲ್ಲಿ ಹೆಸರು ಬೇಳೆಯನ್ನು ಹಾಕಿ 3-4 ಗಂಟೆಗಳ ಕಾಲ ನೀರಿನಲ್ಲಿ ನೆನೆಯಲು ಬಿಡಿ. ನೆನೆದ ಬೇಳೆಯನ್ನು ಮಿಕ್ಸರ್ ಗೆ ಹಾಕಿ ಜೊತೆಗೆ ಒಂದು ಚಮಚ ನೀರನ್ನು ಬೆರೆಸಿ ನುಣುಪಾಗಿ ರುಬ್ಬಿಕೊಳ್ಳಬೇಕು. ನಂತರ ಒಂದು ಪಾತ್ರೆಯಲ್ಲಿ ರುಬ್ಬಿಕೊಂಡ ಪೇಸ್ಟ್ ಮತ್ತು 1/2 ಕಪ್ ತುಪ್ಪವನ್ನು ಹಾಕಿ ಸಾಧಾರಣ ಉರಿಯಲ್ಲಿ ಬೇಯಿಸಬೇಕು. ಮಿಶ್ರಣ ಗಂಟು-ಗಂಟಾಗದಂತೆ ನಿರಂತರವಾಗಿ ಕೈ ಆಡಿಸುತ್ತಲೇ ಇರಬೇಕು. ಮಿಶ್ರಣ ಹೊಂಬಣ್ಣಕ್ಕೆ ತಿರುಗಿದ ನಂತರ 1/4 ಕಪ್ನಷ್ಟು ತುಪ್ಪವನ್ನು ಹಾಕಿ ಕೈ ಆಡಿಸುತ್ತ ಇರಿ. ತುಪ್ಪ ಮಿಶ್ರಣದಿಂದ ಹೊರಬರಲು ಪ್ರಾರಂಭಿಸಿದಾಗ ಉರಿಯನ್ನು ಕಡಿಮೆ ಮಾಡಿ ಬೇಯಿಸುವುದನ್ನು ಮುಂದುವರಿಸಬೇಕು. ಈ ಸಮಯದಲ್ಲೇ ಒಂದು ಪಾತ್ರೆಯಲ್ಲಿ ಸಕ್ಕರೆಯನ್ನು ಹಾಕಿ, ಅದು ಮುಳುಗುವಷ್ಟು ನೀರನ್ನು ಹಾಕಿ ಪಾಕ ತಯಾರಿಸಿಕೊಳ್ಳಬೇಕು. ತಯಾರಾದ ಪಾಕವನ್ನು ದಾಲ್ ಮಿಶ್ರಣಕ್ಕೆ ಸೇರಿಸಿ ಚೆನ್ನಾಗಿ ಬೆರೆತು ಕೊಳ್ಳುವಂತೆ ಕೈ ಆಡಿಸಿ. ಸ್ವಲ್ಪ ಸಮಯದಲ್ಲೇ ಹಲ್ವಾ ಪಾತ್ರೆಯ ಬದಿಯಲ್ಲಿ ಬಿಟ್ಟುಕೊಳ್ಳಲು ಪ್ರಾರಂಭವಾಗುತ್ತದೆ. ಆಗ ಏಲಕ್ಕಿ ಪುಡಿಯನ್ನು ಹಾಕಿ ಚೆನ್ನಾಗಿ ಕಲಕಿ. ನಂತರ ಹೆಚ್ಚಿಕೊಂಡ ಬಾದಾಮಿ ಚೂರು ಹಾಗೂ ಕೇಸರಿ ಎಳೆಯಿಂದ ಅಲಂಕಾರಗೊಳಿಸಿ

## ದೊಡ್ಡಪತ್ರೆಯಿಂದ ಏನೆಲ್ಲ ಉಪಯೋಗವಿದೆ ಗೊತ್ತಾ?

### ಹೆಲ್ತ್ ಟಿಪ್ಸ್



ದೊಡ್ಡಪತ್ರೆ ಗಿಡವನ್ನು ಪ್ರತಿಯೊಬ್ಬರೂ ತಮ್ಮ ಮನೆಯ ಕುಂಡಗಳು ಸೇರಿದಂತೆ ಹಿತ್ತಲಿನಲ್ಲಿ ಬೆಳೆಸುವುದರಿಂದ ಹತ್ತಾರು ಉಪಯೋಗಗಳಿದ್ದು, ಅದರ ಉಪಯೋಗವನ್ನು ಅರಿತು ಬಳಸುತ್ತಾ ಬಂದರೆ ಹತ್ತು ಹಲವು ಆರೋಗ್ಯಕರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ. ಇದರ ಉಪಯೋಗ ತಿಳಿದಿದ್ದರಿಂದಲೇ ಹಿಂದಿನವರು ತಮ್ಮ ಮನೆಯ ಹಿತ್ತಲಿನಲ್ಲಿ ಬೆಳೆಸಿಕೊಳ್ಳುತ್ತಿದ್ದರು.

ದೊಡ್ಡಪತ್ರೆ ಅಲಂಕಾರ ಗಿಡವಾಗಿಯೂ ಕೆಲವೊಂದು ರೋಗಗಳಿಗೆ ಔಷಧಿಯಾಗಿ ಬಳಕೆಯಾಗುವುದರಿಂದ ಇದನ್ನು ಬೆಳೆಸುವ ಪ್ರಯತ್ನ ಮಾಡುವುದು ಒಳ್ಳೆಯದು. ದೊಡ್ಡಪತ್ರೆಯನ್ನು ಸಂಬಾರಬಳ್ಳಿ, ಸಾವಿರ ಸಂಬಾರ(ಅಜವಾನದೆಲೆ), ಕರ್ಪೂರವಳ್ಳಿ, ಚೆಂಪರವಳ್ಳಿ ಹೀಗೆ ಹಲವು ಹೆಸರುಗಳಿಂದ ಕರೆಯಲಾಗುತ್ತದೆ. ನೆಲದ ಮೇಲೆ ಪೊದೆಯಾಗಿ ಬೆಳೆಯುತ್ತದೆ. ಕುಂಡದಲ್ಲಿಯೂ ಯಾವುದೇ ಅಡೆತಡೆಯಿಲ್ಲದೆ ಬೆಳೆಯಬಹುದಾಗಿದೆ. ಎಲೆಗಳು ಹಸಿರಾಗಿ, ದಪ್ಪವಾಗಿರುತ್ತದೆ. ಅಷ್ಟೇ ಅಲ್ಲ ಎಲೆಗಳಲ್ಲಿ ನೀರಿನ ಅಂಶ ಹೆಚ್ಚಿನ ಪ್ರಮಾಣದಲ್ಲಿರುತ್ತದೆ. ಎಲೆಗಳನ್ನು ಕೊಯ್ದು ಸ್ವಲ್ಪ ಬೆಂಕಿಯಲ್ಲಿ ಬಾಡಿಸಿ ಹಿಂಡಿದರೆ ನೀರು ಸಿಗುತ್ತದೆ. ಈ ನೀರಿನಲ್ಲಿ ಔಷಧಿಯ ಗುಣವಿದೆ.

ಸುವಾಸನೆ ಹೊಂದಿರುವ ದೊಡ್ಡಪತ್ರೆ ವಿಟಿಸ್ ಇಂಡಿಕಾ ಎಂಬ ಸಸ್ಯವರ್ಗಕ್ಕೆ ಸೇರಿದೆ. ಜ್ಯೇಷ್ಠದಿಂದ ಭಾದ್ರಪದದವರೆಗೆ ಎಲೆಗಳು ಹುಲುಸಾಗಿ ಬೆಳೆದಿರುತ್ತವೆ. ತೇವವಿರುವ ಮತ್ತು ಜವಳು ಮಣ್ಣಿನಲ್ಲಿ ಚೆನ್ನಾಗಿ ಬೆಳೆಯುತ್ತದೆ. ಭಾರತದ ಮಲಬಾರ ತೀರ ಸೇರಿದಂತೆ ಕರ್ನಾಟಕದ ಹೆಚ್ಚಿನ ಕಡೆ ಇದು ಚೆನ್ನಾಗಿ ಬೆಳೆಯುತ್ತದೆ. ಉಷ್ಣವಲಯದ ಏಷಿಯಾ ಮತ್ತು ಆಫ್ರಿಕಾ ಖಂಡದಲ್ಲಿ ಸಾಧಾರಣವಾಗಿ ಇಪ್ಪತ್ತು ಪ್ರಭೇದಗಳಿವೆಯಂತೆ. ಭಾರತದಲ್ಲಿ ಸುಮಾರು ಹದಿಮೂರು ಬಗೆಗಳಿದ್ದು ಅವುಗಳಲ್ಲಿ ಕೆರೆನೋಷಸ್ ವಾಲ್ ಎಂಬ ವರ್ಗ ಹೆಚ್ಚು ಜನಪ್ರಿಯವಾಗಿದ್ದು, ಅದನ್ನೇ ಹೆಚ್ಚಾಗಿ ಬೆಳೆಸುತ್ತಾರೆ. ಪೊದೆಯಂತೆ ಕಾಂಡ ಹರಡಿ ಬೆಳೆಯುವುದರಿಂದ ಸಸ್ಯಾಭಿವೃದ್ಧಿಗೆ ಕಾಂಡವನ್ನು ಬಳಸಬಹುದಾಗಿದೆ.

ದೊಡ್ಡಪತ್ರೆಯು ಮಕ್ಕಳಲ್ಲಿ ಕಂಡು ಬರುವ ಉಬ್ಬಸ ಕಫಗಳ ನಿವಾರಣೆಗೆ ಬಳಸಬಹುದಂತೆ ಅದು ಹೇಗೆಂದರೆ? ಗಿಡದಿಂದ ಎಲೆಗಳನ್ನು ಕೊಯ್ದು ಚೆನ್ನಾಗಿ ತೊಳೆದು ಕೆಂಬೂದಿಯಲ್ಲಿ ಅಥವಾ ಬೆಂಕಿಯಲ್ಲಿ ಬಾಡಿಸಿಕೊಂಡು ಮಕ್ಕಳ ಎದೆಗೆ ಶಾಖ ಕೊಡಬೇಕು. ಎಲೆಗಳಿಂದ ಕಷಾಯ ಮಾಡಿ ಕುಡಿದರೆ ಕೆಮ್ಮು, ಉಬ್ಬಸ ಕಡಿಮೆಯಾಗುತ್ತದೆ. ಎಲೆಗಳಲ್ಲಿ ಶ್ಲೇಷ್ಮ ಬಿಡಿಸುವ ಗುಣವಿರುವುದರಿಂದ ಕಫ, ನೆಗಡಿಯಾಗಿ ಮೂಗು ಕಟ್ಟಿದರೆ ಎಲೆಗಳನ್ನು ಬಿಸಿ ಬೂದಿ ಇರುವ ಒಲೆಯಲ್ಲಿ ಹಾಕಿಬಾಡಿಸಿ ಬಳಿಕ ಎಲೆಯನ್ನು ಹಿಂಡಿ ಅದರಿಂದ ಬರುವ ಮೂರ್ನಾಲ್ಕು ತೊಟ್ಟು ರಸವನ್ನು ಜೇರಿಗೆ ಕಷಾಯದಲ್ಲಿ ಹಾಕಿ ಕುಡಿದರೆ ಒಳ್ಳೆಯದಾಗುತ್ತದೆ. ಶೀತದಿಂದಾಗಿ ಮಕ್ಕಳಿಗೆ ಮಲಬದ್ಧತೆಯಾದರೆ ಎಲೆಗಳ ರಸದಲ್ಲಿ ಜೇನುತುಪ್ಪ ಬೆರೆಸಿ ಕುಡಿಸಿದರೆ ಮಲಬದ್ಧತೆ ನಿವಾರಣೆಯಾಗುತ್ತದೆ.

## ಒಣ ಚರ್ಮದ ಆರೈಕೆಗೆ ಇಲ್ಲಿದೆ ಮನೆಮದ್ದು

### ಬ್ಯೂಟಿ ಟಿಪ್ಸ್



ಚುಮು ಚುಮು ಚಳಿ ಶುರುವಾಗಿದೆ. ಚಳಿಗಾಲದಲ್ಲಿ ತಣ್ಣನೆಯ ಗಾಳಿ ಹಾಗೂ ಒಣ ಹವೆ ಚರ್ಮಕ್ಕೆ ಹಾನಿಯುಂಟು ಮಾಡುತ್ತದೆ. ಚರ್ಮ ಒಡೆದು ಉರಿ, ತುರಿಕೆ, ಕಿರಿಕಿರಿಯುಂಟಾಗುತ್ತದೆ. ಚಳಿಗಾಲದಲ್ಲಿ ಚರ್ಮಕ್ಕೆ ವಿಶೇಷ ಆರೈಕೆ ಬೇಕಾಗುತ್ತದೆ. ಈ ಋತುವಿನಲ್ಲಿ ಉಳಿದ ಕ್ರೀಂ ಗಳಿಗಿಂತ ತೆಂಗಿನ ಎಣ್ಣೆ, ಚರ್ಮವನ್ನು ಮೃದುಗೊಳಿಸಿ, ಕೋಮಲ ತ್ವಚೆ ಪಡೆಯಲು ನೆರವಾಗುತ್ತದೆ. ಚಳಿಗಾಲದಲ್ಲಿ ರಾತ್ರಿ ಸ್ವಲ್ಪ ತೆಂಗಿನ ಎಣ್ಣೆಯನ್ನು ತುಟಿಗಳಿಗೆ ಹಚ್ಚಿ ಮಲಗಿ. ಒರಟಾಗಿದ್ದ ತುಟಿಗಳು ಒಂದು ರಾತ್ರಿಯೊಳಗೆ ಮೃದುವಾಗುತ್ತದೆ. ಲಿಪ್ ಬಾಮ್ ರೂಪದಲ್ಲಿ ನೀವು ತೆಂಗಿನ ಎಣ್ಣೆಯನ್ನು ಬಳಸಬಹುದಾಗಿದೆ. ಮೇಕಪ್ ತೆಗೆಯಲು ಅಗ್ಗದ ಹಾಗೂ ಸುಲಭದ ಕ್ರೀಮ್ ತೆಂಗಿನ ಎಣ್ಣೆ. ತೆಂಗಿನ ಎಣ್ಣೆಯಿಂದ ಮೇಕಪ್ ತೆಗೆದಲ್ಲಿ ಮೇಕಪ್ ನ ಕೆಮಿಕಲ್ ಚರ್ಮಕ್ಕೆ ಅಂಟಿಕೊಳ್ಳುವುದಿಲ್ಲ. ಜೊತೆಗೆ ಚರ್ಮ ಕೋಮಲವಾಗುತ್ತದೆ.

ಶುಷ್ಕ ಗಾಳಿಯ ಭಯಕ್ಕೆ ಅನೇಕರು ಚಳಿಗಾಲದಲ್ಲಿ ಮನೆಯಿಂದ ಹೊರ ಹೋಗಲು ಹೆದರ್ತಾರೆ. ಚಳಿಗಾಲದ ಗಾಳಿಗೆ ಭಯಪಡುವ ಅಗತ್ಯವಿಲ್ಲ. ಮನೆಯಿಂದ ಹೊರ ಬೀಳುವ ಮೊದಲು ಮುಖ, ಕೈ-ಕಾಲಿಗೆ ತೆಂಗಿನ ಎಣ್ಣೆ ಸವರಿಕೊಂಡು ಹೋದ್ರೆ ನಿಮ್ಮ ಚರ್ಮ ಶುಷ್ಕವಾಗುವುದಿಲ್ಲ.

ತೆಂಗಿನ ಎಣ್ಣೆಗೆ ಸ್ವಲ್ಪ ನಿಂಬೆ ರಸವನ್ನು ಬೆರೆಸಿ ಹಚ್ಚಿಕೊಳ್ಳುವುದ್ರಿಂದ ಚರ್ಮದ ಬಣ್ಣ ಬದಲಾಗುತ್ತದೆ. ಜೊತೆಗೆ ಕಪ್ಪು ಕಲೆಗಳು ಮಾಯವಾಗುತ್ತವೆ.



## ನಾಗಚೈತನ್ಯಗೆ ಮತ್ತೊಂದು ಸಂಕಷ್ಟ



ಹಲವು ವರ್ಷಗಳ ಕಾಲ ಪ್ರೀತಿಸಿ ನಾಗಚೈತನ್ಯ ಹಾಗೂ ಸಮಂತಾ ಮದುವೆಯಾಗಿದ್ದರು. ಆದರೆ ಮದುವೆಯಾದ ನಾಲ್ಕೇ ನಾಲ್ಕು ವರ್ಷಕ್ಕೆ ಜೋಡಿ ದೂರದೂರವಾಗಿದ್ದಾರೆ. ಸಮಂತಾರಿಂದ ದೂರವಾದ ನಾಗಚೈತನ್ಯ ನಟಿ ಸೋಭಿತಾ ಧೂಳಿಪಾಲ ಜೊತೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಆದರೆ ಖ್ಯಾತ ಜ್ಯೋತಿಷಿ ವೇಣು ಸ್ವಾಮಿ ಹೇಳಿದ ಭವಿಷ್ಯ ಎಲ್ಲರನ್ನು ಅಚ್ಚರಿಗೊಳಿಸಿದೆ. ವೇಣು ಸ್ವಾಮಿಯ ಭವಿಷ್ಯದಿಂದ ನಾಗಚೈತನ್ಯ ಹಾಗೂ ಶೋಭಿತಾ ಮದುವೆಯಾಗ ಬೇಕೋ ಬೇಡವೋ ಎಂಬ ಅನುಮಾನದಲ್ಲಿದ್ದಾರೆ ಎನ್ನಲಾಗುತ್ತಿದೆ. ಈ ಹಿಂದೆ ನಾಗಚೈತನ್ಯ ಮತ್ತು ಸೋಭಿತಾ ದಾಂಪತ್ಯ ಜೀವನಕ್ಕೆ ಮೂರನೇ ವ್ಯಕ್ತಿ ಪ್ರವೇಶಿಸಿ ಘರ್ಷಣೆ ಸೃಷ್ಟಿಸುತ್ತಾನೆ ಎಂದು ವೇಣು ಸ್ವಾಮಿ ಇನ್ಸ್ಟಾಗ್ರಾಮ್ ನಲ್ಲಿ ಪೋಸ್ಟ್ ಮಾಡಿದ್ದರು. ಇದರಿಂದಾಗಿ 2027ರಲ್ಲಿ ಇವರು ದೂರ ದೂರವಾಗಲಿದ್ದಾರೆ ಎಂದು ಭವಿಷ್ಯ ನುಡಿದಿದ್ದಾರೆ. ಈ ಹಿಂದೆ ಅವರು ನಾಗ ಚೈತನ್ಯ ತನ್ನ ಮೊದಲ ಪತ್ನಿ ಸಮಂತಾಗೆ ವಿಚ್ಛೇದನ ನೀಡಲಿದ್ದಾರೆ ಎಂದು ಭವಿಷ್ಯ ನುಡಿದಿದ್ದು ಆ ಭವಿಷ್ಯ ನಿಜವಾಗಿತ್ತು. ಇದೇ ಡಿಸೆಂಬರ್ 4 ರಂದು ಚೈತುನ್ಯ ಮತ್ತು ಸೋಭಿತಾ ವಿವಾಹವಾಗಲಿದ್ದಾರೆ ಎಂಬ ವರದಿಗಳಿವೆ. ಅದಕ್ಕೂ ಮುನ್ನ ಒಂದು ರೆಡ್ಡಿಟ್ ಪೋಸ್ಟ್ ವೈರಲ್ ಆಗುತ್ತಿದೆ. ಈ ಪೋಸ್ಟ್ನಲ್ಲಿ ಹೆಸರುಗಳನ್ನು ಉಲ್ಲೇಖಿಸದೆ, ಟಾಲಿವುಡ್ ಸ್ಟಾರ್ ಕಿಡ್ ಮತ್ತು ಬಾಲಿವುಡ್ ವೆಬ್ ಸಿರೀಸ್ ನಟಿಯನ್ನು ಉಲ್ಲೇಖಿಸಲಾಗಿದೆ. ಈ ವಿವರಣೆ ನೋಡಿದರೆ ಅದು ನಾಗ ಚೈತನ್ಯ ಮತ್ತು ಸೋಭಿತಾ ಧೂಳಿಪಾಲ ಅವರ ಬಗ್ಗೆ ಎಂದು ಅರ್ಥವಾಗುತ್ತದೆ.

ವೇಣು ಸ್ವಾಮಿ ಹೇಳಿದ್ದನ್ನ ಕೇಳಿ ಬೇರೊಬ್ಬ ಜ್ಯೋತಿಷಿಯನ್ನು ಸಂಪರ್ಕಿಸಿ ಎಂದು ನಾಗ ಚೈತನ್ಯ ತಂದೆ ನಾಗಾರ್ಜುನ ಅವರಿಗೆ ಹೇಳಲಾಗಿತ್ತು.. ವೇಣು ಸ್ವಾಮಿ ಹೇಳಿದ್ದನ್ನೇ ಆ ಜ್ಯೋತಿಷಿಯೂ ಹೇಳಿದ್ದರಿಂದ ಈ ಮದುವೆ ಬಗ್ಗೆ ಮತ್ತೊಮ್ಮೆ ಯೋಚಿಸಲು ಚೈತನ್ಯ ಪೋಷಕರು ನಿರ್ಧರಿಸಿದ್ದಾರೆ ಎಂದು ಈ ಪೋಸ್ಟ್ನಲ್ಲಿ ಹೇಳಿದ್ದಾರೆ. ಆ ಪೋಸ್ಟ್ ನೋಡಿ ಎಲ್ಲರೂ ಈ ಜೋಡಿ ನಾಗ ಚೈತನ್ಯ ಮತ್ತು ಸೋಭಿತಾ ಧೂಳಿಪಾಲ ಎಂದೇ ಭಾವಿಸಿದ್ದಾರೆ. ಕಾಮೆಂಟ್ ವಿಭಾಗದಲ್ಲಿ, ಅಭಿಮಾನಿಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ ಮತ್ತು ಈ ಸುದ್ದಿ ನಿಜವಾಗಬಹುದು ಎಂದು ಕೆಲವರು ಹೇಳಿದರೇ, ಇನ್ನು ಕೆಲವರು ಇದು ಸುಳ್ಳು ಸುದ್ದಿ ಎನ್ನುತ್ತಾರೆ.. ಚೈತನ್ಯ ಮತ್ತು ಸೋಭಿತಾ ನಿಶ್ಚಿತಾರ್ಥದ ನಂತರ ವೇಣು ಸ್ವಾಮಿ ನೀಡಿದ ಜಾತಕ ವೈರಲ್ ಆಗಿದೆ. ಇದರಿಂದಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಟೀಕೆ ವ್ಯಕ್ತವಾಗಿದೆ. ಬೇರೆಯವರ ಖಾಸಗಿ ಬದುಕಿನ ಬಗ್ಗೆ ಸಾರ್ವಜನಿಕವಾಗಿ ಮಾತನಾಡುವುದು ಸರಿಯೇ ಎಂದು ಜನ ಪ್ರಶ್ನಿಸಿದ್ದಾರೆ. ವೇಣು ಸ್ವಾಮಿ ಅವರ ಹೇಳಿಕೆ ವಿರುದ್ಧ ಟಿಎಫ್ಜೆಎ ದೂರು ದಾಖಲಿಸಿದೆ. ಈ ಹಿಂದೆಯೂ ಇತರ ಸೆಲೆಬ್ರಿಟಿಗಳು ತಮ್ಮ ವೈಯಕ್ತಿಕ ವಿಷಯಗಳ ಬಗ್ಗೆ ಕೆಟ್ಟ ಭವಿಷ್ಯ ನುಡಿದಿದ್ದರು ಎಂದು ಟಿಎಫ್ಜೆಎ ತನ್ನ ದೂರಿನಲ್ಲಿ ತಿಳಿಸಿದೆ. ನಾಗ ಚೈತನ್ಯ ಮತ್ತು ಶೋಭಿತಾ ಧೂಳಿಪಾಲ ಅವರ ಬಗ್ಗೆ ಮಾಡಿದ ಕಾಮೆಂಟ್ಗಳಿಗೆ ಭಾರೀ ಟೀಕೆಗೆ ಗುರಿಯಾದ ನಂತರ, ವೇಣು ಸ್ವಾಮಿ ತಮ್ಮ ವೀಡಿಯೊವನ್ನು ಡಿಲೀಟ್ ಮಾಡಿ ಕ್ಷಮೆಯಾಚಿಸಿದ್ದಾರೆ. ಯಾವುದೇ ಸೆಲೆಬ್ರಿಟಿಗಳ ಜಾತಕವನ್ನು ಸಾರ್ವಜನಿಕವಾಗಿ ಹೇಳುವುದಿಲ್ಲ ಎಂದು ಘೋಷಿಸಿದ್ದಾರೆ.

## ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸುತ್ತಿರುವ

# ಪಿ.ಸಿ ಸರ್ಕಾರ್ ಮ್ಯಾಜಿಕ್ ಶೋ







ಐದು ವರ್ಷಗಳ ನಂತರ ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಶ್ವವಿಖ್ಯಾತ ಜಾದುಗಾರ ಪಿ.ಸಿ ಸರ್ಕಾರ್ (ಪೋರುಶ್) ಮೆಗಾ ಮ್ಯಾಜಿಕ್ ಶೋ ಇಂದ್ರಜಾಲ ಪ್ರೇಕ್ಷಕರನ್ನು ಮ'ಂ'ತ್ರ'ಮ'ು'ಗ್ದ'ರ'ನ್ನಾ'ಗಿ'ಸ'ು'ವ'ಲ್ಲಿ ಯಶಸ್ವಿಯಾಗಿದೆ. ಒತ್ತಡ ಮುಕ್ತ ಬದುಕಿಗೆ ಮ್ಯಾಜಿಕ್ ಪ್ರದರ್ಶನ ಸಂಜೀವಿನಿಯಾಗಿ ಪರಿಣಮಿಸಿದೆ.

''ಇಂದ್ರಜಾಲ'' ಮತ್ತಷ್ಟು ವೈವಿಧ್ಯತೆ, ನಾವೀನ್ಯತೆ, ಅಚ್ಚರಿಗಳೊಂದಿಗೆ ಆಧುನಿಕ ತಲೆಮಾರಿನ ಪ್ರೇಕ್ಷರನ್ನು ಸೆಳೆಯುತ್ತಿದೆ. ಹೊಸ ಆಯಾಮದೊಂದಿಗೆ ಮ್ಯಾಜಿಕ್ ಶೋ ನಡೆಯುತ್ತಿದೆ. ತಂತ್ರಜ್ಞಾನ ಸಾಧನಗಳಲ್ಲಿ ಮುಳುಗಿರುವ ಜನ ಸಾಮಾನ್ಯರಿಗೆ ಮ್ಯಾಜಿಕ್ ಶೋ ಮುದ ನೀಡುತ್ತಿದೆ. ಜೆ.ಸಿ.ರಸ್ತೆಯ ಟೌನ್ ಹಾಲ್ ನಲ್ಲಿ ನ. 10 ರಂದು ಈಗಾಗಲೇ ಪ್ರದರ್ಶನ ಕಂಡಿದ್ದು, 16, 17 ಮತ್ತು 18ರಂದು ಮತ್ತೆ ಮೂರು ದಿನಗಳ ಕಾಲ ಮ್ಯಾಜಿಕ್ ಶೋಗಾಗಿ ವೇದಿಕೆ ಸಜ್ಜಾಗಿದೆ.

**» 5 ವರ್ಷಗಳ ನಂತರ ಬೆಂಗಳೂರಿನಲ್ಲಿ ಸೂಜಿಗಲ್ಲಿನಂತೆ ಸೆಳೆಯುತ್ತಿರುವ ಇಂದ್ರಜಾಲ**

ಮ್ಯಾಜಿಕ್ ಮತ್ತು ಪಿ.ಸಿ. ಸರ್ಕಾರ್ ನಡುವೆ ಅವಿನಾಭಾವ ಸಂಬಂಧವಿದ್ದು, ಮ್ಯಾಜಿಕ್ ಅವರ ರಕ್ತದಲ್ಲಿ ಆಳವಾಗಿ ಬೇರೂರಿದೆ. ಮ್ಯಾಜಿಕ್ ಅವರ ಜೀವನ ಶೈಲಿಯಾಗಿದೆ. ನಿದ್ದೆ ಮಾಡುವಾಗ ನಾನು ಮ್ಯಾಜಿಕ್ ಅನ್ನು ಉಸಿರಾಡುತ್ತೇನೆ; ಎಚ್ಚರವಾದಾಗ ನಾನು ಮ್ಯಾಜಿಕ್ ನಲ್ಲಿ ನಿರತರಾಗುತ್ತೇನೆ ಎಂದು ಅವರು ಪ್ರತಿಪಾದಿಸಿದ್ದಾರೆ. ಮೊದಲ ದಿನದ ಪ್ರದರ್ಶನಕ್ಕೆ ಪ್ರೇಕ್ಷಕ ಸಮೂಹ ಕರತಾಡನದ ಮೂಲಕ ಮೆಚ್ಚುಗೆ ವ್ಯಕ್ತವಾಯಿತು.

ವಿಶ್ವದ ಮ್ಯಾಜಿಕ್ ಲೋಕಕ್ಕೆ ಪಿ.ಸಿ. ಸರ್ಕಾರ್ ಮಹತ್ವದ ಕೊಡುಗೆ ನೀಡಿದ್ದು, ನಗರದಲ್ಲಿ ನಡೆಯುತ್ತಿರುವ ಮ್ಯಾಜಿಕ್ ಶೋ ಮತ್ತೊಂದು ಹೊಸ ಆಯಾಮವನ್ನು ಸೃಷ್ಟಿಸುವ ನಿರೀಕ್ಷೆ ಹೊಂದಿದೆ. ಇಂದ್ರಜಾಲದ ಮೂಲಕ ಅವರು ಹೆಚ್ಚಿನ ಪ್ರಭಾವಲಯದೊಂದಿಗೆ ಪ್ರಾಚೀನ ವೈಭವದ ಮುಕುಟಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಮ್ಯಾಜಿಕ್ ಕ್ಷೇತ್ರದಲ್ಲಿ ಅವರು ತೋರಿದ ಪ್ರದರ್ಶನ, ಅವರ ಮುನ್ನುಡಿಗಳು ಇಂದು ಅಂತಾರಾಷ್ಟ್ರೀಯ ಆಕರ್ಷಣೆಯ ಕಲೆಯಾಗಿ ಹೊರಹೊಮ್ಮುವಂತೆ ಮಾಡಿವೆ.

ಮ್ಯಾಜಿಕ್ ಪರಂಪರೆಯನ್ನು ಪರಿಗಣಿಸಿದಾಗ ಪಿ.ಸಿ. ಸರ್ಕಾರ್ ಕುಟುಂಬವು ವಿಶ್ವದ ಶ್ರೇಷ್ಠ ಜಾದೂಗಾರರ ಪಟ್ಟಿಯಲ್ಲಿ ಮುಂಚೂಣಿಯಲ್ಲಿದೆ. ಭಾರತೀಯ ಮ್ಯಾಜಿಕ್ ಅನ್ನು ವಿಶ್ವ ವೇದಿಕೆಗೆ ಕೊಂಡೊಯ್ಯುವಲ್ಲಿ ಪಿ.ಸಿ. ಸರ್ಕಾರ್ (ಹಿರಿಯ) ಕಾರಣವಾಗಿದ್ದರೆ, ಅವರ ಮಕ್ಕಳು ವಿಶ್ವ ವೇದಿಕೆಯಲ್ಲಿ ಇಂದ್ರಜಾಲಕ್ಕೆ ಮಹತ್ವದ ಹೆಸರು ತಂದುಕೊಡುವಲ್ಲಿ ಮಹತ್ವದ ಹೆಜ್ಜೆಗಳೊಂದಿಗೆ ಮುಂದುವರಿದಿದ್ದಾರೆ. ಜಗತ್ತಿನಾದ್ಯಂತ ಅನೇಕ ಮಹತ್ವದ ಪ್ರಶಸ್ತಿಗಳಿಗೆ ಭಾಜನವಾಗಿರುವ ಪಿ.ಸಿ. ಸರ್ಕಾರ್ ಕುಟುಂಬ ಭಾರತೀಯ ಮ್ಯಾಜಿಕ್ ಲೋಕದ ಅತ್ಯುತ್ತಮ ರಾಯಭಾರಿಗಳಾಗಿ ಹೊರಹೊಮ್ಮಿದ್ದಾರೆ.



**ಜಯಶ್ರೀ.ಬಿ.ಆರ್**
**ಖ್ಯಾತ ಜ್ಯೋತಿಷಿ**
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅನಾರೋಗ್ಯ ಸಮಸ್ಯೆಗಳು, ಮಕ್ಕಳಿಂದ ತೊಂದರೆ, ಹಿರಿಯರ ಶಾಪಕ್ಕೆ ಗುರಿಯಾಗುವಿರಿ.

**ವೃಷಭ:** ಋಣ ರೋಗ ಬಾಧೆಗಳಿಂದ ಮುಕ್ತಿ, ಕುಟುಂಬದಲ್ಲಿ ವಾಗ್ವಾದಗಳು, ಪಾಲುದಾರಿಕೆಯಲ್ಲಿ ಆರ್ಥಿಕ ಸಂಕಷ್ಟಗಳು.

**ಮಿಥುನ:** ಸಂಕಷ್ಟಕ್ಕೆ ಸಿಲುಕುವಿರಿ, ಶುಭಕಾರ್ಯಗಳು ಮುಂದೂಡಿಕೆ, ಅನಾರೋಗ್ಯ ಸಮಸ್ಯೆಗಳು.

**ಕಟಕ:** ಮಾನಸಿಕ ಕಿರಿಕಿರಿ ಮತ್ತು ತೊಂದರೆ, ಆರ್ಥಿಕ ಸಂಕಷ್ಟಗಳಿಂದ ಮುಕ್ತಿ, ಸರ್ಕಾರಿ ಕೆಲಸ.

**ಸಿಂಹ:** ಮಕ್ಕಳಿಂದ ಕಿರಿಕಿರಿ, ಅನಾರೋಗ್ಯ ಸಮಸ್ಯೆ, ಕೆಲಸ ಕಾರ್ಯಗಳಲ್ಲಿ ವಿಘ್ನ.

**ಕನ್ಯಾ:** ಉದ್ಯೋಗ ಲಾಭ, ಸಾಲಗಾರರಿಂದ ಮುಕ್ತಿ, ಶತ್ರು ದಮನ, ಗುರುಗಳಿಂದ ಮಾರ್ಗದರ್ಶನ.

**ತುಲಾ:** ನಿದ್ರಾಭಂಗ, ಉದ್ಯೋಗ ಒತ್ತಡಗಳು, ಕಾಲು ನೋವು, ಮಂದತ್ವ ಬುದ್ಧಿ ಚಂಚಲತೆ.

**ವೃಶ್ಚಿಕ:** ಅಧಿಕ ಖರ್ಚು, ಸ್ಥಿರಾಸ್ತಿ ವಾಹನ ಖರೀದಿಯಲ್ಲಿ ಮೋಸ, ಕೆಲಸಕಾರ್ಯಗಳಲ್ಲಿ ಸೋಮಾರಿತನ, ಆಲಸ್ಯ, ನಿರಾಸೆ.

**ಧನಸ್ಸು:** ಕುಟುಂಬದಲ್ಲಿ ಕಿರಿಕಿರಿ ಮತ್ತು ಕಲಹ, ಪ್ರಯಾಣಕ್ಕೆ ಅಡೆತಡೆ, ಅವಮಾನಗಳಿಗೆ ಗುರಿಯಾಗುವ ಸಂದರ್ಭ.

**ಮಕರ:** ವ್ಯವಹಾರ ಸ್ಥಳದಲ್ಲಿ ಕಿರಿಕಿರಿ, ಆರ್ಥಿಕ ಸಹಾಯ, ದಾಯಾದಿ ಕಲಹ, ಕೋರ್ಟ್ ಕೇಸುಗಳಲ್ಲಿ ಜಯ.

**ಕುಂಭ:** ಸಹೋದರನಿಂದ ಲಾಭ, ಉದ್ಯೋಗ ಬದಲಾವಣೆಗೆ ಅಡೆತಡೆ, ದಾಂಪತ್ಯದಲ್ಲಿ ವಿರಸ.

**ಮೀನ:** ಮಾನಸಿಕ ಕಿರಿಕಿರಿ, ವಾಹನಗಳಿಂದ ಪೆಟ್ಟು, ಕೆಲಸ ಕಾರ್ಯಗಳಿಗೆ ಅಡೆತಡೆ, ನೆಮ್ಮದಿ ಭಂಗ. ಕೆಲಸಕಾರ್ಯಗಳಲ್ಲಿ ಸೋಮಾರಿತನ,

## ಮಕ್ಕಳ




ಇಂದಿನ ಮಕ್ಕಳೇ ನಾಳಿನ ಪ್ರಜೆಗಳು ಎಂಬ ಮಾತಿದೆ. ಮಕ್ಕಳ ಹಕ್ಕು ಹಾಗೂ ಶಿಕ್ಷಣದ ಮಹತ್ವವನ್ನು ತಿಳಿಸುವ ಉದ್ದೇಶದಿಂದ ಪ್ರತಿ ವರ್ಷ ನವೆಂಬರ್ 14 ರಂದು ಭಾರತದಲ್ಲಿ ಮಕ್ಕಳ ದಿನ ಆಚರಿಸಲಾಗುತ್ತದೆ. ವಿಶ್ವಸಂಸ್ಥೆ ನವೆಂಬರ್ 20ಕ್ಕೆ ಮಕ್ಕಳ ದಿನ ಆಚರಿಸಿದರೂ ಭಾರತದಲ್ಲಿ ನವೆಂಬರ್ 14ರಂದೇ ಮಕ್ಕಳ ದಿನ ಆಚರಿಸಲಾಗುತ್ತದೆ.

ನವೆಂಬರ್ ತಿಂಗಳು ಎಂದರೆ ಮಕ್ಕಳ ತಿಂಗಳು ಎಂದರೂ ತಪ್ಪಾಗಲಿಕ್ಕಿಲ್ಲ. ಭಾರತದಾದ್ಯಂತ ಪ್ರತಿವರ್ಷ ನವೆಂಬರ್ 14 ರಂದು ಮಕ್ಕಳ ದಿನವನ್ನು ಆಚರಿಸಲಾಗುತ್ತದೆ. ಈ ದಿನದಂದು ಶಾಲೆಗಳಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಬಹುಮಾನ ವಿತರಣೆಗಳನ್ನೂ ಮಾಡಲಾಗುತ್ತದೆ. ಈ ದಿನವು ಮಕ್ಕಳ ಹಕ್ಕು ಮತ್ತು ಶಿಕ್ಷಣದ ಬಗ್ಗೆ ಅರಿವು ಮೂಡಿಸುವ ದಿನವೂ ಆಗಿದೆ ನವೆಂಬರ್ 14 ಭಾರತದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರೂ ಅವರು ಹುಟ್ಟಿದ ದಿನ. ನೆಹರೂ ಅವರ ಜನ್ಮವಾರ್ಷಿಕೋತ್ಸವವನ್ನು ಮಕ್ಕಳ ದಿನ ಎಂದು ಆಚರಿಸಲಾಗುತ್ತದೆ. ನೆಹರೂ ಅವರನ್ನು ಚಾಚಾ ಎಂದೇ ಕರೆಯಲಾಗುತ್ತದೆ. ನೆಹರೂ ಮಕ್ಕಳ ಶಿಕ್ಷಣ ಮತ್ತು ಹಕ್ಕುಗಳ ಪ್ರಬಲ ಪ್ರತಿಪಾದಕರಾಗಿದ್ದರು. ಅವರ ದೃಷ್ಟಿಕೋನವು ದೇಶದ ಭವಿಷ್ಯ ಮತ್ತು ಸಮಾಜದ ಅಡಿಪಾಯವಾಗಿ ಮಕ್ಕಳ ಪ್ರಾಮುಖ್ಯತೆಯನ್ನು ಒತ್ತಿಹೇಳಿತು. ಮಕ್ಕಳು ಸಮಾಜದ ಆಸ್ತಿ ಎಂದು ನೆಹರೂ ಪ್ರತಿಪಾದಿಸಿದರು. ಎಲ್ಲಾ ಮಕ್ಕಳಿಗೂ ಶಿಕ್ಷಣ ಸಿಗಬೇಕು ಎಂದು ಅವರು ಒತ್ತಿ ಹೇಳಿದ್ದರು. 1955ರಲ್ಲಿ ಅವರು ಭಾರತೀಯ ಮಕ್ಕಳನ್ನು ಪ್ರತಿನಿಧಿಸಲು ಚಿಲ್ಡ್ರನ್ಸ್ ಫಿಲ್ಮ್ ಸೊಸೈಟಿ ಇಂಡಿಯಾವನ್ನು ಸ್ಥಾಪಿಸಿದ್ದರು.

ಮಕ್ಕಳ ದಿನವನ್ನು ಮೊದಲ ಬಾರಿಗೆ 1948ರಲ್ಲಿ ನವೆಂಬರ್ 5 ರಂದು ಫ್ಲವರ್ ಡೇ ಎಂದು ಆಚರಿಸಲಾಯಿತು. ಭಾರತೀಯ ಮಕ್ಕಳ ಕಲ್ಯಾಣ ಮಂಡಳಿಯು ಫ್ಲವರ್ ಟೋಕನ್ಗಳನ್ನು ಮಾರಾಟ ಮಾಡುವ ಮೂಲಕ ಮಕ್ಕಳ ಕಲ್ಯಾಣಕ್ಕಾಗಿ ಹಣ ಸಂಗ್ರಹಿಸುವ ಪ್ರಯತ್ನ ಮಾಡಿತ್ತು. ನೆಹರೂ ಜನ್ಮದಿನವನ್ನು 1954 ರಲ್ಲಿ ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಯಿತು. ಆರಂಭದಲ್ಲಿ ವಿಶ್ವಸಂಸ್ಥೆಯು ವಿಶ್ವ ಮಕ್ಕಳ ದಿನವನ್ನು ಆಚರಿಸುವ ದಿನವಾದ ನವೆಂಬರ್ 20 ರಂದು ಭಾರತದಲ್ಲಿ ಮಕ್ಕಳ ದಿನವನ್ನು ಆಚರಿಸಲಾಯಿತು. ಆದಾಗ್ಯೂ, 1964ರಲ್ಲಿ ಜವಾಹರಲಾಲ್ ನೆಹರೂ ಅವರ ಮರಣದ ನಂತರ, ಭಾರತೀಯ ಸಂಸತ್ತು ನೆಹರೂ ಅವರ ಜನ್ಮದಿನವನ್ನು ಮಕ್ಕಳ ದಿನವನ್ನಾಗಿ ಸ್ಮರಿಸುವ ನಿರ್ಣಯವನ್ನು ಅಂಗೀಕರಿಸಿತು. ಮಕ್ಕಳ ಶಿಕ್ಷಣ, ಹಕ್ಕುಗಳು ಹಾಗೂ ಕಾಳಜಿಯ ಬಗ್ಗೆ ಜಾಗೃತಿ ಮೂಡಿಸಲು ಇದು ವೇದಿಕೆಯಾಗಿ ಕಾರ್ಯನಿರ್ವಹಿಸುವುದರಿಂದ ಮಕ್ಕಳ ದಿನಾಚರಣೆಗೆ ಅಪಾರ ಮಹತ್ವವಿದೆ. ಜವಾಹರಲಾಲ್ ನೆಹರೂ ಒಮ್ಮೆ ಹೇಳಿದರು, 'ಇಂದಿನ ಮಕ್ಕಳು ನಾಳಿನ ಭಾರತವನ್ನು ನಿರ್ಮಾಣ ಮಾಡುತ್ತಾರೆ' ಎಂದು. ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಮಕ್ಕಳ ಮಹತ್ವವನ್ನು ಅವರು ಒತ್ತಿ ಹೇಳಿದ್ದರು.

ಸಂಜೆ ಮುಗಿಲು
ಗುರುವಾರ
14.11.2024



# ಡೊನಾಲ್ಡ್ ಟ್ರಂಪ್ ಗೆಲುವು - ಎಕ್ಸ್ ತೊರೆದ ಲಕ್ಷಾಂತರ ಮಂದಿ!

**ನ್ಯೂ ಯಾರ್ಕ್ :** ಅಮೆರಿಕದಲ್ಲಿ ಡೊನಾಲ್ಡ್ ಟ್ರಂಪ್ ಅಧಿಕಾರಕ್ಕೆ ಬಂದಾಕ್ಷಣ ವಿಶ್ವದ ಶ್ರೀಮಂತ ಉದ್ಯಮಿ ಎಲಾನ್ ಮಸ್ಕ್ ಗೆ ಬಿಗ್ ಶಾಕ್ ಎದುರಾಗಿದೆ. ಮಸ್ಕ್ ಒಡೆತನದ 'ಎಕ್ಸ್' ಸೋಷಿಯಲ್ ಮೀಡಿಯಾ ಪ್ಲಾಟ್ ಫಾರಂ ಗೆ 1ಲಕ್ಷದ 15 ಸಾವಿರ ಮಂದಿ ಬಳಕೆದಾರರು ಗುಡ್ ಬೈ ಹೇಳಿದ್ದಾರೆ. ಅಮೆರಿಕ ಎಲೆಕ್ಷನ್ ನಲ್ಲಿ ಎಲಾನ್ ಮಸ್ಕ್ ,ಡೋನಾಲ್ ಟ್ರಂಪ್ ಪರ ಎಕ್ಸ್ ಖಾತೆಯಲ್ಲಿ ದೊಡ್ಡಮಟ್ಟದ ಪ್ರಚಾರ ನಡೆಸಿದ್ದರು.ಟ್ರಂಪ್ ಗೆಲುವಿನಲ್ಲಿ ಮಸ್ಕ್ ಪಾತ್ರ ಬಹಳ ಮಹತ್ವದ್ದಾಗಿತ್ತು. ಈ ಎಲ್ಲಾ ಬೆಳವಣಿಗೆ ಗಳಿಂದ ಬೇಸತ್ತ ಎಕ್ಸ್ ಬಳಕೆದಾರರು ಅಕೌಂಟ್ ಗಳನ್ನ ಡಿಆಕ್ಟಿವೇಟ್ ಮಾಡಿದ್ದಾರೆ. ಎಕ್ಸ್ ಗೆ ಗುಡ್ ಬೈ ಹೇಳಿ 'ಬ್ಲೂಸ್ಕೈ' ಸೋಷಿಯಲ್ ಮಿಡಿಯಾಗೆ ಬಳಕೆದಾರರು ಸ್ಥಳಾಂತರಗೊಂಡಿದ್ದಾರೆ. 2022 ರಲ್ಲಿ ಎಲಾನ್ ಮಸ್ಕ್ ಟ್ವಿಟ್ಟರ್ ಸಂಸ್ಥೆ ಖರೀದಿಸಿದ ಬಳಿಕ ಇದೇ ಮೊದಲ ಬಾರಿಗೆ ಇಷ್ಟೊಂದು ಮಂದಿ ಎಕ್ಸ್ ಖಾತೆಗಳನ್ನ ಡಿಲೀಟ್ ಮಾಡಿ, ಇತರೆ ಸೋಷಿಯಲ್ ಮೀಡಿಯಾಗಳ ಮೊರೆ ಹೋಗಿದ್ದಾರೆ. 'ಬ್ಲೂಸ್ಕೈ' ಬಳಕೆದಾರರು ಹೆಚ್ಚಾಗಿದ್ದು 90 ದಿನಗಳಲ್ಲಿ ಬಳಕೆದಾರರ ಪ್ರಮಾಣ ದ್ವಿಗುಣವಾಗಿದೆ. ದಿ ಗಾರ್ಡಿಯನ್ ನ್ಯೂಡ್ ಪೇಪರ್ ಕೂಡ ಎಕ್ಸ್ ನಿಂದ ಹೊರಬಂದಿದ್ದು, ಅಕೌಂಟ್ ಗಳನ್ನ ಡಿಲೀಟ್ ಮಾಡಲಾಗಿದೆ. 80 ಅಕೌಂಟ್ ಗಳನ್ನ ಹೊಂದಿರುವ ಗಾರ್ಡಿಯನ್ ಸಂಸ್ಥೆ 27ಮಿಲಿಯನ್ ಫಾಲೋವರ್ಸ್ ಹೊಂದಿದೆ.




## ವಿವೇಕ್‌ಗೆ ಟ್ರಂಪ್ ಸರಕಾರದ ಕಾರ್ಯಕ್ಷಮತೆ ಇಲಾಖೆ ಹೊಣೆ

**ವಾಷಿಂಗ್ಟನ್: ಭಾರತೀಯ ಮೂಲದ ಅಮೆರಿಕನ್, ಉದ್ಯಮಿ ವಿವೇಕ್ ರಾಮಸ್ವಾಮಿ ಅವರಿಗೆ ಟ್ರಂಪ್ 2.0 ಸರಕಾರದಲ್ಲಿ ಮಹತ್ವದ ಹುದ್ದೆ ದೊರಕಿದೆ. ಟೆಸ್ಲಾ ಮಾಲಕ ಎಲಾನ್ ಮಸ್ಕ್ ಅವರ ಜತೆ ಸೇರಿ ಇವರು ಅಮೆರಿಕ ಸರಕಾರದ ಕಾರ್ಯಕ್ಷಮತೆ ಮೇಲುಸ್ತುವಾರಿ ಇಲಾಖೆ ಯನ್ನು ಮುನ್ನಡೆಸಲಿದ್ದಾರೆ. ''ಸೇವ್ ಅಮೆರಿಕ ಚಳವಳಿಗೆ ಅಗತ್ಯವಾಗಿರುವ ಅಧಿಕಾರಶಾಹಿ ಪ್ರವೃತ್ತಿಯನ್ನು ತೆಗೆದುಹಾಕಲು ಈ ಇಬ್ಬರು ಅದ್ಭುತ ಅಮೆರಿಕನ್ನರು ನೆರವಾಗಲಿದ್ದಾರೆ' ಎಂದು ಟ್ರಂಪ್ ಹೇಳಿದ್ದಾರೆ. ರಕ್ಷಣ ಸಚಿವರಾಗಿ ಹೆಗ್ಸೆತ್: ಖ್ಯಾತ ನಿರೂಪಕ ಮತ್ತು ಸೈನಿಕ ಪೀಟರ್ ಹೆಗ್ಸೆತ್ ಅವರನ್ನು ಅಮೆರಿಕ ರಕ್ಷಣ ಸಚಿವರನ್ನಾಗಿ ನೇಮಕ ಮಾಡಲಾಗಿದೆ. ಜತೆಗೆ ಜಾನ್ ರ್ಯಾಟ್ಕ್ಲಿಫ್ ಅವರನ್ನು ಸಿಐಎ ಮುಖ್ಯಸ್ಥರಾಗಿ ನೇಮಿಸಲಾಗಿದೆ.**

### ವಿವೇಕ್ ಅತೃಪ್ತಿ

**ಟ್ರಂಪ್ ಘೋಷಣೆ ಬೆನ್ನಲ್ಲೇ ಟ್ವೀಟ್ ಮಾಡಿರುವ ವಿವೇಕ್, ''ಇದು ಸಾಗಲು ಸಾಧ್ಯವಿಲ್ಲ' ಎಂದಿದ್ದಾರೆ. ಈ ಮೂಲಕ ಅವರು ಮಸ್ಕ್ ಜತೆ ಕೆಲಸ ಮಾಡಲು ಅಸಮ್ಮತಿ ಸೂಚಿಸಿದ್ದಾರೆ ಎಂಬ ಅನುಮಾನ ವ್ಯಕ್ತವಾಗಿವೆ. ಅಲ್ಲದೇ ಒಂದೇ ಹುದ್ದೆ ನಿರ್ವಹಿಸಲು ಇಬ್ಬರನ್ನು ನೇಮಕ ಮಾಡಿರುವುದನ್ನು ಡೆಮಾಕ್ರಾಟ್ ಪಕ್ಷ ಖಂಡಿಸಿದೆ.**

# ತೆಲಂಗಾಣದಲ್ಲಿ ಹಳಿ ತಪ್ಪಿದ ಗೂಡ್ಸ್ ರೈಲು : 37 ರೈಲುಗಳ ಸಂಚಾರದಲ್ಲಿ ವ್ಯತ್ಯಯ !

ತೆಲಂಗಾಣದ ಪೆದ್ದಪಲ್ಲಿ ಬಳಿ ಗೂಡ್ಸ್ ರೈಲು ಹಳಿ ತಪ್ಪಿದ್ದು, ಪರಿಣಾಮ 30 ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಿದೆ. ದೆಹಲಿ ಮತ್ತು ಚೆನ್ನೈ ನಡುವಿನ ರೈಲು ಮಾರ್ಗದಲ್ಲಿ ಅಡೆತಡೆಗಳು ಉಂಟಾಗಿವೆ. ಗಾಜಿಯಾಬಾದ್ನಿಂದ ಕಾಜಿಪೇಟ್ಗೆ ಕಬ್ಬಿಣದ ಅದಿರನ್ನು ಸಾಗಿಸುತ್ತಿದ್ದ ಸರಕು ರೈಲು ಪೆದ್ದಪಲ್ಲಿ ಜಿಲ್ಲೆಯ ರಾಘವಪುರ ಮತ್ತು ಕನ್ನಾಲ್ ನಡುವೆ ಹಳಿ ತಪ್ಪಿದಾಗ ರಾತ್ರಿ 10 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ. ಗುಡ್ಸ್ ರೈಲು ಹಳಿ ತಪ್ಪಿರುವ ಪರಿಣಾಮ ಈ ಮಾರ್ಗದಲ್ಲಿ ಸಾಗುವ ಸೂಪರ್ ಫಾಸ್ಟ್ ಎಕ್ಸ್ ಪ್ರೆಸ್ ರೈಲುಗಳು, ಪ್ಯಾಸೆಂಜರ್ ರೈಲುಗಳು ಹಾಗೂ ಇತರ ಸರಕು ಸಗಾಣೆ ರೈಲುಗಳು ಮಾರ್ಗಮಧ್ಯೆ ನಿಲ್ಲುವಂತಾಗಿದೆ. 37 ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಿದೆ.



# ಸೈನಿಕರು, ಮಾಜಿ ಸೈನಿಕರಿಗೆ 24X7 ಸಹಾಯವಾಣಿ ಆರಂಭ



ಭಾರತೀಯ ಸೇನೆಯು ಮಹತ್ವದ ನಿರ್ಧಾರ ಕೈಗೊಂಡಿದೆ. ಸಂಕಷ್ಟದ ಸಮಯದಲ್ಲಿ ಸೈನಿಕರು ಮತ್ತು ಮಾಜಿ ಸೈನಿಕರಿಗೆ ಸಹಾಯ ಮಾಡಲು ಇದು 24/7 ಸಹಾಯವಾಣಿ ಸೇವೆಯನ್ನು ಪ್ರಾರಂಭಿಸಿದೆ.

ಯಾವುದೇ ಸೈನಿಕ ಅಥವಾ ಮಾಜಿ ಸೈನಿಕರು ಈಗ ದಾಳಿಯ ಸಂದರ್ಭದಲ್ಲಿ ಅಥವಾ ಯಾವುದೇ ತುರ್ತು ಸಹಾಯದ ಅಗತ್ಯವಿದ್ದರೆ 155306 ಸಂಖ್ಯೆಗೆ ಫೋನ್ ಕರೆ ಮಾಡಬಹುದು.

ಇತ್ತೀಚೆಗೆ ಒಡಿಶಾದಲ್ಲಿ ಸೇನಾಧಿಕಾರಿಯೊಬ್ಬರ ಪ್ರೇಯಸಿಗೆ ಪೊಲೀಸರು ಕಿರುಕುಳ ನೀಡಿದ್ದರು. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಭಾರತೀಯ ಸೇನೆಯು ಸೈನಿಕರು ಮತ್ತು ಅವರ ಕುಟುಂಬಗಳನ್ನು ಬೆಂಬಲಿಸಲು ಈ ಸಹಾಯವಾಣಿಯನ್ನು ಪ್ರಾರಂಭಿಸಿದೆ.

ತರಬೇತಿ ಪಡೆದ ಮಿಲಿಟರಿ ಪೊಲೀಸ್ ಸಿಬ್ಬಂದಿಯಿಂದ 155306 ಸೇನಾ ಸಹಾಯವಾಣಿ ಸಂಖ್ಯೆಗೆ ಕರೆಗಳನ್ನು ಸ್ವೀಕರಿಸುತ್ತಾರೆ. ಕರೆ ವಿವರಗಳನ್ನು ರಿಜಿಸ್ಟರ್ ನಲ್ಲಿ ವಿವರವಾಗಿ ದಾಖಲಿಸಲಾಗುತ್ತದೆ. ತಂಡವು ಪುರುಷರು ಮತ್ತು ಮಹಿಳೆಯರನ್ನು ಒಳಗೊಂಡಿದೆ. ಸಹಾಯವಾಣಿಗೆ ಬರುವ ಎಲ್ಲಾ ಕರೆಗಳನ್ನು ದಾಖಲಿಸಲಾಗುತ್ತದೆ. ಇದು ಈ ವಿಷಯಗಳ ಬಗ್ಗೆ ಸಹಾಯವಾಣಿ ತಂಡದ ಕಡೆಯಿಂದ ಅನುಸರಣಾ ಪ್ರಕ್ರಿಯೆಯನ್ನು ಸುಲಭಗೊಳಿಸುತ್ತದೆ. ದೇಶದ ಯಾವುದೇ ಭಾಗದಿಂದ ಸೈನಿಕರು ಮತ್ತು ಮಾಜಿ ಸೈನಿಕರು ಈ ಸಂಖ್ಯೆಗೆ ಕರೆ ಮಾಡಿ ಸಹಾಯ ಪಡೆಯಬಹುದು. ಅವರು ತ್ವರಿತ ಪ್ರತಿಕ್ರಿಯೆಯನ್ನು ಪಡೆಯುತ್ತಾರೆ ಎಂದು ಸೇನಾ ಮೂಲಗಳು ತಿಳಿಸಿವೆ. ಈ ಸಹಾಯವಾಣಿ ಸಂಖ್ಯೆಯನ್ನು ದೇಶದ ಯಾವುದೇ ರಾಜ್ಯದಿಂದ ಕರೆ ಮಾಡಬಹುದು. ಸಂಖ್ಯೆಯ ಮೊದಲು ಯಾವುದೇ ಕೋಡ್ ಸೇರಿಸುವ ಅಗತ್ಯವಿಲ್ಲ.

ಈ ಸಹಾಯವಾಣಿಯು ಎಲ್ಲಾ ಪ್ರಮುಖ ಟೆಲಿಕಾಂ ಪೂರೈಕೆದಾರರ ನೆಟ್ವರ್ಕ್‌ಗಳನ್ನು ಒಳಗೊಂಡಿದೆ. ಈ ಸಂಖ್ಯೆಗೆ ಕರೆ ಮಾಡುವವರು ಮೊದಲು ಸೇನೆಯೊಂದಿಗಿನ ತಮ್ಮ ಸಂಬಂಧ ಮತ್ತು ಸೇವಾ ವಿವರಗಳ ಸಂಕ್ಷಿಪ್ತ ಸಾರಾಂಶವನ್ನು ಒದಗಿಸಬೇಕು.

# ಸಿರಿಯಾದಲ್ಲಿ ರಷ್ಯಾದ ಸೇನಾ ನೆಲೆ ಬಳಿ ದಾಳಿ ನಡೆಸದಂತೆ ಇಸ್ರೇಲ್‌ಗೆ ಆಗ್ರಹ

**ಮಾಸ್ಕೋ:** ಲೆಬನಾನ್ ನ ಹಿಜ್ಬುಲ್ಲಾ ವಿರುದ್ಧದ ದಾಳಿಯ ಭಾಗವಾಗಿ ಸಿರಿಯಾದಲ್ಲಿ ವೈಮಾನಿಕ ದಾಳಿ ನಡೆಸುವಾಗ ಸಿರಿಯಾದಲ್ಲಿರುವ ತನ್ನ ಸೇನಾ ನೆಲೆಯ ಬಳಿ ದಾಳಿಯನ್ನು ತಪ್ಪಿಸುವಂತೆ ಇಸ್ರೇಲನ್ನು ಆಗ್ರಹಿಸಿರುವುದಾಗಿ ರಶ್ಯದ ಅಧಿಕಾರಿಯೊಬ್ಬರು ಬುಧವಾರ ಹೇಳಿದ್ದಾರೆ.

ರಶ್ಯದ ಬೆಂಬಲ ಪಡೆದಿರುವ ಸಿರಿಯಾ ಅಧ್ಯಕ್ಷ ಬಷಾರ್ ಅಸಾದ್ ರ ಭದ್ರಕೋಟೆ ಲಟಾಕಿಯಾದ ಮೇಲೆ ಕಳೆದ ತಿಂಗಳು ಇಸ್ರೇಲ್ ವೈಮಾನಿಕ ದಾಳಿ ನಡೆಸಿದೆ. 2011ರಲ್ಲಿ ಸಿರಿಯಾದಲ್ಲಿ ಅಂತರ್ಯುದ್ಧ ಪ್ರಾರಂಭವಾದಾಗಿನಿಂದ ಬಷಾರ್ ಅಸಾದ್ ಪರ ಇರಾನ್ ಬೆಂಬಲಿತ ಹಿಜ್ಬುಲ್ಲಾದ ಪಡೆಯೂ ಹೋರಾಟ ನಡೆಸುತ್ತಿದೆ. ಇರಾನ್ ತನ್ನ ಅಸ್ತಿತ್ವವನ್ನು ಸಿರಿಯಾಕ್ಕೆ ವಿಸ್ತರಿಸಲು ಅವಕಾಶ ನೀಡುವುದಿಲ್ಲ ಎಂದು ಇಸ್ರೇಲ್ ಹೇಳಿದೆ.

ಲಟಾಕಿಯಾ ನಗರದ ಸಮೀಪದ ಹೈಮಿಮ್ ಪಟ್ಟಣದ ಬಳಿ ರಶ್ಯದ ವಾಯು ನೆಲೆಯಿದೆ. 'ಇಸ್ರೇಲ್ ವಾಸ್ತವವಾಗಿ ಹೈಮಿಮ್ ಸಮೀಪದಲ್ಲಿ ವಾಯುದಾಳಿ ನಡೆಸಿದೆ. ರಶ್ಯದ ಮಿಲಿಟರಿ ಸಿಬ್ಬಂದಿಗಳ ಜೀವವನ್ನು ಅಪಾಯಕ್ಕೆ ಒಡ್ಡುವ ಇಂತಹ ಕೃತ್ಯಗಳು ಸ್ವೀಕಾರಾರ್ಹವಲ್ಲ ಎಂದು ಇಸ್ರೇಲ್ ಅಧಿಕಾರಿಗಳಿಗೆ ನಮ್ಮ ಸೇನೆಯು ಸೂಚಿಸಿದೆ. ಅಕ್ಟೋಬರ್ ನ ಈ ಘಟನೆ ಮರುಕಳಿಸದು ಎಂದು ನಾವು ನಂಬಿದ್ದೇವೆ. ರಶ್ಯದ ವಾಯುನೆಲೆಯನ್ನು ಹಿಜ್ಬುಲ್ಲಾಗಳಿಗೆ ಶಸ್ತ್ರಾಸ್ತ್ರ ಸಾಗಿಸಲು ಬಳಸಲಾಗುತ್ತಿಲ್ಲ' ಎಂದು ರಶ್ಯ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರ ವಿಶೇಷ ಪ್ರತಿನಿಧಿ ಅಲೆಕ್ಸಾಂಡರ್ ಲಾವ್ರೆಂಟಿವ್ರನ್ನು ಉಲ್ಲೇಖಿಸಿ 'ಆರ್ ಐಎ ನವೋಸ್ತಿ' ಸುದ್ದಿಸಂಸ್ಥೆ ವರದಿ ಮಾಡಿದೆ.

ಇಸ್ರೇಲ್ ಸಿರಿಯಾದ ಮೇಲೆ ತೀವ್ರ ಬಾಂಬ್ ದಾಳಿ ನಡೆಸುತ್ತಿದೆ. ಆದರೆ ಸಿರಿಯಾ ರಾಜಧಾನಿ ದಮಾಸ್ಕಸ್ ನ ವಾಯವ್ಯದಲ್ಲಿರುವ ಲಟಾಕಿಯಾ ನಗರದ ಮೇಲೆ ತೀರಾ ವಿರಳವಾಗಿ ದಾಳಿ ನಡೆಸಿದೆ. ಸಿರಿಯಾದ ಮೂಲಕ ಹಿಜ್ಬುಲ್ಲಾ ಶಸ್ತ್ರಾಸ್ತ್ರಗಳನ್ನು ಸಾಗಿಸುತ್ತಿದೆ ಎಂದು ಇಸ್ರೇಲ್ ಆರೋಪಿಸುತ್ತಿದೆ.



## ಅಮೆರಿಕದ ಸಮರನೌಕೆಯತ್ತ ಕ್ಷಿಪಣಿ ದಾಳಿ

ವಾಷಿಂಗ್ಟನ್: ಕೆಂಪು ಸಮುದ್ರದ ಬಳಿ ಬಾಬ್ ಎಲ್-ಮಂದೇಬ್ ಜಲಸಂಧಿಯ ಮೂಲಕ ಸಾಗುತ್ತಿದ್ದ ಅಮೆರಿಕದ ಎರಡು ಸಮರನೌಕೆಗಳನ್ನು ಗುರಿಯಾಗಿಸಿ ಯೆಮನ್ ನ ಹೌದಿಗಳು ಡ್ರೋನ್ ಹಾಗೂ ಕ್ಷಿಪಣಿಗಳಿಂದ ದಾಳಿ ನಡೆಸಿದ್ದಾರೆ. ಆದರೆ ದಾಳಿ ಯಶಸ್ವಿಯಾಗಿಲ್ಲ ಎಂದು ಅಮೆರಿಕದ ರಕ್ಷಣಾ ಇಲಾಖೆ ಹೇಳಿದೆ. ಕೆಂಪು ಸಮುದ್ರದ ಬಳಿ ಬಾಬ್ ಎಲ್- ಮಂದೇಬ್ ಜಲಸಂಧಿಯ ಮೂಲಕ ಸಾಗುತ್ತಿದ್ದ ಅಮೆರಿಕದ ಸಮರ ನೌಕೆಗಳಾದ ಯುಎಸ್‌ಎಸ್ ಸ್ಟಾಕ್ಡೇಲ್ ಮತ್ತು ಯುಎಸ್‌ಎಸ್ ಸ್ಪ್ರೂನ್ಸ್ ಗಳನ್ನು ಗುರಿಯಾಗಿಸಿ ಇರಾನ್ ಬೆಂಬಲಿತ ಹೌದಿಗಳು ಕನಿಷ್ಠ 8 ಡ್ರೋನ್‌ಗಳು, ಐದು ಹಡಗು ಧ್ವಂಸಕ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಹಾಗೂ ಮೂರು ಹಡಗು ಧ್ವಂಸಕ ಕ್ರೂಸ್ ಕ್ಷಿಪಣಿಗಳನ್ನು ಉಡಾಯಿಸಿವೆ. ಆದರೆ ಇವು ಗುರಿ ತಲುಪಿಲ್ಲ. ಯಾವುದೇ ನಾಶ-ನಷ್ಟ ಅಥವಾ ಸಾವು-ನೋವು ಸಂಭವಿಸಿಲ್ಲ ಎಂದು ಅಮೆರಿಕ ರಕ್ಷಣಾ ಇಲಾಖೆಯ ಪತ್ರಿಕಾ ಕಾರ್ಯದರ್ಶಿ ಮೇ। ಜ। ಪ್ಯಾಟ್ ರೈಡರ್ ಹೇಳಿದ್ದಾರೆ. ಕೆಂಪು ಸಮುದ್ರ ಮತ್ತು ಏಡನ್ ಕೊಲ್ಲಿಯ ನಡುವಿನ ಕಿರಿದಾದ ಸಮುದ್ರ ಮಾರ್ಗವಾಗಿರುವ ಮುಂದೇಬ್ ಜಲಸಂಧಿಯ ಮೂಲಕ ಪ್ರತೀ ವರ್ಷ ಸರಾಸರಿ 1 ಲಕ್ಷ ಕೋಟಿ ಡಾಲರ್ ಮೌಲ್ಯದ ಸರಕುಗಳು ಸಾಗಾಟವಾಗುತ್ತಿದೆ. ಕೆಂಪು ಸಮುದ್ರದ ಬಳಿ ಅಮೆರಿಕದ ಸಮರ ನೌಕೆಗಳ ಮೇಲೆ ದಾಳಿ ನಡೆಸಿರುವುದನ್ನು ಹೌದಿಗಳು ದೃಢಪಡಿಸಿದ್ದು ಗಾಝಾ ಮತ್ತು ಲೆಬನಾನ್ ನಲ್ಲಿ ಇಸ್ರೇಲ್ ನ ದಾಳಿ ನಿಲ್ಲುವವರೆಗೆ ಕೆಂಪು ಸಮುದ್ರದಲ್ಲಿ ಹಡಗುಗಳ ಮೇಲೆ ದಾಳಿ ಮುಂದುವರಿಯಲಿದೆ ಎಂದಿದೆ.

# ವಯನಾಡು ಲೋಕಸಭೆ ಉಪಚುನಾವಣೆ : ಮತ ಚಲಾಯಿಸಿದ ಭೂ ಕುಸಿತ ಸಂತ್ರಸ್ತರು.!

ಈ ವರ್ಷದ ಜುಲೈನಲ್ಲಿ ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಬದುಕುಳಿದವರಿಗಾಗಿ ಸ್ಥಾಪಿಸಲಾದ ಮತದಾನ ಕೇಂದ್ರಗಳಲ್ಲಿ ಭಾವನಾತ್ಮಕ ದೃಶ್ಯಗಳು ಕಂಡುಬಂದವು. ವಯನಾಡಿನಲ್ಲಿ ಭೂ ಕುಸಿತ ಸಂತ್ರಸ್ತರು ಬಂದು ಮತ ಚಲಾಯಿಸಿದರು. ಬದುಕುಳಿದವರು ಸಂತೋಷದಿಂದ ಒಬ್ಬರನ್ನೊಬ್ಬರು ತಬ್ಬಿಕೊಂಡರು ಮತ್ತು ಈ ಹಿಂದೆ ಕುಟುಂಬವು ಸಂತೋಷವಾಗಿ ಹೇಗೆ ಒಟ್ಟಿಗೆ ವಾಸಿಸುತ್ತಿದ್ದರು ಎಂಬುದನ್ನು ನೆನಪಿಸಿಕೊಂಡು ಕಣ್ಣೀರು ಹಾಕಿದರು? ಕೇರಳದ ವಯನಾಡ್ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಮಧ್ಯಾಹ್ನ 1 ಗಂಟೆಯವರೆಗೆ ಶೇಕಡಾ 40.67 ರಷ್ಟು ಮತದಾನ ದಾಖಲಾಗಿದೆ.



# ಸಿಎಂ ಯೋಗಿಗೆ ಪ್ರಿಯಾಂಕ್ ಖರ್ಗೆ ತಿರುಗೇಟು!

ಮುಸ್ಲಿಮರ ಮತಕ್ಕಾಗಿ ತಮ್ಮ ಕುಟುಂಬದ ತ್ಯಾಗವನ್ನೇ ಮಲ್ಲಿಕಾರ್ಜುನ ಖರ್ಗೆ ಮರೆತಿದ್ದಾರೆ ಎಂದು ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ಆರೋಪಕ್ಕೆ ಸ್ವತಃ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿ, ಯೋಗಿ ಆರೋಪಕ್ಕೆ ಕೌಂಟರ್ ಕೊಟ್ಟಿದ್ದಾರೆ.

ಯೋಗಿ ಆದಿತ್ಯನಾಥ್ ಅವರಿಗೆ ಖರ್ಗೆ ಸಾಹೇಬರ ಇತಿಹಾಸ ಗೊತ್ತಿಲ್ಲ. ಸುಟ್ಟಿದ್ದು ರಜಾಕಾರರು. ಮುಸ್ಲಿಮ್ ಸಮುದಾಯ ಅಲ್ಲ. ಬೇರೆ ಬೇರೆ ಸಮುದಾಯದ ಕೆಲವರಿಂದ ಮೋಸ ಆಗುತ್ತೆ ಅಂತ ಇಡೀ ಸಮುದಾಯವನ್ನು ದೂರಲು ಆಗುತ್ತಾ? ಮುಸ್ಲಿಮರಿಗೆಲ್ಲ ಆರೋಪ ಮಾಡಲು ಆಗುತ್ತಾ? ಇದೆಲ್ಲ ಈಗ ಅಪ್ರಸ್ತುತ ಚರ್ಚೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಯೋಗಿ ಆದಿತ್ಯನಾಥ್ ಇಷ್ಟೆಲ್ಲ ಮಾತಾಡ್ತಾರಲ್ಲ ಮೊದಲು ಬಿಜೆಪಿ, ಆರ್‌ಎಸ್‌ಎಸ್ ಸಿದ್ಧಾಂತಗಳಲ್ಲಿ ಸಮಾನತೆ ತರಲಿ. ಬಿಜೆಪಿಯವರು ಅಪಾಯದಲ್ಲಿದ್ರೆ ಮಾತ್ರ ಆಗ ಹಿಂದೂಗಳು ಅಪಾಯದಲ್ಲಿದ್ದಾರೆ ಅಂತ ಬಿಂಬಿಸುತ್ತಾರೆ . ನಿಜಕ್ಕೂ ಅಪಾಯದಲ್ಲಿ ಇರೋರು ಬಿಜೆಪಿಯವರು, ಹಿಂದೂಗಳಲ್ಲ. ತಾವು ಅಪಾಯದಲ್ಲಿ ಇದ್ದಾಗ ಹಿಂದೂಗಳ ಹೆಸರು ಬಳಸಿಕೊಳ್ತಾರೆ ಎಂದು ಪ್ರಿಯಾಂಕ್ ಖರ್ಗೆ ಕೆಂಡ ಕಾರಿದ್ದಾರೆ.

ಮಹಾರಾಷ್ಟ್ರದ ಅಚಲ್ಪುರದಲ್ಲಿ ಸಾರ್ವಜನಿಕರ ಸಭೆಯನ್ನುದ್ದೇಶಿಸಿ ಮಾತನಾಡಿದ್ದ ಯೋಗಿ ಆದಿತ್ಯನಾಥ್, ಮಲ್ಲಿಕಾರ್ಜುನ ಖರ್ಗೆ ಅವರ ಬಾಟೇಂಗೇ ತೋ ಕಾಟೇಂಗೇ ಎಂಬ ಘೋಷಣೆಯ ಟೀಕೆಗೆ ಪ್ರತಿಕ್ರಿಯಿಸಿದ್ದರು. ನಾನು ಯೋಗಿ, ನನಗೆ ರಾಷ್ಟ್ರವೇ ಮೊದಲು. ಆದರೆ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ತುಷ್ಟೀಕರಣದ ರಾಜಕೀಯವೇ ಮೊದಲು ಎಂದು ಟೀಕಿಸಿದ್ದರು.



# ಮೊದಲ ಹಂತದಲ್ಲಿ ಶೇ. 64.86 ರಷ್ಟು ಮತದಾನ

**ರಾಂಚಿ:** ಜಾರ್ಖಂಡ್ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನ ಬುಧವಾರ ಮುಕ್ತಾಯಗೊಂಡಿದ್ದು, ಸಂಜೆ 5 ಗಂಟೆಯವರೆಗೆ ಶೇ. 64.86 ರಷ್ಟು ಮತದಾನವಾಗಿದೆ. ಇಂದು 43 ಕ್ಷೇತ್ರಗಳಲ್ಲಿ ಮತದಾನ ನಡೆದಿದ್ದು, ಲೋಹರ್ದಗಾದಲ್ಲಿ ಅತಿ ಹೆಚ್ಚು ಅಂದರೆ ಶೇ. 73.21ರಷ್ಟು ಮತದಾನವಾಗಿದ್ದರೆ, ಹಜಾರಿಬಾಗ್‌ನಲ್ಲಿ ಅತಿ ಕಡಿಮೆ ಅಂದರೆ ಶೇ. 59.13 ರಷ್ಟು ಮತದಾನವಾಗಿದೆ. ಪ್ರಮುಖ ರಾಜಕೀಯ ನಾಯಕರಾದ ಮಾಜಿ ಮುಖ್ಯಮಂತ್ರಿ ಚಂಪೈ ಸೊರೆನ್, ಮಾಜಿ ಸಂಸದೆ ಗೀತಾ ಕೋರಾ ಸೇರಿದಂತೆ ಒಟ್ಟು 683 ಅಭ್ಯರ್ಥಿಗಳು ಭವಿಷ್ಯ ಇವಿಎಂನಲ್ಲಿ ಭದ್ರವಾಗಿದೆ. ಬಿಜೆಪಿ ಮತ್ತು ಇಂಡಿಯಾ ಬ್ಲಾಕ್ ಎರಡೂ ಹೈ-ಪ್ರೊಫೈಲ್ ಅಬ್ಬರದ ಪ್ರಚಾರ ನಡೆಸಿದವು. ಬಿಜೆಪಿ ತನ್ನ 'ರೋಟಿ, ಬೇಟಿ, ಮಾಟಿ' ಅಜೆಂಡಾವನ್ನು ಒತ್ತಿಹೇಳಿತ್ತು ಮತ್ತು ಇಂಡಿಯಾ ಬ್ಲಾಕ್ ಕಲ್ಯಾಣ ಸಾಧನೆಗಳನ್ನು ಎತ್ತಿ ತೋರಿಸುತ್ತ ಕೇಂದ್ರೀಯ ತನಿಖಾ ಸಂಸ್ಥೆಗಳನ್ನು ಬಿಜೆಪಿ ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಟೀಕಿಸಿತ್ತು.

# ಐ ಆಮ್ ಫೈನ್.. ಎಂದ ಸುನೀತಾ ವಿಲಿಯಮ್ಸ್



**ನವದೆಹಲಿ :** ನಾನು ಬಾಹ್ಯಾಕಾಶ ನಿಲ್ದಾಣಕ್ಕೆ ಬರುವಾಗ ಇದ್ದ ತೂಕವನ್ನೇ ಈಗಲೂ ಹೊಂದಿದ್ದೇನೆ ಎಂದು ನಾಸಾ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಸ್ಪಷ್ಟಪಡಿಸಿದ್ದಾರೆ.

ಇತ್ತೀಚೆಗಷ್ಟೇ ಸುನಿತಾ ವಿಲಿಯಮ್ಸ್ ಅವರ ಫೋಟೋವೊಂದು ವೈರಲ್ ಆಗಿತ್ತು. ಈ ವೇಳೆ ಅವರ ಆರೋಗ್ಯ ಕ್ಷೀಣಿಸಿದೆ.

ಅವರ ತೂಕ ಕಡಿಮೆ ಆಗಿದೆ ಎಂದು ವರದಿಯಾಗಿದ್ದವು. ಈ ಊಹಾಪೋಹಗಳ ಬೆನ್ನಲ್ಲೇ ಇದೀಗ ಸುನೀತಾ ವಿಲಿಯಮ್ಸ್ ಅವರೇ ವಿಡಿಯೋ ಮೂಲಕ ಸ್ಪಷ್ಟನೆ ನೀಡಿದ್ದಾರೆ.

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಉತ್ತಮ ಸ್ಥಿತಿಯಲ್ಲಿದ್ದೇನೆ. ನಾನು ಬಾಹ್ಯಾಕಾಶ ನಿಲ್ದಾಣಕ್ಕೆ ಬರುವಾಗ ಇದ್ದ ತೂಕವನ್ನೇ ಈಗಲೂ ಹೊಂದಿದ್ದೇನೆ. ಸ್ನಾಯು ಮತ್ತು ಮೂಳೆ ಸಾಂದ್ರತೆಯ ಮೇಲೆ ಮೈಕ್ರೊಗ್ರಾವಿಟಿಯ ಪರಿಣಾಮಗಳನ್ನು ಎದುರಿಸಲು ಅನುಸರಿಸುವ ಕಠಿಣ ವ್ಯಾಯಾಮದ ಕಟ್ಟುಪಾಡುಗಳಿಂದಾಗಿ ತಮ್ಮ ದೈಹಿಕ ರೂಪ ಬದಲಾಗಿದೆ. ಈ ಬಗ್ಗೆ ಚಿಂತೆ ಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

ಅಷ್ಟೇ ಅಲ್ಲದೇ ತಮ್ಮ ದಿನನಿತ್ಯದ ವ್ಯಾಯಾಮದ ದಿನಚರಿಯನ್ನು ಕೂಡ ಅವರು ವಿವರಿಸಿದರು. ಬಾಹ್ಯಾಕಾಶ ನಿಲ್ದಾಣದಲ್ಲಿ ಬೈಕ್ ಸವಾರಿ, ಟ್ರೆಡ್ಮಿಲ್ನಲ್ಲಿ ಓಡುವುದು ಹಾಗೂ ವೇಟ್ಲಿಫ್ಟಿಂಗ್‌ಅನ್ನು ಮಾಡುತ್ತೇನೆ. ಈ ಚಟುವಟಿಕೆಗಳ ಕಾರಣದಿಂದಾಗಿ ನನ್ನ ದೇಹದಲ್ಲಿ ಗಮನಾರ್ಹ ಬದಲಾವಣೆಗೆ ಕಾರಣವಾಗಿದೆ. ನನ್ನ ತೊಡೆಗಳು ಸ್ವಲ್ಪ ದೊಡ್ಡದಾಗಿದೆ, ನನ್ನ ಪೃಷ್ಠವು ಸ್ವಲ್ಪ ದೊಡ್ಡದಾಗಿದೆ. ನಿರಂತರವಾಗಿ ವೇಟ್ಲಿಫ್ಟಿಂಗ್ ಮಾಡುತ್ತಿದ್ದ ಕಾರಣಕ್ಕೆ ಈ ಬದಲಾವಣೆ ಆಗಿದೆ ಎಂದು ತಿಳಿಸಿದ್ದಾರೆ.

# ಭಾರತಕ್ಕೆ ಹಂಗಾಮಿ ರಾಯಭಾರಿಯಾಗಿ ಕಾಮಿಲ್ ಅವರನ್ನು ನೇಮಿಸಿದ ಅಫ್ಘಾನಿಸ್ತಾನದ ತಾಲಿಬಾನ್ ಸರ್ಕಾರ

**ನವದೆಹಲಿ:** ಭಾರತಕ್ಕೆ ಹಂಗಾಮಿ ರಾಯಭಾರಿಯಾಗಿ ಇಕ್ರಮುದ್ದೀನ್ ಕಾಮಿಲ್ ಅವರನ್ನು ತಾಲಿಬಾನ್ ಸರ್ಕಾರ ನೇಮಿಸಿದೆ. ಅಫ್ಘಾನಿಸ್ತಾನದ ವಿದೇಶಾಂಗ ಸಚಿವಾಲಯವು ಕಾಮಿಲ್ ಅವರ ನೇಮಕವನ್ನು ಪ್ರಕಟಿಸಿದೆ.

ಈ ನೇಮಕಾತಿಯನ್ನು ಭಾರತದೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಬಲಪಡಿಸಲು ಮತ್ತು ವಿದೇಶದಲ್ಲಿ ತನ್ನ ಅಸ್ತಿತ್ವವನ್ನು ಹೆಚ್ಚಿಸಲು ಕಾಬೂಲ್ ನ ಪ್ರಯತ್ನವೆಂದು ಪರಿಗಣಿಸಲಾಗಿದೆ.

ಕಾಮಿಲ್ ಅವರು ಅಂತರರಾಷ್ಟ್ರೀಯ ಕಾನೂನಿನಲ್ಲಿ ಪಿಎಚ್ಡಿ ಪಡೆದಿದ್ದು ಈ ಹಿಂದೆ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಭದ್ರತಾ ಸಹಕಾರ ಮತ್ತು ಗಡಿ ವ್ಯವಹಾರಗಳ ಇಲಾಖೆಯಲ್ಲಿ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ. ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಫ್ಘಾನಿಸ್ತಾನ ವ್ಯವಹಾರಗಳ ಮುಖ್ಯಸ್ಥರು ಇತ್ತೀಚೆಗೆ ತಾಲಿಬಾನ್ನ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಮೊಹಮ್ಮದ್ ಯಾಕೋಬ್ ಅವರೊಂದಿಗೆ ಕಾಬೂಲ್ನಲ್ಲಿ ಮಾತುಕತೆ ನಡೆಸಿದ ಸಮಯದಲ್ಲಿ ಕಾಮಿಲ್ನ ಈ ನೇಮಕ ನಿರ್ಧಾರ ತೆಗೆದುಕೊಳ್ಳಲಾಗಿತ್ತು.

ಅಫ್ಘಾನ್ ಕಾರ್ಯಾಚರಣೆಗಳಲ್ಲಿ ತಾಲಿಬಾನ್ ಆಳ್ವಿಕೆಯು ಬಂದ ನಂತರ, ಭಾರತದಲ್ಲಿ ರಾಜತಾಂತ್ರಿಕ ಸಿಬ್ಬಂದಿಗಳ ಉಪಸ್ಥಿತಿಯು ಅತ್ಯಲ್ಪವಾಗಿದೆ. ಅಶ್ರಫ್ ಘನಿ ಸರ್ಕಾರದಿಂದ ನೇಮಕಗೊಂಡ ಹೆಚ್ಚಿನ ರಾಜತಾಂತ್ರಿಕರು ಭಾರತವನ್ನು ತೊರೆದಿದ್ದಾರೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಸುಮಾರು 18.6 ಕೋಟಿ ರೂಪಾಯಿ ಮೌಲ್ಯದ ಚಿನ್ನವನ್ನು ಕಳ್ಳಸಾಗಣೆ ಮಾಡಲು ಯತ್ನಿಸಿ ಸಿಕ್ಕಿಬಿದ್ದ ಆರೋಪದ ಮೇಲೆ ಅಫ್ಘಾನಿಸ್ತಾನದ ಹಿರಿಯ ರಾಜತಾಂತ್ರಿಕ ಜಾಕಿಯಾ ವಾರ್ಡಕ್ ಅವರು ಮೇ ತಿಂಗಳಲ್ಲಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು.

# ಮತ್ತೆ ಮೋದಿ ಕಾಲಿಗೆ ಬೀಳಲು ಮುಂದಾದ ಬಿಹಾರ ಸಿಎಂ

ಪಾಟ್ನಾ: ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಬುಧವಾರ ಮತ್ತೆ ಪ್ರಧಾನಿ ನರೇಂದ್ರ ಮೋದಿಯವರ ಕಾಲಿಗೆ ಬೀಳಲು ಯತ್ನಿಸಿದ ಘಟನೆ ದರ್ಭಾಂಗಾದಲ್ಲಿ ನಡೆದಿದೆ.

ದರ್ಭಾಂಗಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಿತೀಶ್ ಕುಮಾರ್ ಅವರು ಮೋದಿಯವರಿಗೆ ಕೈಮುಗಿಯುತ್ತಾ ಅವರ ಕಾಲನ್ನು ಮುಟ್ಟಿ ನಮಿಸಲು ಯತ್ನಿಸಿದ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ವಿಡಿಯೋದಲ್ಲಿ ನಿತೀಶ್ ಕುಮಾರ್ ಅವರು ತಮ್ಮ ಕಾಲನ್ನು ಮುಟ್ಟಲು ಪ್ರಯತ್ನಿಸುತ್ತಿರುವಾಗ ಪ್ರಧಾನಿ ಮೋದಿ ಅದನ್ನು ತಡೆದಿದ್ದು, ಅವರ ಕೈ ಕುಲುಕಿದ್ದಾರೆ. 73 ವರ್ಷದ ಜೆಡಿಯು ಮುಖ್ಯಸ್ಥರ ಈ ವರ್ತನೆಯ ಕುರಿತು ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬಿಹಾರ ಮಾಜಿ ಉಪ ಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರು, ತಮಗಿಂತ ಒಂದು ವರ್ಷ ದೊಡ್ಡವರಾದ ಮೋದಿಗೆ ಕಾಲಿಗೆ ಬೀಳುವುದು ಹೊಸ ವಿಚಾರ ಏನಲ್ಲ ಎಂದಿದ್ದಾರೆ. ಇದರಲ್ಲಿ ವಿಶೇಷವಾದದ್ದು ಏನು ಇದೆ? ಅವರು(ಸಿಎಂ) ಎಲ್ಲರ ಕಾಲಿಗೆ ಬೀಳುವುದು ತಡವಾಗಿದೆ. ಅವರು ತಮ್ಮ ಸರ್ಕಾರದ ಅಧಿಕಾರಿಗಳಿಗೂ ಹಾಗೆ ಮಾಡಿದ್ದಾರೆ ಎಂದು ಆರ್ ಜೆಡಿ ನಾಯಕ ವ್ಯಂಗ್ಯವಾಡಿದ್ದಾರೆ.

ಈ ವರ್ಷದ ಆರಂಭದಲ್ಲಿ ಕೆಲವು ಕಾರ್ಯಕ್ರಮಗಳಲ್ಲಿ ನಿತೀಶ್ ಕುಮಾರ್ ಅವರು ಐಎಎಸ್ ಅಧಿಕಾರಿಗಳು ಮತ್ತು ಖಾಸಗಿ ಕಂಪನಿಯ ಎಂಜಿನಿಯರ್‌ಗಳಿಗೆ ನಿಮ್ಮ ಕಾಲಿಗೆ ಬೀಳುತ್ತೇನೆ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಎಂದಿದ್ದರು. ಇನ್ನು ಈ ವರ್ಷದ ಜೂನ್‌ನಲ್ಲಿ ನಿತೀಶ್ ಕುಮಾರ್ ಅವರು ಸಂಸತ್ತಿನ ಸೆಂಟ್ರಲ್ ಹಾಲ್‌ನಲ್ಲಿ ಮೋದಿಯವರ ಕಾಲನ್ನು ಮುಟ್ಟಿ ನಮಸ್ಕರಿಸಲು ಪ್ರಯತ್ನಿಸಿದ್ದರು. ಅಷ್ಟೆ ಅಲ್ಲದೆ, ಏಪ್ರಿಲ್ ವೇಳೆ ನವಾಡದಲ್ಲಿ ನಡೆದ ಲೋಕಸಭಾ ಚುನಾವಣಾ ರ್‍ಯಾಲಿಯಲ್ಲಿ ಕೂಡಾ ಪ್ರಧಾನಿ ಮೋದಿಯವರ ಕಾಲನ್ನು ಮುಟ್ಟಿ ನಮಸ್ಕರಿಸಿದ್ದರು.

# 15 ದಿನಗಳಲ್ಲಿ 11ನೇ ಬಾರಿ ಭಯೋತ್ಪಾದಕರೊಂದಿಗೆ ಗುಂಡಿನ ಚಕಮಕಿ

**ಶ್ರೀನಗರ:** ಜಮ್ಮು-ಕಾಶ್ಮೀರದಲ್ಲಿ ಉಗ್ರರ ಉಪಟಳ ಮುಂದುವರಿದಿದೆ. ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವಿನ ಸರಣಿ ಚಕಮಕಿಯಲ್ಲಿ, ದಕ್ಷಿಣ ಕಾಶ್ಮೀರದ ಕುಲ್ಗಾಮ್ ಜಿಲ್ಲೆಯಲ್ಲಿ ಬುಧವಾರ ಮತ್ತೊಂದು ಎನ್‌ಕೌಂಟರ್ ನಡೆದಿದೆ. ಕಳೆದ ಹದಿನೈದು ದಿನಗಳಲ್ಲಿ ನಡೆದ 11 ನೇ ಎನ್‌ಕೌಂಟರ್ ಇದಾಗಿದೆ.

ಜಮ್ಮುಕಾಶ್ಮೀರದ 20 ಜಿಲ್ಲೆಗಳ ಪೈಕಿ ಎಂಟು ಜಿಲ್ಲೆಗಳಲ್ಲಿ ಎನ್‌ಕೌಂಟರ್‌ಗಳು ನಡೆದಿದ್ದು,10 ಭಯೋತ್ಪಾದಕರು ಮತ್ತು ಕಮಾಂಡೋ ಕೊಲ್ಲಲ್ಪಟ್ಟಿದ್ದಾರೆ. ಬುಧವಾರ ಕುಲ್ಗಾಮ್‌ನ ಬಡಿಮಾರ್ಗ್, ಯಾರಿಪೋರಾ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ವೇಳೆ ಎನ್‌ಕೌಂಟರ್ ಆರಂಭವಾಗಿದೆ. ಎರಡೂ ಕಡೆಯಲ್ಲಿ ಯಾವುದೇ ಪ್ರಾಣಹಾನಿಯಾಗಿಲ್ಲ. ಆರ್ಟಿಕಲ್ 370 ರದ್ದತಿಯ ನಂತರ ಜಮ್ಮು ಕಾಶ್ಮೀರದಲ್ಲಿ ಮೊದಲ ಅಸೆಂಬ್ಲಿ ಚುನಾವಣೆಯಲ್ಲಿ ಗೆದ್ದು ಒಮರ್ ಅಬ್ದುಲ್ಲಾ ನೇತೃತ್ವದ ಎನ್‌ಸಿ ಸರ್ಕಾರವು ಅಕ್ಟೋಬರ್ 16 ರಂದು ಪ್ರಮಾಣ ವಚನ ಸ್ವೀಕರಿಸಿದ ನಂತರ ಈ ಎನ್‌ಕೌಂಟರ್‌ಗಳು ಹೆಚ್ಚಾಗಿವೆ.



ಕಳೆದ 15 ದಿನಗಳಲ್ಲಿ ಕಣಿವೆ ರಾಜ್ಯಗಳು ಬಹುತೇಕ ದೈನಂದಿನ ಎನ್‌ಕೌಂಟರ್‌ಗಳಿಗೆ ಸಾಕ್ಷಿಯಾಗಿದೆ, ಕಳೆದ 15 ದಿನಗಳಲ್ಲಿ 11 ಘಟನೆಗಳು ನಡೆದಿವೆ. ಶ್ರೀನಗರ, ಜಮ್ಮು, ಕಿಶ್ತ್ವಾರ್, ಅನಂತನಾಗ್, ಕುಲ್ಗಾಮ್, ಬಾರಾಮುಲ್ಲಾ, ಕುಪ್ವಾರ ಮತ್ತು ಬಂಡಿಪೋರಾ ಜಿಲ್ಲೆಗಳಲ್ಲಿ ಭಯೋತ್ಪಾದಕರು ದಾಳಿ ನಡೆಸಿದ್ದಾರೆ. ಎನ್‌ಕೌಂಟರ್‌ಗಳು ನಡೆದ ಎಂಟು ಜಿಲ್ಲೆಗಳಲ್ಲಿ ಆರು ಕಾಶ್ಮೀರದಲ್ಲಿ ಮತ್ತು ಎರಡು ಜಮ್ಮು ಪ್ರದೇಶದಲ್ಲಿವೆ. ನವೆಂಬರ್ 2 ರಂದು ಶ್ರೀನಗರದ ಖಾನ್ಯಾರ್‌ನಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಪ್ರಮುಖ ಲಷ್ಕರ್ ಭಯೋತ್ಪಾದಕ ಉಸ್ಮಾನ್ ಲಷ್ಕರಿ ಸಾವನ್ನಪ್ಪಿ ನಾಲ್ವರು ಭದ್ರತಾ ಸಿಬ್ಬಂದಿ ಗಾಯಗೊಂಡರು. ಎರಡು ವರ್ಷಗಳ ನಂತರ ಶ್ರೀನಗರದಲ್ಲಿ ನಡೆದ ಮೊದಲ ಎನ್‌ಕೌಂಟರ್ ಇದಾಗಿದೆ. ಶ್ರೀನಗರದ ಕೊನೆಯ ಗುಂಡಿನ ಚಕಮಕಿಯು ಸೆಪ್ಟೆಂಬರ್ 20, 2022 ರಂದು ನೌಗಾಮ್ ಪ್ರದೇಶದಲ್ಲಿ ನಡೆದಿತ್ತು.

11 ಎನ್‌ಕೌಂಟರ್‌ಗಳಲ್ಲಿ ಹತರಾದ ಹೆಚ್ಚಿನ ಭಯೋತ್ಪಾದಕರು ಪಾಕಿಸ್ತಾನಿ ಪ್ರಜೆಗಳಾಗಿದ್ದಾರೆ. ಎನ್‌ಕೌಂಟರ್‌ಗಳ ಹೆಚ್ಚುತ್ತಿರುವುದು ಕಾಶ್ಮೀರ ಮತ್ತು ಜಮ್ಮು ಪ್ರದೇಶಗಳೆರಡರಲ್ಲೂ ಭಯೋತ್ಪಾದಕರು ನುಸುಳಿದ್ದಾರೆ ಎಂದು ಸೂಚಿಸುತ್ತದೆ ಎಂದು ಮಾಜಿ ಜೆ ಕೆ ಪೊಲೀಸ್ ಮುಖ್ಯಸ್ಥ ಎಸ್‌ಪಿ ವೈದ್ ಹೇಳಿದ್ದಾರೆ.

# ಜ್ವಾಲಾಮುಖಿ ಸ್ಫೋಟ



ಇಂಡೋನೇಷ್ಯಾದಲ್ಲಿ ಜ್ವಾಲಾಮುಖಿ ಸ್ಫೋಟಗೊಂಡಿದ್ದು, ಬಿಸಿ ಬೂದಿಯು ಮೋಡದಂತೆ ಆವರಿಸಿದ ಪರಿಣಾಮ ಇಂಡೋನೇಷ್ಯಾದಿಂದ ಬಾಲಿಗೆ ತೆರಳಬೇಕಿದ್ದ ಇಂಡಿಗೊ ಮತ್ತು ಏರ್ ಇಂಡಿಯಾ ವಿಮಾನವನ್ನು ರದ್ದುಪಡಿಸಲಾಗಿದೆ.

ಕಳೆದ ಗುರುವಾರದಿಂದ ಜ್ವಾಲಾಮುಖಿಯು ಪ್ರತಿದಿನ 2,000 ಮೀಟರ್ ಎತ್ತರದವರೆಗೆ ದಟ್ಟವಾದ ಕಂದುಬಣ್ಣದ ಬೂದಿಯನ್ನು ಉಗುಳುತ್ತಿದೆ.

ಭಾನುವಾರ ಮಧ್ಯರಾತ್ರಿ ನಂತರ ಸಂಭವಿಸಿದ ಜ್ವಾಲಾಮುಖಿ ಸ್ಫೋಟದಲ್ಲಿ ದಟ್ಟವಾದ ಕಂದುಬಣ್ಣದ ಬೂದಿಯನ್ನು ಉಗುಳಿದೆ. ಜ್ವಾಲಾಮುಖಿಯ ಬೂದಿ ಗಾಳಿಯೊಂದಿಗೆ ಸೇರಿ ದಟ್ಟ ಮೋಡಗಳಾಗಿ ಪರಿವರ್ತನೆಗೊಂಡು ವಿಮಾನ ಸಂಚಾರಕ್ಕೆ ಅಪಾಯವನ್ನುಂಟು ಮಾಡುವ ಸಾಧ್ಯತೆಗಳಿವೆ. ಹೀಗಾಗಿ ವಿಮಾನಯಾನವನ್ನು ರದ್ದುಗೊಳಿಸಲಾಗಿದೆ ಎಂದು ವರದಿಯಾಗಿದೆ.

ಈ ಬಗ್ಗೆ ಇಂಡಿಗೋ ತನ್ನ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದು, ಇಂಡೋನೇಷ್ಯಾದ ಬಾಲಿಯಲ್ಲಿ ಈಚೆಗೆ ಸಂಭವಿಸಿದ ಜ್ವಾಲಾಮುಖಿ ಸ್ಫೋಟದಿಂದಾಗಿ ಬೂದಿ ಮೋಡಗಳು ವಿಮಾನಗಳ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದ್ದು, ಹೀಗಾಗಿ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ ಎಂದು ಪೋಸ್ಟ್ ಮಾಡಿದೆ.

# ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## 'ಪುಷ್ಪ 2' ಬಳಿಕ ರಿಲೀಸ್ ಆಗಲಿದೆ ರಶ್ಮಿಕಾ ನಟನೆಯ ಬ್ಯಾಕ್ ಟು ಬ್ಯಾಕ್ ಚಿತ್ರಗಳು

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಬೇಡಿಕೆಯ ನಾಯಕಿಯಾಗಿ ಬ್ಯುಸಿಯಾಗಿದ್ದಾರೆ. 'ಪುಷ್ಪ 2' ರಿಲೀಸ್ ಬಳಿಕ ಮುಂದಿನ 10 ತಿಂಗಳಲ್ಲಿ ರಶ್ಮಿಕಾ ನಟನೆಯ ಸಾಲು ಸಾಲು ಸಿನಿಮಾಗಳು ರಿಲೀಸ್‌ಗೆ ಸಜ್ಜಾಗಿದೆ.

ರಶ್ಮಿಕಾ ಮಂದಣ್ಣ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟು 8 ವರ್ಷಗಳಾಗಿವೆ. ಕನ್ನಡದ 'ಕಿರಿಕ್ ಪಾರ್ಟಿ'ಯಿಂದ ಶುರುವಾದ ಅವರ ವೃತ್ತಿ ಜೀವನ ಇಂದು ಬಾಲಿವುಡ್ ಅಂಗಳಲ್ಲಿ ಕೊಡಗಿನ ಬೆಡಗಿ ಸದ್ದು ಮಾಡುತ್ತಿದ್ದಾರೆ. ಕಳೆದ ವರ್ಷ ಅನಿಮಲ್ ಸಿನಿಮಾ ಮೂಲಕ ಭರ್ಜರಿ ಸಕ್ಸಸ್ ಕಂಡರು. ಆ ನಂತರ ಅವರ ನಟನೆಯ ಯಾವುದೇ ಚಿತ್ರ ರಿಲೀಸ್ ಆಗಿರಲಿಲ್ಲ. ಇದೀಗ ಅವರ ಮುಂಬರುವ ಸಿನಿಮಾಗಳ ಮಾಹಿತಿ ಇಲ್ಲಿದೆ.

ಈ ವರ್ಷದ ಅಂತ್ಯದಲ್ಲಿ ಡಿಸೆಂಬರ್ 5ರಂದು ಬಹುನಿರೀಕ್ಷಿತ 'ಪುಷ್ಪ 2' ಚಿತ್ರ ರಿಲೀಸ್‌ಗೆ ಸಜ್ಜಾಗಿದೆ. ಆ ನಂತರ ಡಿ.6ರಂದು ವಿಕ್ಕಿ ಕೌಶಲ್ ಜೊತೆಗಿನ 'ಛಾವಾ' ತೆರೆಕಾಣಲಿದೆ. ಬಳಿಕ 2025ರ ಈದ್ ಹಬ್ಬದ ವೇಳೆ, ಸಲ್ಮಾನ್ ಖಾನ್ ಜೊತೆಗಿನ ಸಿಖಂದರ್ ಸಿನಿಮಾ ರಿಲೀಸ್ ಆಗಲಿದೆ. ಮುಂದಿನ ವರ್ಷ ದಿ ಗರ್ಲ್‌ಫ್ರೆಂಡ್, ಕುಬೇರ, ರೈನ್‌ಬೋ ಚಿತ್ರಗಳು ರಿಲೀಸ್‌ಗೆ ರೆಡಿಯಾಗಿದೆ.

ಇನ್ನೂ ರಶ್ಮಿಕಾ ಅವರು ಸ್ಟಾರ್ ನಟರ ಜೊತೆಗಿನ ಸಿನಿಮಾಗಳನ್ನು ಆಯ್ಕೆ ಮಾಡೋದಕ್ಕಿಂತ ಅವರ ಪಾತ್ರ ಮತ್ತು ಕಥೆಗೆ ಹೆಚ್ಚಿನ ಪ್ರಾಮುಖ್ಯತೆ ಕೊಡುತ್ತಾರೆ.





## ಪರಶುರಾಮನ ಅವತಾರದಲ್ಲಿ ವಿಕ್ಕಿ ಕೌಶಲ್



ಫಸ್ಟ್ ಲುಕ್ ಔಟ್

ಬಾಲಿವುಡ್ ನಟ ವಿಕ್ಕಿ ಕೌಶಲ್ ಅವರು ಎಂತಹದ್ದೇ ಪಾತ್ರ ಕೊಟ್ಟರೂ ಆ ಪಾತ್ರವೇ ತಾವಾಗಿ ನಟಿಸುತ್ತಾರೆ. ಸದಾ ಲವರ್ ಬಾಯ್ ಪಾತ್ರಗಳಲ್ಲಿ ನಟಿಸುತ್ತಿದ್ದ ವಿಕ್ಕಿ ಈಗ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಪೌರಾಣಿಕ ಚಿತ್ರದಲ್ಲಿ ಪರಶುರಾಮನ ಪಾತ್ರಕ್ಕೆ ಅವರು ಜೀವ ತುಂಬಿದ್ದಾರೆ. ಈ ಪಾತ್ರದ ಮೊದಲ ಲುಕ್ ಅನಾವರಣ ಆಗಿದೆ.

ಅಮರ್ ಕೌಶಿಕ್ ನಿರ್ದೇಶನದ 'ಮಹಾವತಾರ್' ಪೌರಾಣಿಕ ಸಿನಿಮಾದಲ್ಲಿ ವಿಕ್ಕಿ ಕೌಶಲ್ ಚಿರಂಜೀವಿ ಪರಶುರಾಮನಾಗಿ ಬಣ್ಣ ಹಚ್ಚಿದ್ದಾರೆ. ಈ ಸಿನಿಮಾದ ಎರಡು ಲುಕ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ. ಚಿತ್ರದ ಪೋಸ್ಟರ್ ನಲ್ಲಿ ನಟ ಉಗ್ರ ಅವತಾರ ತಾಳಿದ್ದಾರೆ. ಈ ಸಿನಿಮಾ ಮುಂದಿನ ಕ್ರಿಸ್ಮಸ್ 2026ರ ವೇಳೆ ರಿಲೀಸ್ ಆಗಲಿದೆ. ಈ ಚಿತ್ರವನ್ನು ದಿನೇಶ್ ವಿಜನ್ ನಿರ್ಮಾಣ ಮಾಡಿದ್ದಾರೆ.

ಇನ್ನೂ ಈ ಸಿನಿಮಾದ ಜೊತೆ ಆಲಿಯಾ ಭಟ್ ಜೊತೆ 'ಲವ್ ವಾರ್' ಚಿತ್ರವಿದೆ. ರಶ್ಮಿಕಾ ಜೊತೆ 'ಛಾವಾ' ಚಿತ್ರವಿದೆ. ಡಿ.6ರಂದು ಈ ಸಿನಿಮಾ ರಿಲೀಸ್ ಆಗಲಿದೆ.

## ದಳಪತಿ ವಿಜಯ್ ಕೊನೆಯ ಸಿನಿಮಾದಲ್ಲಿ ಶಿವಣ್ಣ



ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ಜೊತೆಗೆ ತೆಲುಗು ಮತ್ತು ತಮಿಳು ಸಿನಿಮಾಗಳಲ್ಲೂ ನಟ ಆಕ್ಟೀವ್ ಆಗಿದ್ದಾರೆ. ಇದೀಗ ಸಂದರ್ಶನವೊಂದರಲ್ಲಿ ದಳಪತಿ ವಿಜಯ್ ನಟನೆಯ ಕೊನೆಯ ಸಿನಿಮಾದಲ್ಲಿ ನಟಿಸುವ ಬಗ್ಗೆ ಸಿಹಿಸುದ್ದಿ ನೀಡಿದ್ದಾರೆ.

ಶಿವಣ್ಣ ಮಾತನಾಡಿ, 'ದಳಪತಿ 69' ಚಿತ್ರತಂಡವು ಒಂದೊಳ್ಳೆಯ ಪಾತ್ರ ಮಾಡಲು ನನ್ನನ್ನು ಅಪ್ರೋಚ್ ಮಾಡಿದ್ದು ನಿಜ. ಆ ಪಾತ್ರದ ಬಗ್ಗೆ ಕೇಳಿದಾಗ ಇಂಟರೆಸ್ಟಿಂಗ್ ಎಂದೆನಿಸಿತು. ಆದರೆ ಡೇಟ್ಸ್ ಅದೆಷ್ಟರ ಮಟ್ಟಿಗೆ ಹೊಂದಾಣಿಕೆ ಆಗಲಿದೆ ಎಂಬುದು ನನಗೆ ಗೊತ್ತಿಲ್ಲ. ನನ್ನ ಡೇಟ್ ನೋಡಿಕೊಂಡೆ ಎಲ್ಲವೂ ಪ್ಲ್ಯಾನ್ ಆಗುತ್ತದೆ ಅನಿಸುತ್ತದೆ.

ವಿಜಯ್ ಒಳ್ಳೆಯ ನಟ. ಇದು ಅವರ ಕೊನೆಯ ಸಿನಿಮಾ ಎಂದು ನಾವು ಹೇಳಲೇಬಾರದು. ಅವರು ಸಿನಿಮಾ ಮತ್ತು ರಾಜಕೀಯ ಎರಡನ್ನು ಚೆನ್ನಾಗಿಯೇ ತಿಳಿದುಕೊಂಡಿದ್ದಾರೆ. ಆದರೆ ವಿಜಯ್ ಸಿನಿಮಾ ಮಾಡೋದನ್ನು ಬಿಡಬಾರದು. ಅವರು ಚಿತ್ರಗಳನ್ನು ಮಾಡುತ್ತಲೇ ಇರಬೇಕು ಎಂದು ಶಿವಣ್ಣ ಮುಕ್ತವಾಗಿ ಹೇಳಿದ್ದಾರೆ. ಸದ್ಯ ವಿಜಯ್ ಸಿನಿಮಾದಲ್ಲಿ ಕನ್ನಡದ ನಟ ಕಾಣಿಸಿಕೊಳ್ಳುತ್ತಿರುವ ವಿಚಾರ ಕೇಳಿಯೇ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಇನ್ನೂ ಅದಷ್ಟೇ ಅಲ್ಲ, ತೆಲುಗು ನಟ ರಾಮ್ ಚರಣ್ ಜೊತೆ ಕೂಡ ಶಿವಣ್ಣ ಡಿಫರೆಂಟ್ ರೋಲ್‌ನಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಒಟ್ನಲ್ಲಿ ಶಿವಣ್ಣ ಫ್ಯಾನ್ಸ್‌ಗೆ ಬ್ಯಾಕ್ ಟು ಬ್ಯಾಕ್ ಸಿನಿಮಾಗಳ ಹಬ್ಬ ಎಂದೇ ಹೇಳಬಹುದು.



## ವರ್ಮಾ ಸೆಂಚುರಿ, ಆರ್ಶ್‌ದೀಪ್ ಬೌಲಿಂಗ್, ಅಕ್ಷರ್ ಸ್ಟನ್ನಿಂಗ್ ಕ್ಯಾಚ್: ಭಾರತಕ್ಕೆ ವಿಜಯ

ನಿರೀಕ್ಷೆಯಂತೆ ರನ್ ಮಳೆಯ ಪಂದ್ಯದಲ್ಲಿ ತಿಲಕ್ ವರ್ಮಾ ಅವರ ಅಜೇಯ ಶತಕ ಮತ್ತು ಕೊನೆಯಲ್ಲಿ ಆರ್ಶ್‌ದೀಪ್ ಸಿಂಗ್ ಅವರ ಅತ್ಯುತ್ತಮ ಬೌಲಿಂಗ್‌ನಿಂದಾಗಿ ಭಾರತ ಆಫ್ರಿಕಾ ವಿರುದ್ಧ 11 ರನ್‌ಗಳ ರೋಚಕ ಜಯ ಸಾಧಿಸಿದೆ. ಈ ಮೂಲಕ ಐದು ಪಂದ್ಯಗಳ ಸರಣಿಯಲ್ಲಿ 2-1 ಮುನ್ನಡೆ ಸಾಧಿಸಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ 6 ವಿಕೆಟ್ ನಷ್ಟಕ್ಕೆ 219 ರನ್ ಗಳಿಸಿತು. ಸವಾಲಿನ ಮೊತ್ತವನ್ನು ಬೆನ್ನಟ್ಟಿದ ದಕ್ಷಿಣ ಆಫ್ರಿಕಾ 7 ವಿಕೆಟ್ ನಷ್ಟಕ್ಕೆ 208 ರನ್ ಗಳಿಸಿ ಸೋಲೊಪ್ಪಿಕೊಂಡಿತು.

**ಮಿಲ್ಲರ್- ಕ್ಲಾಸನ್ ಆಸರೆ:** 84 ರನ್‌ಗಳಿಸುವಷ್ಟರಲ್ಲೊ ಆಫ್ರಿಕಾದ 4 ಮಂದಿ ಅಗ್ರ ಆಟಗಾರರು ಔಟಾದರು. ಈ ವೇಳೆ ಡೇವಿಡ್ ಮಿಲ್ಲರ್ ಮತ್ತು ಕ್ಲಾಸನ್ 35 ಎಸೆತಗಳಲ್ಲಿ 58 ರನ್ ಜೊತೆಯಾಟವಾಡಿ ಚೇತರಿಕೆ ನೀಡಿದರು.

ಪಾಂಡ್ಯ ಎಸೆದ ಬೌಲಿಂಗ್‌ನಲ್ಲಿ ಸಿಕ್ಸ್ ಸಿಡಿಸಲು ಹೋದ ಡೇವಿಡ್ ಮಿಲ್ಲರ್ ಅವರ ಕ್ಯಾಚನ್ನು ಅಕ್ಷರ್ ಪಟೇಲ್ ಬೌಂಡರಿ ಗೆರೆಯ ಬಳಿ ಗಾಳಿಯಲ್ಲಿ ಹಾರಿ ಹಿಡಿದು ಔಟ್ ಮಾಡುವ ಮೂಲಕ ರೋಚಕ ತಿರುವು ನೀಡಿದರು.

ಮಿಲ್ಲರ್ 18 ರನ್‌ಗಳಿಸಿ ಔಟಾದರೆ ಕ್ಲಾಸನ್ 41 ರನ್ (22 ಎಸೆತ, 1 ಬೌಂಡರಿ, 4 ಸಿಕ್ಸರ್) ಸಿಡಿಸಿ ವಿಕೆಟ್ ಒಪ್ಪಿಸಿದರು. ವಿಕೆಟ್ ಉರುಳುತ್ತಿದ್ದರೂ ಮಾರ್ಕೊ ಜಾನ್ಸೆನ್ ಸ್ಫೋಟಕ ಅರ್ಧಶತಕ ಸಿಡಿಸಿದರು. 54 ರನ್ (17 ಎಸೆತ, 4 ಬೌಂಡರಿ, 5 ಸಿಕ್ಸರ್) ಗಳಿಸಿದ್ದಾಗ ಆರ್ಶ್‌ದೀಪ್ ಎಸೆದ ಕೊನೆಯ ಓವರ್‌ನ ಮೂರನೇ ಎಸೆತದಲ್ಲಿ ಔಟಾದರು.

ಆರ್ಶ್‌ದೀಪ್ 3 ವಿಕೆಟ್ ಪಡೆದರೆ ವರುಣ್ ಚಕ್ರವರ್ತಿ 2 ವಿಕೆಟ್ ಕಿತ್ತರು. ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್ ತಲಾ ಒಂದೊಂದು ವಿಕೆಟ್ ಪಡೆದರು. ಇತರೇ ರೂಪದಲ್ಲಿ 5 ರನ್ (4 ಲೆಗ್ ಬೈ, 1 ವೈಡ್) ನೀಡಿದ್ದು ಭಾರತದ ಗೆಲುವಿಗೆ ಸಹಕಾರಿಯಾಯಿತು.







**ಸ್ಫೋಟಕ ಬ್ಯಾಟಿಂಗ್:** ಟಾಸ್ ಸೋತು ಭಾರತ ಇನ್ನಿಂಗ್ಸ್ ಆರಂಭಿಸುತ್ತಿದ್ದಂತೆ 2ನೇ ಎಸೆತದಲ್ಲೇ ಸಂಜು ಸ್ಯಾಮ್ಸನ್ ಕ್ಲೀನ್ ಬೌಲ್ಡ್ ಆದರು. ಬಳಿಕ 2ನೇ ವಿಕೆಟ್‌ಗೆ ಜೊತೆಗೂಡಿದ ತಿಲಕ್ ವರ್ಮಾ ಹಾಗೂ ಆರಂಭಿಕ ಅಭಿಷೇಕ್ ಶರ್ಮಾ ಎದುರಾಳಿ ಬೌಲರ್‌ಗಳನ್ನು ಹಿಗ್ಗಾಮುಗ್ಗ ಚಚ್ಚಿ, ಪವರ್ ಪ್ಲೇ ಹೊತ್ತಿಗೆ 70 ರನ್ ಕಲೆಹಾಕಿದ್ದರು. 2ನೇ ವಿಕೆಟ್‌ಗೆ ಈ ಜೋಡಿ 52 ಎಸೆತಗಳಲ್ಲಿ ಬರೋಬ್ಬರಿ 107 ರನ್ ಪೇರಿಸಿತ್ತು.

ಈ ವೇಳೆ ಅರ್ಧಶತಕ ಸಿಡಿಸಿ ಸ್ಫೋಟಕ ಬ್ಯಾಟಿಂಗ್ ಮಾಡುತ್ತಿದ್ದ ಅಭಿಷೇಕ್ ಶರ್ಮಾ ಸಿಕ್ಸರ್ ಸಿಡಿಸಲು ಯತ್ನಿಸಿ ಸ್ಟಂಪ್ ಔಟ್‌ಗೆ ತುತ್ತಾದರು. ಇದಾದ ಬಳಿಕ ಮಧ್ಯಮ ಕ್ರಮಾಂಕದಲ್ಲಿ ರಿಂಕು ಸಿಂಗ್ ಹಾಗೂ ತಿಲಕ್ ವರ್ಮಾ ಜೋರಿ 30 ಎಸೆತಗಳಲ್ಲಿ 58 ರನ್‌ಗಳ ಜೊತೆಯಾಟವೊಂದು ತಂಡದ ಬೃಹತ್ ಮೊತ್ತಕ್ಕೆ ಕಾರಣವಾಯಿತು.

**ವರ್ಮಾ ಚೊಚ್ಚಲ ಶತಕ:** ಮೊದಲ ಓವರ್‌ನಿಂದಲೇ ಹರಿಣರ ಬೌಲರ್‌ಗಳನ್ನು ಬೆಂಡೆತ್ತಿದ ತಿಲಕ್ 8 ಬೌಂಡರಿ ಹಾಗೂ 6 ಸಿಕ್ಸರ್‌ಗಳ ನೆರವಿನಿಂದ ಶತಕ ಪೂರೈಸಿದರು. ಈ ಮೂಲಕ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಶತಕ ಸಿಡಿಸಿದ ಭಾರತದ 11ನೇ ಆಟಗಾರ ಎಂಬ ಹೆಗ್ಗಳಿಕೆಗೆ ತಿಲಕ್ ವರ್ಮಾ ಪಾತ್ರರಾದರು. ಹಾಗೆಯೇ ದಕ್ಷಿಣ ಆಫ್ರಿಕಾ ವಿರುದ್ಧ ಈ ಸಾಧನೆ ಮಾಡಿದ ಭಾರತದ 5ನೇ ಆಟಗಾರ ಜೊತೆಗೆ ಭಾರತದ ಅತ್ಯಂತ ಕಿರಿಯ ಆಟಗಾರ ಎಂಬ ಹೆಗ್ಗಳಿಕೆಗೂ ಪಾತ್ರರಾದರು. ಒಟ್ಟಾರೆ 191.07 ಸ್ಟ್ರೇಕ್‌ರೇಟ್‌ನಲ್ಲಿ ಬ್ಯಾಟ್ ಬೀಸಿದ ತಿಲಕ್ ವರ್ಮಾ 56 ಎಸೆತಗಳಲ್ಲಿ 107 ರನ್ (7 ಸಿಕ್ಸರ್, 8 ಬೌಂಡರಿ) ಸಿಡಿಸಿ ಅಜೇಯರಾಗುಳಿದರು.

ಟೀಂ ಇಂಡಿಯಾ ಪರ 200 ಸ್ಟ್ರೈಕ್‌ರೇಟ್‌ನಲ್ಲಿ ಬ್ಯಾಟ್ ಬೀಸಿದ ಅಭಿಷೇಕ್ ಶರ್ಮಾ 25 ಎಸೆತಗಳಲ್ಲಿ ಸ್ಫೋಟಕ 50 ರನ್ (5 ಸಿಕ್ಸರ್, 3 ಬೌಂಡರಿ), ಹಾರ್ದಿಕ್ ಪಾಂಡ್ಯ 18 ರನ್, ರಮಣದೀಪ್ ಸಿಂಗ್ 15 ರನ್ ಗಳಿಸಿದರು. ಇದಲ್ಲದೇ 10 ವೈಡ್, 6 ಬೈಸ್, 3 ನೋಬಾಲ್ ಸೇರಿ 19 ರನ್ ಹೆಚ್ಚುವರಿ ಸೇರ್ಪಡೆಯಾಯಿತು.

## ಐಸಿಸಿ ರ್‍ಯಾಂಕಿಂಗ್ಸ್ ಪ್ರಕಟ: ಪಾಕ್ ಆಟಗಾರರು ನಂಬರ್ 1

ಐಸಿಸಿ ಏಕದಿನ ಶ್ರೇಯಾಂಕ ಪಟ್ಟಿಯನ್ನು ಪ್ರಕಟಿಸಿದೆ. ಒಡಿಐ ಬ್ಯಾಟರ್‌ಗಳ ರ್‍ಯಾಂಕಿಂಗ್ಸ್ ಪಟ್ಟಿಯಲ್ಲಿ ಪಾಕಿಸ್ತಾನ್ ತಂಡದ ಮಾಜಿ ನಾಯಕ ಬಾಬರ್ ಆಝಂ ಅಗ್ರಸ್ಥಾನ ಅಲಂಕರಿಸಿದ್ದಾರೆ. ಹಾಗೆಯೇ ಈ ಪಟ್ಟಿಯಲ್ಲಿ ಟೀಮ್ ಇಂಡಿಯಾದ ಮೂವರು ದಾಂಡಿಗರು ಕಾಣಿಸಿಕೊಂಡಿದ್ದಾರೆ.

ಇಲ್ಲಿ ಬಾಬರ್ ಆಝಂ 825 ಅಂಕಗಳೊಂದಿಗೆ ಅಗ್ರಸ್ಥಾನ ಅಲಂಕರಿಸಿದರೆ, ರೋಹಿತ್ ಶರ್ಮಾ 765 ಅಂಕಗಳೊಂದಿಗೆ ದ್ವಿತೀಯ ಸ್ಥಾನದಲ್ಲಿದ್ದಾರೆ. ಹಾಗೆಯೇ 763 ಅಂಕಗಳನ್ನು ಹೊಂದಿರುವ ಶುಭ್‌ಮನ್ ಗಿಲ್ ಮೂರನೇ ಸ್ಥಾನದಲ್ಲಿದ್ದರೆ, ವಿರಾಟ್ ಕೊಹ್ಲಿ 746 ಅಂಕಗಳೊಂದಿಗೆ ನಾಲ್ಕನೇ ಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ.



ಅತ್ತ ಬೌಲಿಂಗ್ ವಿಭಾಗದಲ್ಲಿ ಅಗ್ರ ಹತ್ತರಲ್ಲಿ ಟೀಮ್ ಇಂಡಿಯಾದ ಮೂವರು ಬೌಲರ್‌ಗಳು ಸ್ಥಾನ ಪಡೆದಿದ್ದಾರೆ. ಈ ಪಟ್ಟಿಯಲ್ಲಿ ಪಾಕಿಸ್ತಾನ್ ತಂಡದ ಎಡಗೈ ವೇಗಿ ಶಾಹೀನ್ ಶಾ ಅಫ್ರಿದಿ ಅಗ್ರಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

696 ಅಂಕಗಳೊಂದಿಗೆ ಶಾಹೀನ್ ಶಾ ಅಫ್ರಿದಿ ಮೊದಲ ಸ್ಥಾನದಲ್ಲಿದ್ದರೆ, 687 ಪಾಯಿಂಟ್ಸ್ ಹೊಂದಿರುವ ಅಫ್ಘಾನಿಸ್ತಾನದ ರಶೀದ್ ಖಾನ್ ದ್ವಿತೀಯ ಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ. ಇನ್ನು ಸೌತ್ ಆಫ್ರಿಕಾದ ಕೇಶವ್ ಮಹಾರಾಜ್ (674) ಹಾಗೂ ಭಾರತದ ಕುಲ್ದೀಪ್ ಯಾದವ್ (665) ನಂತರದ ಸ್ಥಾನಗಳಲ್ಲಿದ್ದಾರೆ.

ಇನ್ನು ಏಕದಿನ ಕ್ರಿಕೆಟ್ ಆಲ್‌ರೌಂಡರ್‌ಗಳ ಪಟ್ಟಿಯಲ್ಲಿ ಅಫ್ಘಾನಿಸ್ತಾನದ ಮೊಹಮ್ಮದ್ ನಬಿ ಅಗ್ರಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ. ಒಟ್ಟು 318 ಅಂಕಗಳೊಂದಿಗೆ ನಬಿ ಮೊದಲ ಸ್ಥಾನವನ್ನು ಅಲಂಕರಿಸಿದರೆ, ಝಿಂಬಾಬ್ವೆಯ ಸಿಕಂದರ್ ರಾಝ (288) ದ್ವಿತೀಯ ಸ್ಥಾನದಲ್ಲಿದ್ದಾರೆ. ಹಾಗೆಯೇ ಅಫ್ಘಾನ್ ಆಲ್‌ರೌಂಡರ್ ರಶೀದ್ ಖಾನ್ (254) ಈ ಪಟ್ಟಿಯಲ್ಲಿ ಮೂರನೇ ಸ್ಥಾನ ಅಲಂಕರಿಸಿದ್ದಾರೆ. ಇದಾಗ್ಯೂ ಟೀಮ್ ಇಂಡಿಯಾದ ಯಾವುದೇ ಆಲ್‌ರೌಂಡರ್ ಟಾಪ್-10 ಪಟ್ಟಿಯಲ್ಲಿ ಕಾಣಿಸಿಕೊಂಡಿಲ್ಲ.

## ಪರಿಸರ ಸಂರಕ್ಷಣೆ - ನಮ್ಮೆಲ್ಲರ ಹೊಣೆ

### ಆಚಾರ್ಯ ಕಾಲೇಜಿನ ಪ್ರೊಫೆಸರ್ ನಾಗರಾಜ್ ಕೆ.ಸಿ.

ಬಿಬಿಎಂಪಿ ಇಂದ ರಚಿಸಿರುವ ಪರಿಸರ ಸಂರಕ್ಷಣೆ, ವಾಯುಮಾಲಿನ್ಯ ತಡೆಗಟ್ಟುವಿಕೆ, ಕುರಿತಾದ ಸಮುದಾಯ ಜಾಥಾ ಕಾರ್ಯಕ್ರಮವನ್ನು, ವಾಯುವಿಹಾರಿಗಳ ಸಂಘ (ರಿ.) ದ ಸಹಯೋಗದೊಂದಿಗೆ, ಬಾಗಲುಗುಂಟೆಯ ಬೀದಿ ಬೀದಿಗಳಲ್ಲಿ, ನವೆಂಬರ್ 10, ಭಾನುವಾರದಂದು ನಡೆಸಲಾಯಿತು. ಸಾರ್ವಜನಿಕರಲ್ಲಿ ವಾಯುಮಾಲಿನ್ಯ ತಡೆಗಟ್ಟುವಿಕೆ, ಪರಿಸರ ಸಂರಕ್ಷಣೆಯ ಕುರಿತಾದ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು.

ಈ ಜಾಥಾ ಕಾರ್ಯಕ್ರಮದ ಮುಂದಾಳತ್ವವನ್ನು ವಹಿಸಿದ್ದ ಆಚಾರ್ಯ ಇಂಜಿನಿಯರಿಂಗ್ ಕಾಲೇಜಿನ ಪ್ರೊಫೆಸರ್ ಆದ, ಡಾ. ನಾಗರಾಜ್ ಕೆ.ಸಿ. ಅವರು ಸಾರ್ವಜನಿಕರನ್ನು ಕುರಿತು ಮಾತನಾಡಿ, ಪರಿಸರ ಸಂರಕ್ಷಣೆ ನಮ್ಮ ನಿಮ್ಮೆಲ್ಲರ ಹೊಣೆ, ದಯಮಾಡಿ ತಮ್ಮ ತಮ್ಮ ಲಘುವಾಹನಗಳನ್ನು ಬಳಸುವ ಬದಲು, ಸಾರ್ವಜನಿಕ ವಾಹನಗಳನ್ನು ಬಳಸುವ ಮೂಲಕ ವಾಯುಮಾಲಿನ್ಯವನ್ನು ತಡೆಗಟ್ಟಲು ಪ್ರಯತ್ನಿಸೋಣ ಎಂದರು.



ಈ ಕಾರ್ಯಕ್ರಮದಲ್ಲಿ ವಾಯುವಿಹಾರಿಗಳ ಸಂಘದ ಅಧ್ಯಕ್ಷರಾದ ಗೋವಿಂದರಾಜು, ಉಪಾಧ್ಯಕ್ಷರಾದ ಮುನಿರಾಜು, ಖಜಾಂಚಿಗಳಾದ ಶಿವಶಂಕರ್, ಸಂಘದ ಎಲ್ಲಾ ಸದಸ್ಯರು ಹಾಗು ಬಿಬಿಎಂಪಿ ಪ್ರತಿನಿಧಿಯಾಗಿ ಭರತ್ ರವರು ಜಾಥಾದಲ್ಲಿ ಪಾಲ್ಗೊಂಡರು.

### ದರ್ಶನ್ ಮಧ್ಯಂತರ ಜಾಮೀನು ತಡೆ ಕೋರಿ ಸುಪ್ರೀಂಗೆ ಮೇಲ್ಮನವಿ

## ಗೃಹ ಸಚಿವ ಪರಮೇಶ್ವರ್ ಅಚ್ಚರಿಯ ಹೇಳಿಕೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ದೊರೆತಿರುವ ಮಧ್ಯಂತರ ಜಾಮೀನು ತಡೆ ಕೋರಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ವಿಚಾರವಾಗಿ ಕರ್ನಾಟಕ ಗೃಹ ಸಚಿವ ಡಾ. ಜಿ ಪರಮೇಶ್ವರ ಅಚ್ಚರಿಯ ಹೇಳಿಕೆ ನೀಡಿದ್ದಾರೆ. ಮಧ್ಯಂತರ ಜಾಮೀನು ತಡೆ ಕೋರಿ ಮೇಲ್ಮನವಿ ಸಲ್ಲಿಕೆಗೆ ವಿಳಂಬ ಆಗಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಪರಮೇಶ್ವರ್, ಮೇಲ್ಮನವಿ ಯಾವಾಗ ಸಲ್ಲಿಸಬೇಕು ಎಂಬುದನ್ನು ಗೃಹ ಇಲಾಖೆ ಕಾರ್ಯದರ್ಶಿ ತೀರ್ಮಾನಿಸುತ್ತಾರೆ. ಮೇಲ್ಮನವಿ ಸಲ್ಲಿಸುವುದಾದರೆ ಸಲ್ಲಿಸಿ ಎಂದು ನಾನೂ ಸೂಚಿಸಿದ್ದೇನೆ. ಇಂಥ ಪ್ರಕರಣಗಳಲ್ಲಿ ಪ್ರಕ್ರಿಯೆಗಳನ್ನು ಅನುಸರಿಸಿ ಮುಂದುವರಿಯಬೇಕಾಗುತ್ತದೆ ಎಂದರು.

ಮೇಲ್ಮನವಿ ಸಲ್ಲಿಕೆ ವಿಚಾರವಾಗಿ ಕಾನೂನು ಇಲಾಖೆಯಿಂದಲೂ ಮಾಹಿತಿ ತೆಗೆದುಕೊಳ್ಳಬೇಕು. ಪೊಲೀಸ್ ಇಲಾಖೆಯಿಂದಲೂ ಕೂಡ ಪ್ರಸ್ತಾವನೆ ಬರಬೇಕು. ನಂತರವೇ ಸರ್ಕಾರ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಪರಮೇಶ್ವರ್ ಹೇಳಿದರು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ2 ಆಗಿರುವ ದರ್ಶನ್‌ಗೆ ಷರತ್ತುಬದ್ಧ ಮಧ್ಯಂತರ ಜಾಮೀನು ದೊರೆತಿದ್ದು ಅವರು ಜೈಲಿನಿಂದ ಬಿಡುಗಡೆಯಾಗಿ ಕೆಲವು ದಿನಗಳಾಗಿವೆ. ಅವರು ಬೆನ್ನು ನೋವಿನಿಂದ ಬಳಲುತ್ತಿದ್ದಾರೆ ಎನ್ನಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ.

**ಮುಸ್ಲಿಮರಿಗೆ ಮೀಸಲಾತಿ ವಿಚಾರದಲ್ಲಿ ತಪ್ಪು ಗ್ರಹಿಕೆ: ಪರಮೇಶ್ವರ್:** ಸರ್ಕಾರದ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ವಿಚಾರದಲ್ಲಿ ತಪ್ಪು ಗ್ರಹಿಕೆ ಆಗಿದೆ ಎಂದು ಸಚಿವ ಪರಮೇಶ್ವರ್ ಹೇಳಿದರು. ಈ ವಿಚಾರವಾಗಿ ಸಿಎಂಗೆ ಕೆಲವು ಶಾಸಕರು, ಮುಖಂಡರು ಮನವಿ ಪತ್ರ ಸಲ್ಲಿಸಿದ್ದರು. ಆ ಪತ್ರ ಪರಿಶೀಲನೆಗೆ ಅಲ್ಪಸಂಖ್ಯಾತ ಇಲಾಖೆಗೆ ಸಿಎಂ ಸೂಚನೆ ನೀಡಿದ್ದರು. ಇಷ್ಟು ಬಿಟ್ಟರೆ ಬೇರೇನೂ ಆಗಿಲ್ಲ. ಏನೇ ತೀರ್ಮಾನ ಆದರೂ ಸಂಪುಟ ಸಭೆಯಲ್ಲಿ ಆಗಬೇಕು. ಪರಿಶೀಲನೆ ಮಾಡಿ ಎಂದು ಹೇಳಿದ ತಕ್ಷಣ ತೀರ್ಮಾನ ಆದಂತೆ ಅಲ್ಲ ಎಂದು ಅವರು ಹೇಳಿದರು.

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹಾಗೂ ಮಾಜಿ ಆರೋಗ್ಯ ಸಚಿವ ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್‌ಗೆ ಶಿಫಾರಸು ವಿಚಾರವಾಗಿ ಪ್ರತಿಕ್ರಿಯಿಸಿ, ಕೋವಿಡ್ ಕಾಲದಲ್ಲಿ ನಡೆದ ಅಕ್ರಮಗಳಿಗೆ ಬೇರೆ ಬೇರೆ ಆಯಾಮವಿದೆ. ಬೆಡ್, ಔಷಧ, ಪಿಪಿಇ ಕಿಟ್, ಟೆಸ್ಟ್ ಕಿಟ್ ಖರೀದಿ ವಿಚಾರಗಳಿವೆ. ಸಂಪುಟ ಉಪಸಮಿತಿ ಅಧ್ಯಯನ ನಡೆಸಿ ತೀರ್ಮಾನಕ್ಕೆ ಬರಲಿದೆ ಎಂದರು.

ಸಂಪುಟ ಉಪಸಮಿತಿಯ ತೀರ್ಮಾನವನ್ನು ಸಂಪುಟದ ಮುಂದೆ ಇಡುತ್ತೇವೆ. ನಾಳೆ ನಡೆಯುವ ಸಂಪುಟ ಸಭೆಯಲ್ಲಿ ಈ ವಿಚಾರ ಚರ್ಚೆ ಆಗಲ್ಲ. ಇನ್ನೂ ಸಂಪುಟ ಉಪಸಮಿತಿ ಸಭೆಯನ್ನೇ ಮಾಡಿಲ್ಲ. ಡಿಸಿಎಂ ಅವರೇ ಸಂಪುಟ ಉಪಸಮಿತಿ ಅಧ್ಯಕ್ಷರು, ನಾವು ಸದಸ್ಯರು. ಮೊದಲು ಸಂಪುಟ ಉಪ ಸಮಿತಿಯಲ್ಲಿ ಚರ್ಚೆ ಆಗಬೇಕು ಎಂದು ಪರಮೇಶ್ವರ್ ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com